24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 110 | ನವದೆಹಲಿ | ಬೆಲೆ ₹10 | ಅಕ್ಟೋಬರ್, 16, 2026, ಶುಕ್ರವಾರ



## ನಿತ್ಯ ಪಂಚಾಂಗ 16.10.2026 ಶುಕ್ರವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ-ಆಶ್ವಯುಜ ಮಾಸ

ಆಶ್ವಯುಜ ಶುದ್ಧ, ಷಷ್ಠಿ,
ಮೂಲ ನಕ್ಷತ್ರ, ಸದಸ್ವತೀ ಪೂಜೆ ಆವಾಹನ,
ಸೂಡಿ ಶಿವಾಚಾರ್ಯ ಪುಣ್ಯದಿನ,,
ಸೂಡಿ ಜುಕ್ಕಿಮಠ ಉಮಾಪತಿ ಆರಾಧನೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಸ್ಟಿಂಗ್ ಆಪರೇಷನ್ ತನಿಖೆಗೆ ಪಟ್ಟು: ಪೊಲೀಸ್ ಆಯುಕ್ತರ ಕಚೇರಿ ಎದುರು ಎಚ್‌ಡಿಕೆ ಧರಣಿ



**ಬೆಂಗಳೂರು, ಅ.15:** ರಾಜ್ಯ ರಾಜಕಾರಣದಲ್ಲಿ ಸದ್ದು ಮಾಡುತ್ತಿರುವ ಸ್ಟಿಂಗ್ ಆಪರೇಷನ್ ಪ್ರಕರಣ ಸಂಬಂಧ ತನಿಖೆಗೆ ಆಗ್ರಹಿಸಿ ಬೆಂಗಳೂರು ಪೊಲೀಸ್ ಆಯುಕ್ತರ ಕಚೇರಿ ಮೆಟ್ಟಿಲುಗಳ ಮೇಳೆ ಕುಳಿತು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಗುರುವಾರ ಪ್ರತಿಭಟನೆ ನಡೆಸಿದರು.

ಕುಮಾರಸ್ವಾಮಿಯವರನ್ನು ಮನವೊಲಿಸಲು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಯತ್ನಿಸಿದ್ದು, ಪ್ರಕರಣದ ಪ್ರಮುಖ ವ್ಯಕ್ತಿಯನ್ನು ನೀವು ಇನ್ನೂ ಮುಟ್ಟಿಯೇ ಇಲ್ಲ. ಗೃಹ ಸಚಿವರ ಜೊತೆ ಅದೇನು ಮಾತನಾಡಿ ಹೇಳಿ ಎಂದು ಕೇಂದ್ರ ಸಚಿವರು ಪಟ್ಟುಹಿಡಿದ ಪ್ರಸಂಗ ನಡೆದಿದೆ.

ನಮಗೆ ಭಯ ಹುಟ್ಟಿಸುತ್ತೇವೆ ಎಂದರೆ ನಾವು ಭಯ ಪಡುವುದಿಲ್ಲ. ಬೆಳಗ್ಗೆ ಏರುಧ್ವನಿಯಲ್ಲಿ ಮಾತನಾಡಿದೆ, ಅದು ಮನುಷ್ಯನ ಸಹಜ ಗುಣ. ಮನವರಿಕೆ ಆದಮೇಲೆ ನಾನು ನಾಡಿನ ಜನತೆಗೆ ಕ್ಷಮೆ ಕೇಳಿದ್ದೇನೆ. ಗೃಹ ಸಚಿವರಿಗೆ ಬರಲು ಹೇಳಿ, ಏನು ಮಾಡ್ತಾರೋ ನೋಡೋಣ. ಮಾಜಿ ಸಿಎಂ ವಿರುದ್ಧ ಅಪಪ್ರಚಾರ ಮಾಡಿದ ವ್ಯಕ್ತಿ ಕಾಪಾಡಿದ್ದು ಏಕೆ. ಸಿದ್ದರಾಮಯ್ಯಗೆ ಬೆಂಬಲ ನೀಡಿದ್ದೇವೆ, ಆದರೆ, ಅವರೇ ಮೌನವಾಗಿದ್ದಾರೆ ಎಂದು ಧರಣಿ ಸ್ಥಳದಲ್ಲಿ ಕುಮಾರಸ್ವಾಮಿ ಹೇಳಿದ್ದಾರೆ.

ನಮ್ಮ ಕಾರ್ಯಕರ್ತರು ಹಾಗೂ ನನ್ನನ್ನೂ ವಿಚಾರಣೆಗೆ ಒಳಪಡಿಸುತ್ತಾರೆ ಎಂದರೂ ನಾವು ಸಿದ್ಧ. ಆದ್ರೆ ಮೂಲ ವ್ಯಕ್ತಿ ರಾಕೇಶ್ ಶೆಟ್ಟಿಯನ್ನು ಬಂಧಿಸಿ. ನಮ್ಮ ಯಾವ ಕಾರ್ಯಕರ್ತ ಮೇಲೆ ಅನುಮಾನ ಇದೆ ಹೇಳಿ ಕಳುಹಿಸುತ್ತವೆ. ಇಲ್ಲಾ ನಾನೇ ಬೇಕು ಅಂದರೂ ಬರುತ್ತೇನೆ. ಸರ್ಕಾರಕ್ಕೆ ಎಲ್ಲ ರೀತಿಯಲ್ಲಿ ಸಹಕಾರ ಕೊಡುತ್ತೇನೆ. ಮೂಲ ವ್ಯಕ್ತಿಯ ಬಂಧಿಸಲಿಲ್ಲ ಅಂದರೆ ನಾವು ಹೋರಾಟ ಮಾಡುತ್ತೇವೆ. ಎರಡು ದಿನದಲ್ಲಿ ಬಂಧನ ಆಗದಿದ್ದರೆ ದೊಡ್ಡಮಟ್ಟದಲ್ಲಿ ತೀರ್ಮಾನ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

## ಸಿದ್ದರಾಮಯ್ಯ ಪದಚ್ಯುತಿಗೆ ಡಿಕೆಶಿ ಹಾಗೂ ಬ್ಲ್ಯಾಕ್‌ಮೇಲ್ ಪತ್ರಕರ್ತನಿಂದ ಸಂಚು: ಎಚ್‌ಡಿಕೆ ಗಂಭೀರ ಆರೋಪ

ಹಾಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹಾಗೂ ಬ್ಲ್ಯಾಕ್‌ಮೇಲ್ ಪತ್ರಕರ್ತ ಇಬ್ಬರು ಸ್ಟಿಂಗ್ ಆಪರೇಶನ್ ಸಂಚು ಮಾಡಿ ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿದರು ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಗಂಭೀರ ಆರೋಪ ಮಾಡಿದರು. ಜೆಡಿಎಸ್ ಪಕ್ಷದ ಕೇಂದ್ರ ಕಚೇರಿ ಜೆಪಿ ಭವನದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಎಚ್.ಡಿ. ಕುಮಾರಸ್ವಾಮಿ, ಮುಖ್ಯಮಂತ್ರಿ ಮತ್ತು ಒಬ್ಬ ಕೆಟ್ಟ ಪತ್ರಕರ್ತ ಹೂಡಿದ ಸಂಚಿಗೆ ಸಿದ್ದರಾಮಯ್ಯ ಬಲಿಯಾದರು. ಸಿದ್ದರಾಮಯ್ಯ ಅವರ ಚಾರಿತ್ರ್ಯಹರಣ ಮಾಡಲು ರಾಜಕೀಯ ಸಂಚು ರೂಪಿಸಿದ ಡಿ.ಕೆ.ಶಿವಕುಮಾರ್ ಸಿಂಡಿಕೇಟಿನಲ್ಲಿ ಇದ್ದ ಎಲ್ಲರನ್ನು ಬಂಧಿಸಬೇಕು ಹಾಗೂ ಈ ಮುಖ್ಯಮಂತ್ರಿಯನ್ನು 'ಕರ್ನಾಟಕದ ಸ್ಟಿಂಗ್ ಸಾಮ್ರಾಟ್' ಎಂದು ಕರೆಯಬೇಕೆಂದು ಸಚಿವ ಕುಮಾರಸ್ವಾಮಿ ಅವರು ಹೇಳಿದರು. ಸಿದ್ದರಾಮಯ್ಯ ಅವರನ್ನು ಕುರ್ಚಿಯಿಂದ ಕೆಳಗೆ ಇಳಿಸಲು ಇವರು ಎಲ್ಲಾ ರೀತಿಯ ಸಂಚು ರೂಪಿಸಿ ಅದನ್ನು ಕಾರ್ಯಗತ ಮಾಡುವಲ್ಲಿ ಯಶಸ್ವಿಯಾದರು. ಕಾಂಗ್ರೆಸ್ ಹೈಕಮಾಂಡ್ ಕೂಡ ಇವರ ಸಂಚಿನಿಂದ ದಾರಿತಪ್ಪಿತು ಎಂದು ಸಚಿವರು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್‌ಬಾಬು, ವಿಧಾನ ಪರಿಷತ್ ಸದಸ್ಯ ಎನ್. ಜವರಾಯಿಗೌಡ, ಮಾಜಿ ಶಾಸಕರಾದ ಚೌಡರೆಡ್ಡಿ, ಎ.ಮಂಜುನಾಥ್, ಸುರೇಶ್‌ಗೌಡ, ಪಕ್ಷದ ರಾಜ್ಯ ವಕ್ತಾರರಾದ ದೇವರಾಜು, ನಾಗೇಂದ್ರ ಬಾಬು ಮುಂತಾದವರು ಉಪಸ್ಥಿತರಿದ್ದರು.

## ಎಚ್‌ಡಿಕೆ ಎಲ್ಲ ಆರೋಪಗಳಿಗೆ ಉತ್ತರ ಕೊಡಲಾಗಲ್ಲ: ಖರ್ಗೆ



**ಬೆಂಗಳೂರು, ಅ.15:** ಸ್ಟಿಂಗ್ ಆಪರೇಷನ್‌ಗೆ ಸಂಬಂಧಿಸಿದಂತೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ಗೃಹ ಸಚಿವ ಪ್ರಿಯಾಂಕ್ ಖರ್ಗೆ ನಡುವಿನ ವಾಕ್ಸಮರ ತೀವ್ರ ಸ್ವರೂಪ ಪಡೆದುಕೊಂಡಿವೆ.

ಕುಮಾರಸ್ವಾಮಿ ಅವರ ಎಲ್ಲಾ ಆರೋಪಕ್ಕೆ ಉತ್ತರ ಕೊಡುವುದಕ್ಕೆ ಆಗಲ್ಲ. ನಮಗೆ ದೂರು ಬಂದಿದೆ. ಹೀಗಾಗಿ ಕೆಲವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದೇವೆ. ಸಂಶಯ ಬಂದರೆ ಕುಮಾರಸ್ವಾಮಿ ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತೇವೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಗುರುವಾರ ಮಾತನಾಡಿದ ಅವರು, ಕುಮಾರಸ್ವಾಮಿ ಅವರು ಏಕವಚನದಲ್ಲಿ ಮಾತನಾಡಿದ ತಕ್ಷಣ ಪ್ರಿಯಾಂಕ್ ಖರ್ಗೆ ಹೆದರಿಕೊಳ್ಳುತ್ತಾನೆ, ನಮ್ಮನ್ನು ಹೆದರಿಸಬಹುದು, ಬೆದರಿಸಬಹುದು ಅಂದುಕೊಂಡಿದ್ದರೆ ಅದು ಅವರ ಭ್ರಮೆ.

ಅವರು ಮರ್ಯಾದೆ ಕೊಟ್ಟು ಮಾತನಾಡಿದರೆ ನಾವು ಕೇಳಲು ರೆಡಿ ಇದ್ದೇವೆ. ಆದರೆ ಅವರು ನಮಗೆ ಯಾವ ಭಾಷೆಯಲ್ಲಿ ಮಾತನಾಡುತ್ತಾರೋ, ಅದೇ ಭಾಷೆಯಲ್ಲಿ ಅವರಿಗೆ ಪ್ರತ್ಯುತ್ತರ ನೀಡಲು ನಾವು ಸಂಪೂರ್ಣ ಸಿದ್ಧರಿದ್ದೇವೆ ಎಂದು ಎಚ್ಚರಿಸಿದರು.

'ತಾಕತ್ತಿದ್ದರೆ ನನ್ನನ್ನು ಬಂಧಿಸಲಿ' ಎಂಬ ಕುಮಾರಸ್ವಾಮಿ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಪ್ರಿಯಾಂಕ್ ಖರ್ಗೆ, "ಸುಮ್ಮನೆ ಬಂಧಿಸಲು ಹೇಗೆ ಸಾಧ್ಯ, ಬಂಧಿಸುವುದನ್ನು ಅವರಿಂದ ನಾನು ಕಲಿಯಬೇಕಾಗಿಲ್ಲ. ಮೊದಲು ತಾಕತ್ತಿದ್ದರೆ ನಿಮ್ಮ ಬಳಿ ಇರುವ ದಾಖಲೆಗಳನ್ನು ಕೊಡಿ. ನಿಮ್ಮ ಬಳಿ ಸಾಕ್ಷ್ಯಾಧಾರಗಳಿದ್ದು, ನೀವು ತಪ್ಪು ಮಾಡಿದ್ದರೆ ನಿಮ್ಮನ್ನು ಖಂಡಿತವಾಗಿಯೂ ಬಂಧನ ಮಾಡೇ ಮಾಡುತ್ತೇವೆ. ಗಾಳಿಯಲ್ಲಿ ಗುಂಡು ಹಾರಿಸುವುದನ್ನು ಬಿಟ್ಟು ಮಾಹಿತಿ ಹಾಗೂ ದಾಖಲೆಗಳಿದ್ದರೆ ಕೊಡಿ ಎಂದು ನಾವು ಮೊದಲಿನಿಂದಲೂ ಹೇಳುತ್ತಿದ್ದೇವೆ. ದಾಖಲೆಗಳಿದ್ದರೆ ಕಮೀಷನರ್ ಕಚೇರಿಯಲ್ಲೇ ದೂರು ಕೊಡಲಿ ಎಂದು ಕಿಡಿಕಾರಿದರು.

## ಎಸ್‌ಐಆರ್ ವಿರುದ್ಧ ಹೋರಾಟ ರೂಪುರೇಷೆ ಸಿದ್ಧಪಡಿಸಲು ಇಂದು ಇಂಡಿಯಾ ಒಕ್ಕೂಟ ಸಭೆ



**ಬೆಂಗಳೂರು, ಅ.15:** ದೇಶದ ಪ್ರಜಾಪ್ರಭುತ್ವ ವ್ಯವಸ್ಥೆ, ಸಂವಿಧಾನದ ಮೌಲ್ಯಗಳು ಹಾಗೂ ನಾಗರಿಕರ ಮತದಾನದ ಹಕ್ಕಿನ ರಕ್ಷಣೆಗಾಗಿ ಸಂಘಟಿತ ಹೋರಾಟ ರೂಪಿಸಲು ಶಾಸಕರ ಭವನದಲ್ಲಿ ಅ.16ರಂದು 'ಇಂಡಿಯಾ' ಮೈತ್ರಿಕೂಟದ ರಾಜ್ಯಮಟ್ಟದ ಸಭೆ ಆಯೋಜಿಸಲಾಗಿದೆ.

ಈ ಕುರಿತು ಮಾಹಿತಿ ನೀಡಿದ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್, 'ಮತ ಉಳಿಸಿ–ದೇಶ ಉಳಿಸಿ' ಘೋಷವಾಕ್ಯದಡಿ ನಡೆಯಲಿರುವ ಸಭೆಯಲ್ಲಿ ಮಿತ್ರ ಪಕ್ಷಗಳಾದ ಸಿಪಿಐ(ಎಂ), ಸಿಪಿಐ (ಎಂಎಲ್), ಸಮಾಜವಾದಿ ಪಕ್ಷ ಸೇರಿದಂತೆ ಹಲವು ರಾಜಕೀಯ ಪಕ್ಷಗಳ ಮುಖಂಡರು ಭಾಗವಹಿಸಲಿದ್ದಾರೆ. ಅಂದು ಬೆಳಿಗ್ಗೆ 10ಕ್ಕೆ ಸಭೆ ಆರಂಭವಾಗಲಿದೆ' ಎಂದು ಮಾಹಿತಿ ನೀಡಿದರು. ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯ ಸುತ್ತಲ ವಿವಾದಗಳು, ಅರ್ಹ ಮತದಾರರ ಹೆಸರು ಪಟ್ಟಿಯಿಂದ ಕೈಬಿಡಲಾಗುತ್ತಿದೆ ಎಂಬ ಆರೋಪಗಳು ಹಾಗೂ ಚುನಾವಣಾ ಆಯೋಗದ ಕಾರ್ಯವೈಖರಿಯ ಬಗ್ಗೆ ವ್ಯಕ್ತವಾಗಿರುವ ಆತಂಕಗಳ ಕುರಿತು ಚರ್ಚೆ ನಡೆಸಲಾಗುವುದು ಎಂದರು.

**ಜಂಟಿ ಹೋರಾಟಕ್ಕೆ ರೂಪುರೇಷೆ**

ಸಾಂವಿಧಾನಿಕ ಸಂಸ್ಥೆಗಳ ಸ್ವಾಯತ್ತತೆ, ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆ ಹಾಗೂ ಪ್ರಜಾಪ್ರಭುತ್ವದ ವಿಶ್ವಾಸಾರ್ಹತೆ ಕಾಪಾಡಲು ಮೈತ್ರಿಕೂಟದ ಪಕ್ಷಗಳು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಲಿವೆ ಎಂದು ಹರಿಪ್ರಸಾದ್ ಹೇಳಿದರು. ರಾಜ್ಯ, ಜಿಲ್ಲೆ ಹಾಗೂ ತಳಮಟ್ಟದಲ್ಲಿ ಮೈತ್ರಿಕೂಟದ ಸಮನ್ವಯವನ್ನು ಬಲಪಡಿಸುವುದು, ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಮತ್ತು ಮುಂದಿನ ಹಂತದ ಜಂಟಿ ಹೋರಾಟಗಳಿಗೆ ರೂಪುರೇಷೆ ಸಿದ್ಧಪಡಿಸಲಾಗುವುದು ಎಂದರು.



ಕೃಷ್ಣಾ ಮೇಲ್ದಂಡೆ ಯೋಜನೆಯ ಮುಂಗಾರು ಹಾಗೂ ಹಿಂಗಾರು ಹಂಗಾಮಿನ ನೀರಾವರಿ ಸಲಹಾ ಸಮಿತಿ ಸಭೆ ಗುರುವಾರ ವಿಕಾಸಸೌಧದ ಸಭಾಂಗಣದಲ್ಲಿ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ಯಮ ಮತ್ತು ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ವಿಜಯಾನಂದ ಕಾಶಪ್ಪನವರ್ ಅಧ್ಯಕ್ಷತೆಯಲ್ಲಿ ಜರುಗಿತು. ಸಭೆಯಲ್ಲಿ ಸಚಿವರಾದ ಎಂ.ಬಿ.ಪಾಟೀಲ್, ಅಜಯ್‌ಸಿಂಗ್, ಡಾ.ಶರಣಪ್ರಕಾಶ್ ಪಾಟೀಲ್, ಮಾಜಿ ಸಚಿವ ಶರಣ ಬಸಪ್ಪ ದರ್ಶನಪುರ, ಶಾಸಕರಾದ ಉಮೇಶ್ ಮೇಟಿ, ಜೆ.ಟಿ.ಪಾಟೀಲ್, ಜಗದೀಶ್ ಗುಡಗುಂಟಿ ಜನಪ್ರತಿನಿಧಿಗಳು ಹಾಗೂ ನಿಗಮದ ಅಧಿಕಾರಿಗಳು ಭಾಗವಹಿಸಿದ್ದರು.

## ಸ್ಟಿಂಗ್ ಆಪರೇಷನ್: ಹೊರಟ್ಟಿ ಖಂಡನೆ

**ಬೆಂಗಳೂರು, ಅ.15:** ಕರ್ನಾಟಕ ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ಅವರು ಇತ್ತೀಚೆಗೆ ನಡೆದಿರುವ ಸ್ಟಿಂಗ್ ಕಾರ್ಯಾಚರಣೆ ಯನ್ನು ತೀವ್ರವಾಗಿ ಖಂಡಿಸಿದ್ದಾರೆ. ಈ ಕುರಿತು ಮಾತನಾಡಿದ ಅವರು, "ನಾನು ವಿಧಾನಸೌಧಕ್ಕೆ ಬಂದು 47 ವರ್ಷಗಳಾದವು. ಈ ರೀತಿಯ ಸ್ಟಿಂಗ್ ವಿಚಾರ ಇದುವರೆಗೂ ಇರಲಿಲ್ಲ. ಇದನ್ನು ನಾನು ಖಂಡಿಸುತ್ತೇನೆ" ಎಂದು ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಹೊರಟ್ಟಿ ಅವರು ಮಾತನಾಡಿ, ರಾಜ್ಯದ ಮಾಜಿ ಮುಖ್ಯಮಂತ್ರಿ ಹಾಗೂ ಹಿರಿಯ ನಾಯಕ ಸಿದ್ದರಾಮಯ್ಯ ಅವರ ವಿರುದ್ಧ ಇಂತಹ ಕೃತ್ಯ ನಡೆಸಿರುವುದು ದುರದೃಷ್ಟಕರ ಎಂದು ಅಭಿಪ್ರಾಯಪಟ್ಟಿದ್ದಾರೆ. "ಸಿದ್ದರಾಮಯ್ಯ ಅವರಂತವರಿಗೆ ಆಗಿದೆ ಅಂದ್ರೆ, ಇನ್ನು ಉಳಿದವರ ಪರಿಸ್ಥಿತಿ ಏನಾಗಬೇಕು? ಯಾರು ಈ ಕೃತ್ಯ ಮಾಡ್ತಾ ಇದ್ದಾರೆ ಎಂದು ಪತ್ತೆ ಹಚ್ಚಬೇಕು" ಎಂದು ಒತ್ತಾಯಿಸಿದ್ದಾರೆ. ಈ ವಿಚಾರವನ್ನು ಕೇಂದ್ರ ತನಿಖಾ ಸಂಸ್ಥೆಗಳಿಂದ ಮಾಡಿಸಬೇಕು ಎಂದು ಹೊರಟ್ಟಿ ಆಗ್ರಹಿಸಿದ್ದಾರೆ.

## ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ವಾರ್ಷಿಕ ಗೌರವ ಪ್ರಶಸ್ತಿ ಸಮಾರಂಭ

**ಬೆಂಗಳೂರು, ಅ.15:** ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ವತಿಯಿಂದ 2026ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿ ಹಾಗೂ 2025ನೇ ಸಾಲಿನ ಪುಸ್ತಕ ಬಹುಮಾನ ಪ್ರದಾನ ಸಮಾರಂಭವನ್ನು ಅಕ್ಟೋಬರ್ 22 ರಂದು ಬೆಳಗ್ಗೆ 11.00 ಗಂಟೆಗೆ ವಿಜಯಪುರದ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ. 2026ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿ ಪುರಸ್ಕೃತರು: ಡಾ. ಸೂರ್ಯಕಾಂತ ಎಸ್. ಸುಜ್ಯಾತ್, ಡಾ.ಮಲರ್ ವಿಳಿ ಕೆ., ಡಾ. ಬಂಜಗೆರೆ ಜಯಪ್ರಕಾಶ್, ಪ್ರೊ.ಸಿ.ನಾಗಣ್ಣ ಹಾಗೂ ಡಾ. ಕೇಶವ ಶರ್ಮ ಕೆ.

**2025ನೇ ಸಾಲಿನ ಪುಸ್ತಕ ಬಹುಮಾನ ಪುರಸ್ಕೃತರು:** ಕೆ. ಶ್ರೀನಾಥ್, ಡಾ. ಪ್ರಮೋದ ಮುತಾಲಿಕ, ಕೊರ್ಗಿ ಶಂಕರನಾರಾಯಣ ಉಪಾಧ್ಯಾಯ, ಕನಕರಾಜ್ ಆರನಕಟ್ಟೆ, ಅಶೋಕ ಕುಮಾರ್ ಎಂ., ಹಾಗೂ ಚಂದ್ರಶೇಖರ ಮದಭಾವಿ. ಹಿಂದುಳಿದ ಸಚಿವ ಶಿವರಾಜ ತಂಗಡಗಿ ಸಮಾರಂಭವನ್ನು ಉದ್ಘಾಟಿಸಲಿದ್ದಾರೆ. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಮತ್ತು ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಅವರು ಗೌರವ ಪ್ರಶಸ್ತಿ ಮತ್ತು ಪುಸ್ತಕ ಬಹುಮಾನಗಳನ್ನು ವಿತರಿಸಲಿದ್ದಾರೆ. ಶಾಸಕ ಬಸನಗೌಡ ಆರ್. ಪಾಟೀಲ ಯತ್ನಾಳ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

## ಹತಾಶೆಗೊಳಗಾಗಿರುವ ಎಚ್‌ಡಿಕೆಯಿಂದ ಡಿ.ಕೆ.ಶಿವಕುಮಾರ್ ವಿರುದ್ಧ ಆರೋಪ ವಿಜಯಾನಂದ ಕಾಶಪ್ಪನವರ್ ಕಿಡಿ

**ಬೆಂಗಳೂರು, ಅ.15:** ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹತಾಶೆಯಿಂದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಸಚಿವ ವಿಜಯಾನಂದ ಕಾಶಪ್ಪನವರ್, ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ವಿಜಯಾನಂದ ಕಾಶಪ್ಪನವರ್,ಸ್ಟಿಂಗ್ ಆಪರೇಷನ್ ವಿಚಾರ ಕಳೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚೆಗೆ ಬಂದಿರಲಿಲ್ಲ. ಇಂದಿನ ಸಚಿವ ಸಂಪುಟ ಸಭಯಲ್ಲಿಯೂ ಈ ವಿಷಯದ ಕುರಿತು ಚರ್ಚೆಯಾಗಿಲ್ಲ ಎಂದು ಸ್ಪಷ್ಟಪಡಿಸಿದರು. ಎಚ್.ಡಿ. ಕುಮಾರಸ್ವಾಮಿ ಅವರ ರಾಜಕೀಯ ನಿಲುವನ್ನು ಟೀಕಿಸಿದ ಕಾಶಪ್ಪನವರ್, ಕುಮಾರಸ್ವಾಮಿ ಅವರೇ ಮುಖ್ಯಮಂತ್ರಿ ಯಾಗಿರಬೇಕು ಎಂಬ ಮನೋಭಾವ ಹೊಂದಿದ್ದಾರೆ ಎಂದು ಆರೋಪಿಸಿದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಾಯಕತ್ವವನ್ನು ಜನರು ಒಪ್ಪಿಕೊಂಡಿದ್ದಾರೆ. ಇದರಿಂದಾಗಿ ಕುಮಾರಸ್ವಾಮಿ ಹತಾಶೆಗೊಂಡು ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಹೇಳಿದರು.

ಇಷ್ಟು ದಿನ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಆರೋಪಗಳನ್ನು ಮಾಡುತ್ತಿದ್ದ ಕುಮಾರಸ್ವಾಮಿ, ಇದೀಗ ಡಿ.ಕೆ. ಶಿವಕುಮಾರ್ ಅವರನ್ನು ಗುರಿಯಾಗಿಸಿಕೊಂಡಿದ್ದಾರೆ. ರಾಜಕೀಯವಾಗಿ ಒತ್ತಡಕ್ಕೆ ಒಳಗಾಗಿರುವ ಕಾರಣ ಇಂತಹ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಕಾಶಪ್ಪನವರ್ ಟೀಕಿಸಿದರು.

**ಕಾಂಗ್ರೆಸ್‌ನಲ್ಲಿ ಭಿನ್ನಮತವಿಲ್ಲ**

ಸ್ಟಿಂಗ್ ಆಪರೇಷನ್ ವಿವಾದದಿಂದ ಕಾಂಗ್ರೆಸ್ ಪಕ್ಷದಲ್ಲಿ ಆಂತರಿಕ ಭಿನ್ನಮತ ಉಂಟಾಗಿದೆ ಎಂಬ ಚರ್ಚೆಗಳ ನಡುವೆಯೂ, ಪಕ್ಷದಲ್ಲಿ ಯಾವುದೇ ಒಡಕಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನಾಯಕತ್ವದ ಬಗ್ಗೆ ಪಕ್ಷದಲ್ಲಿ ಗೊಂದಲವಿಲ್ಲ ಎಂಬ ಸಂದೇಶವನ್ನು ತಮ್ಮ ಹೇಳಿಕೆಯ ಮೂಲಕ ನೀಡಿದರು. ಕಾಂಗ್ರೆಸ್ ಪಕ್ಷದಲ್ಲಿ ಯಾವುದೇ ಒಡಕಿಲ್ಲ, ಜನರು ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿಯಾಗಿ ಒಪ್ಪಿಕೊಂಡಿದ್ದಾರೆ ಎಂದು ಅವರು ಹೇಳಿದರು.

## ಪ್ರಧಾನಿ ಮೋದಿಯವರ ದೇಶಭಕ್ತಿ, ಸಾಂಸ್ಕೃತಿಕ ಪ್ರಜಾಪ್ರಭುತ್ವದಿಂದ ಜಾಗತಿಕ ಮಟ್ಟದಲ್ಲಿ ಭಾರತದ ಪ್ರಭಾವ ಹೆಚ್ಚಳ: ಬಸವರಾಜ ಬೊಮ್ಮಾಯಿ ಅಭಿಮತ

**ದೇಶ ವಿರೋಧಿ ಶಕ್ತಿಗಳು ಅರಾಜಕತೆಯನ್ನು ಸೃಷ್ಟಿಸಲು ಯತ್ನಿಸುತ್ತಿವೆ: ಬಸವರಾಜ ಬೊಮ್ಮಾಯಿ**



ಹುಬ್ಬಳ್ಳಿ: ಪ್ರಧಾನಮಂತ್ರಿ ನರೇಂದ್ರ ಮೋದಿಯವರ ರಾಷ್ಟ್ರೀಯತೆ, ದೇಶ ಮೊದಲು ಎಂಬ ಚಿಂತನೆ ಮತ್ತು ಸಾಂಸ್ಕೃತಿಕ ಪ್ರಜಾಪ್ರಭುತ್ವದ ಆಧಾರದ ಮೇಲಿನ ಆಡಳಿತದಿಂದ ಜಾಗತಿಕ ಮಟ್ಟದಲ್ಲಿ ಭಾರತದ ಪ್ರಭಾವ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದ್ದಾರೆ. ಗುರುವಾರ ಹುಬ್ಬಳ್ಳಿಯ ಅಶೋಕ ನಗರದಲ್ಲಿರುವ ನವನಿಕೇತನ ಕೋ ಆಪ್ ಹೌಸಿಂಗ್ ಸೊಸೈಟಿಯಲ್ಲಿ ಪಶ್ಚಿಮ ಪದವೀಧರ ಕ್ಷೇತ್ರದ ಭಾರತೀಯ ಜನತಾ ಪಕ್ಷದ ಅಭ್ಯರ್ಥಿಯಾದ ಎಸ್.ವಿ ಸಂಕನೂರ ಅವರ ಪರ ಮತಯಾಚನೆಯನ್ನು ಮಾಡಿದರು. ಇಂದಿನ ತಂತ್ರಜ್ಞಾನ ಯುಗದಲ್ಲಿ ಜನಸಾಮಾನ್ಯರ ಅಭಿಪ್ರಾಯಗಳನ್ನು ರೂಪಿಸುವಲ್ಲಿ ಸಾಮಾಜಿಕ ಜಾಲತಾಣಗಳು ದೊಡ್ಡ ಪಾತ್ರವಹಿಸುತ್ತಿವೆ. ಆದರೆ ಇವೆಲ್ಲದರ ಹಿಂದಿನ ಅಜೆಂಡಾ ಪ್ರಧಾನಿ ಮೋದಿಯವರ ವಿರೋಧವಾಗಿದೆ ಎಂದು ಅವರು ಆರೋಪಿಸಿದರು.

ಪ್ರಧಾನಿ ಮೋದಿ ಅವರು ಒಬ್ಬ ನೈಜ ರಾಷ್ಟ್ರೀಯವಾದಿಯಾಗಿದ್ದು, "ದೇಶ ಮೊದಲು" ಎನ್ನುವ ತತ್ವದಡಿ ಭಾರತದ ಬಗ್ಗೆ ಅತ್ಯಂತ ಅಭಿಮಾನದಿಂದ ಆಳವಾದ ಚಿಂತನೆ ನಡೆಸಿ ಶ್ರೇಷ್ಠ ಭಾರತ ನಿರ್ಮಾಣಕ್ಕೆ ಶ್ರಮಿಸುತ್ತಿದ್ದಾರೆ. ಈ ಕಾರಣಕ್ಕಾಗಿಯೇ ಜಾಗತಿಕ ಮಟ್ಟದಲ್ಲಿ ಭಾರತದ ಪ್ರಭಾವ ಹೆಚ್ಚುತ್ತಿದ್ದು, ಇದನ್ನು ಸಹಿಸದ ಕೆಲವು ಶಕ್ತಿಗಳು ದೇಶದೊಳಗೆ ವಿವಿಧ ರೀತಿಯಲ್ಲಿ ವಿರೋಧ ಹಾಗೂ ಅರಾಜಕತೆಯನ್ನು ಸೃಷ್ಟಿಸಲು ಯತ್ನಿಸುತ್ತಿವೆ ಎಂದು ಬೊಮ್ಮಾಯಿ ಕಿಡಿಕಾರಿದರು.

**ಫ್ರಾನ್ಸ್ ಮತ್ತು ಸ್ಪೇನ್ ನಿದರ್ಶನ**

ಫ್ರಾನ್ಸ್ ಮತ್ತು ಸ್ಪೇನ್ ದೇಶಗಳಲ್ಲಿ ಇತ್ತೀಚೆಗೆ ನಡೆದಿರುವ ಬೆಳವಣಿಗೆಗಳನ್ನು ಉಲ್ಲೇಖಿಸಿದ ಅವರು, ಅಲ್ಲಿ ಕೇವಲ ತಂತ್ರಜ್ಞಾನ ಹಾಗೂ ಕಮರ್ಷಿಯಲ್ ವ್ಯವಹಾರವಷ್ಟೇ ಇರುವುದರಿಂದ ಸುಲಭವಾಗಿ ಅರಾಜಕತೆಯನ್ನು ಮುಗಿಸಿ ಮುನ್ನಡೆಯಲು ಸಾಧ್ಯವಾಗುತ್ತಿದೆ. ಆದರೆ ಭಾರತದಲ್ಲಿ ಪರಿಸ್ಥಿತಿ ಭಿನ್ನವಾಗಿದ್ದು, ಇಲ್ಲಿ ನಮ್ಮದೇ ಆದ ಆಳವಾದ ಬೇರೂರಿದ ಸಂಸ್ಕೃತಿ ಇದೆ. ನಾವು ನಮ್ಮ ಸಂಸ್ಕೃತಿಯ ಆಧಾರದ ಮೇಲೆ ಬದುಕು ನಡೆಸುವಂತಹ ಜನ, ಸಂಸ್ಕೃತಿಯೊಂದಿಗೆ ನಾವು ಬದುಕನ್ನು ನಡೆಸಬೇಕಾಗಿದೆ ಎಂದರು.

ದೇಶಾದ್ಯಂತ ಹಾಗೂ ವಿದೇಶಗಳಲ್ಲೂ ಕೂಡ ಎಲ್ಲಾ ಸಮಸ್ಯೆಗಳಿಗೆ ಪರಿಹಾರವನ್ನು ಕಲ್ಪಿಸುವ ನಾಯಕತ್ವ ಇಂದು ಭಾರತಕ್ಕೆ ಬಂದಿದ್ದರೆ, ಅದು ಪ್ರಧಾನಿ ನರೇಂದ್ರ ಮೋದಿ ಅವರಿಂದ ಮಾತ್ರ ಸಾಧ್ಯವಾಗಿದೆ. ಒಂದು ಕಾಲದಲ್ಲಿ ಯಾರಿಗೂ ಜಮೀನು ಇಲ್ಲದಿದ್ದರೂ ಜಗತ್ತನ್ನು ಆಳುತ್ತಿದ್ದರು. ಆದರೆ ಇಂದಿನ ತಂತ್ರಜ್ಞಾನ ಯುಗದಲ್ಲಿ ಜ್ಞಾನವನ್ನೇ ಸಂಪೂರ್ಣವಾಗಿ ಕೈಯಲ್ಲಿ ಹಿಡಿದುಕೊಂಡು ತಂತ್ರಜ್ಞಾನದ ಜ್ಞಾನವನ್ನು ವಿಕೃತಗೊಳಿಸಿ ಅದರ ಮುಖಾಂತರ ಜಗತ್ತನ್ನು ಆಳುವ ಪ್ರಯತ್ನ ನಡೆಯುತ್ತಿದೆ ಎಂದು ಅವರು ಎಚ್ಚರಿಸಿದ್ದಾರೆ.

**ಕಾಂಗ್ರೆಸ್ ವಿರುದ್ಧ ವಾಗ್ದಾಳಿ**

ಇಂದಿನ ಎಲ್ಲಾ ತಂತ್ರಜ್ಞಾನ ಮತ್ತು ಸಾಮಾಜಿಕ ಜಾಲತಾಣಗಳ ದಾಳಿಗಳು ಪ್ರಧಾನಿ ಮೋದಿಯವರ ವಿರುದ್ಧ ಹಾಗೂ ಚುನಾವಣೆಗಳನ್ನು ಗುರಿಯಾಗಿಸಿಕೊಂಡು ನಡೆಯುತ್ತಿವೆ. ಈ ಅರಾಜಕತೆಯನ್ನು ಕೊನೆಗೊಳಿಸುವಂತಹ ಕೆಲಸ ಇಂದು ರಾಜ್ಯದಲ್ಲಿ ಆಗಬೇಕಿದೆ. ಆದರೆ ಪ್ರಸ್ತುತ ರಾಜ್ಯದಲ್ಲಿ ಸಂಪೂರ್ಣವಾಗಿ ಅಭಿವೃದ್ಧಿ ಕುಂಟಿತಗೊಂಡಿದ್ದು, ಸಾಲ ಹೆಚ್ಚಾಗಿದೆ, ಖಜಾನೆ ಖಾಲಿಯಾಗಿದೆ ಮತ್ತು ಬರೀ ಹಗರಣಗಳೇ ಸೃಷ್ಟಿಯಾಗುತ್ತಿವೆ ಎಂದು ಅವರು ರಾಜ್ಯ ಸರ್ಕಾರದ ವಿರುದ್ಧ ತೀವ್ರವಾಗಿ ವಾಗ್ದಾಳಿ ನಡೆಸಿದರು.

**ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ**

ರಾಜ್ಯದಲ್ಲಿ ಶಿಕ್ಷಕರಿಗೆ ಯಾವುದೇ ಕೆಲಸವನ್ನು ಈ ಸರ್ಕಾರ ಮಾಡಿಕೊಟ್ಟಿಲ್ಲ. ಖಾಸಗಿ ಸಂಸ್ಥೆಗಳಾಗಲಿ ಅಥವಾ ಸರ್ಕಾರದ ನೌಕರರಾಗಲಿ ಯಾವುದೇ ಅನುಕೂಲಗಳನ್ನು ಈ ಸರ್ಕಾರ ಒದಗಿಸಿಲ್ಲ ಎಂದು ಟೀಕಿಸಿದರು. ಮುಂಬರುವ ಚುನಾವಣೆಯಲ್ಲಿ ನಾಲ್ಕು ಕ್ಷೇತ್ರಗಳಲ್ಲಿ ಬಿಜೆಪಿ ಬೆಂಬಲಿತ ಅಭ್ಯರ್ಥಿಗಳು ಗೆದ್ದು ಬಂದರೆ, ಜನಪರವಲ್ಲದ ಈ ಸರ್ಕಾರಕ್ಕೆ ತಕ್ಕ ಪಾಠ ಕಲಿಸಿದಂತಾಗುತ್ತದೆ ಎಂದರು.

**ಕಾಂಗ್ರೆಸ್ ಸರ್ಕಾರದ ಪತನ:**

ಕರ್ನಾಟಕದಲ್ಲಿ 2028ಕ್ಕೆ ಮತ್ತೆ ನರೇಂದ್ರ ಮೋದಿಯವರ ಬೆಂಬಲದೊಂದಿಗೆ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುವುದು ನಿಶ್ಚಿತ. ಸರ್ಕಾರಿ ನೌಕರರ ಮೇಲೆ ಸರ್ಕಾರದ ಕಡೆಯಿಂದ ಬಹಳಷ್ಟು ಒತ್ತಡಗಳು ಬರುತ್ತಿದ್ದು, ನಿಮ್ಮ ಸ್ನೇಹಿತರ ಬಳಿ ಧೈರ್ಯವಾಗಿರಿ ಎಂದು ಹೇಳಬೇಕಿದೆ. ಸರ್ಕಾರಿ ನೌಕರರು 35 ವರ್ಷಗಳ ಕಾಲ ಪ್ರಾಮಾಣಿಕವಾಗಿ ಕೆಲಸ ಮಾಡಿದ್ದು, ತಮ್ಮ ಆತ್ಮಸಾಕ್ಷಿಯಂತೆ ಸರಿಯಾದ ನಿರ್ಧಾರ ಕೈಗೊಳ್ಳಬೇಕು ಎಂದು ಅವರು ಕರೆ ನೀಡಿದರು.

ಬಿಜೆಪಿ ಅಭ್ಯರ್ಥಿ ಎಸ್. ವಿ. ಸಂಕನೂರ ಎರಡು ಬಾರಿ ಉತ್ತಮ ಕೆಲಸ ಮಾಡಿದ್ದು, ಉದ್ಯೋಗ ಮೇಳಗಳನ್ನು ಆಯೋಜನೆ ಮಾಡುವ ಮೂಲಕ ಪ್ರತಿಯೊಬ್ಬ ಉದ್ಯೋಗಿ ವರ್ಷಕ್ಕೆ 2300 ಜನರಿಗೆ ಉದ್ಯೋಗ ನೀಡುವ ಕೆಲಸವನ್ನು ಮಾಡುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಶಾಸಕ ಮಹೇಶ ಟೆಂಗಿನಕಾಯಿ, ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ, ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ ಕವಟಗಿಮಠ, ಮುಖಂಡ ವೀರಣ್ಣ ಸವಡಿ, ಸಂತೋಷ ಚವ್ಹಾಣ, ಬೀರಪ್ಪ ಕಂಡೇಕರ, ಈಶ್ವರಗೌಡ ಪಾಟೀಲ, ಎಮ.ವಾಯ್.ನರಗುಂದ, ರಾಜು ಕಾಳೆ, ಪ್ರೀತಂ ಅರಕೇರಿ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.






Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಅಕ್ಟೋಬರ್, 16, 2026, ಶುಕ್ರವಾರ

## ಒಳಪುಟಗಳಲ್ಲಿ

**ವಿದೇಶಿ ಪೌರತ್ವ ನಿಯಮ ಉಲ್ಲಂಘನೆ: ಭಾರತ ತೊರೆಯುವಂತೆ ನಟ ಇಮ್ರಾನ್ ಖಾನ್‌ಗೆ ನೋಟಿಸ್** - ಪು.4

**ಡ್ರೈಡೇ ಆದೇಶ ಹಿಂಪಡೆಯುವಂತೆ ಸರ್ಕಾರಕ್ಕೆ ಹೋಟೆಲ್ ಮಾಲೀಕರ ಸಂಘ ಮನವಿ** - ಪು.5

**ಕಂಬಳ, ತುಳುನಾಡಿನ ಸ್ತಬ್ಧಚಿತ್ರ ಈ ಬಾರಿಯ ದಸರಾ ಆಕರ್ಷಣೆ: ಡಿ.ಕೆ.ಶಿ.** - ಪು.6

# ಎಸ್‌ಸಿ/ಎಸ್‌ಟಿ ಮೀಸಲಾತಿ ಹೆಚ್ಚಳ ರದ್ದು: ಸುಪ್ರೀಂನಲ್ಲಿ ಮೇಲ್ಮನವಿ

## ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸಂಪುಟ ಸಭೆಯಲ್ಲಿ ತೀರ್ಮಾನ

**ಬೆಂಗಳೂರು, ಅ.15: ಎಸ್‌ಸಿ/ಎಸ್‌ಟಿ ಮೀಸಲು ಪ್ರಮಾಣ ಹೆಚ್ಚಳವನ್ನು ರದ್ದುಗೊಳಿಸಿದ ಹೈಕೋರ್ಟ್ ತೀರ್ಪಿನ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ವಿಶೇಷ ಮೇಲ್ಮನವಿ ಸಲ್ಲಿಸಲು ರಾಜ್ಯ ಸಂಪುಟ ಸಭೆ ತೀರ್ಮಾನಿಸಿದೆ.**

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ. ಹಿಂದಿನ ಬಿಜೆಪಿ ಸರ್ಕಾರ ಎಸ್ಸಿಗೆ 17%, ಎಸ್ಟಿಗೆ 7% ಮೀಸಲಾತಿ ಹೆಚ್ಚಳ ಮಾಡಿ ಆದೇಶ ಹೊರಡಿಸಿತ್ತು. ಆ ಮೂಲಕ ರಾಜ್ಯದಲ್ಲಿ ಒಟ್ಟು ಮೀಸಲಾತಿ ಪ್ರಮಾಣ 56%ಕ್ಕೆ ಹೆಚ್ಚಳವಾಗಿತ್ತು. ಸರ್ಕಾರದ ಈ ಆದೇಶ ಪ್ರಶ್ನಿಸಿ ಕೆಲವರು ಹೈಕೋರ್ಟ್ ಮೊರೆ ಹೋಗಿದ್ದರು. ಹೈಕೋರ್ಟ್ ದ್ವಿಸದಸ್ಯ ಪೀಠ ಮೊನ್ನೆ ಎಸ್ಸಿ, ಎಸ್ಟಿ ಮೀಸಲಾತಿ ಹೆಚ್ಚಳದ ಆದೇಶವನ್ನು ರದ್ದುಗೊಳಿಸಿ ತೀರ್ಪು ನೀಡಿತ್ತು. ಹೈಕೋರ್ಟ್ ತೀರ್ಪು ಸರ್ಕಾರಿ ಹುದ್ದೆಗಳ ನೇಮಕಾತಿ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇದೆ. ಹೈಕೋರ್ಟ್ ಆದೇಶದಿಂದ ರಾಜ್ಯ ಸರ್ಕಾರ ಮತ್ತು ಅದರ ಅಧೀನ ಸಂಸ್ಥೆಗಳ ನೇಮಕಾತಿಗಳ ಮೇಲೆ ಪರಿಣಾಮ ಬೀರಲಿದೆ. ಹೈಕೋರ್ಟ್ ಆದೇಶದ ಕುರಿತು ಸಂಪುಟ ಸಭೆಯಲ್ಲಿ ಚರ್ಚಿಸಲಾಯಿತು. ಸಂಪುಟ ಸಭೆಯಲ್ಲಿ ಸುಪ್ರೀಂಕೋರ್ಟ್ ಮೊರೆ ಹೋಗಲು ತೀರ್ಮಾನಿಸಲಾಯಿತು.

**ರಾಜಕೀಯ ವ್ಯವಹಾರಗಳ ಸಮಿತಿಯಲ್ಲಿ ಚರ್ಚೆ:**

ಎಸ್ಸಿ, ಎಸ್ಟಿ ಮೀಸಲಾತಿ ಹೆಚ್ಚಳ, ಸಂವಿಧಾನದ ಪರಿಚ್ಛೇದ 9ಕ್ಕೆ ಸೇರ್ಪಡೆ, ನೇಮಕಾತಿ ಮೇಲಾಗುವ ಪರಿಣಾಮ, ಕೇಂದ್ರ ಸರ್ಕಾರಕ್ಕೆ ಮುಂದೆ ಮನವಿ ಸಲ್ಲಿಸುವ ಬಗ್ಗೆ, ಮುಂದೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಸಿಎಂ ನೇತೃತ್ವದ ರಾಜಕೀಯ ವ್ಯವಹಾರಗಳ ಸಮಿತಿಯಲ್ಲಿ ಚರ್ಚಿಸಿ ತೀರ್ಮಾನ ಕೈಗೊಳ್ಳಲು ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ.

**ಸ್ಟಿಂಗ್ ಆಪರೇಷನ್ ಸಿಎಂ ವಿವೇಚನೆಗೆ**

ಸ್ಟಿಂಗ್ ಆಪರೇಷನ್ ಪ್ರಕರಣವನ್ನು ಅಪರಾಧ ತನಿಖಾ ಇಲಾಖೆ (ಸಿಐಡಿ)ಗೆ ವಹಿಸಬೇಕೇ ಅಥವಾ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಿ ತನಿಖೆ ನಡೆಸಬೇಕೇ ಎಂಬ ಬಗ್ಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಂಪುಟ ಸಹೋದ್ಯೋಗಿಗಳ ಅಭಿಪ್ರಾಯಗಳನ್ನು ಪಡೆದಿದ್ದಾರೆ ಎನ್ನಲಾಗಿದೆ.

**ಮೈಸೂರಲ್ಲಿ ಚಿತ್ರನಗರಿ ನಿರ್ಮಾಣಕ್ಕೆ ಅಸ್ತು:**

ಸಾಂಸ್ಕೃತಿಕ ನಗರಿ ಮೈಸೂರಿನ ಸಮೀಪದ ಹಿಮ್ಮಾವು ಪ್ರದೇಶದಲ್ಲಿ ಸುಮಾರು 160 ಎಕರೆ ವಿಸ್ತೀರ್ಣದಲ್ಲಿ ಚಿತ್ರನಗರಿ ನಿರ್ಮಿಸಲು ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. ಈ ಯೋಜನೆಗೆ 729.43 ಕೋಟಿ ರೂ. ಹಣ ಮೀಸಲಿಡಲು ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ.

**ಸಂಪುಟ ಸಭೆಯ ಇತರ ತೀರ್ಮಾನ**

ಕರ್ನಾಟಕ ರಾಜ್ಯ ನಾಗರಿಕ ವಿಮಾನಯಾನ ನೀತಿ–2026"ಕ್ಕೆ ಅನುಮೋದನೆ, ರಾಜ್ಯದ ಯುವ ಜನರಿಗೆ ಶಿಶಿಕ್ಷು ತರಬೇತಿ ಪ್ರಮಾಣ ಹೆಚ್ಚಿಸಲು ಉದ್ದೇಶಿಸಿರುವ 'ಶಿಶಿಕ್ಷು (ಕರ್ನಾಟಕ ಕಾಯ್ದೆ) ವಿಧೇಯಕ, 2026'ಕ್ಕೆ ಒಪ್ಪಿಗೆ,



ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ತಾಲೂಕಿನ ಸುಕ್ಷೇತ್ರ ಶಾರದಾಂಬೆ ಮಠದ ಹತ್ತಿರ ಹರಿಯುವ ತುಂಗಾನದಿಗೆ ಅಡ್ಡಲಾಗಿ ಬ್ಯಾರೇಜ್ ನಿರ್ಮಾಣ ಕಾಮಗಾರಿಯನ್ನು ಅಂದಾಜು 83.40 ಕೋಟಿ ರೂ.ಗಳ ಮೊತ್ತದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

# ಕರ್ನಾಟಕ ನಾಗರಿಕ ವಿಮಾನಯಾನ ನೀತಿಗೆ ರಾಜ್ಯ ಸಂಪುಟ ಅನುಮೋದನೆ

**ರಾಜ್ಯದ 2 ಮತ್ತು 3ನೇ ಹಂತದ ನಗರಗಳಲ್ಲಿ ವಿಮಾನ ನಿಲ್ದಾಣ, ಹೆಲಿಪೋರ್ಟ್ ಮತ್ತು ಜಲವಿಮಾನ ನಿಲ್ದಾಣಗಳ ಅಭಿವೃದ್ಧಿ ಆದ್ಯತೆ**

**ಸಂಪರ್ಕ ವಿಸ್ತರಣೆ, ಪ್ರಾದೇಶಿಕ ವಿಮಾನಯಾನಕ್ಕೆ ಉತ್ತೇಜನ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ವೇಗ**

ಬೆಂಗಳೂರು ಅ.15: ರಾಜ್ಯದಲ್ಲಿ ವಿಮಾನಯಾನ ಸಂಪರ್ಕವನ್ನು ವಿಸ್ತರಿಸುವುದು, ಪ್ರಾದೇಶಿಕ ವಿಮಾನಯಾನವನ್ನು ಉತ್ತೇಜಿಸುವುದು ಹಾಗೂ ವಿಮಾನ ನಿಲ್ದಾಣಗಳು ಮತ್ತು ಇತರ ವಿಮಾನಯಾನ ಮೂಲಸೌಕರ್ಯಗಳ ಅಭಿವೃದ್ಧಿಗೆ ವೇಗ ನೀಡುವ ಉದ್ದೇಶದಿಂದ ರೂಪಿಸಿರುವ ಕರ್ನಾಟಕ ರಾಜ್ಯ ನಾಗರಿಕ ವಿಮಾನಯಾನ ನೀತಿ–2026ಕ್ಕೆ ಸಚಿವ ಸಂಪುಟ ಅನುಮೋದನೆ ನೀಡಿದೆ.

ಕೇಂದ್ರ ಸರ್ಕಾರದ ರಾಷ್ಟ್ರೀಯ ನಾಗರಿಕ ವಿಮಾನಯಾನ ನೀತಿ–2016ಕ್ಕೆ ಅನುಗುಣವಾಗಿ ರೂಪಿಸಿರುವ ಈ ನೀತಿಯು ರಾಜ್ಯದಲ್ಲಿ ವಿಮಾನಯಾನ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಅಗತ್ಯವಾದ ನೀತಿ ಚೌಕಟ್ಟನ್ನು ಒದಗಿಸಲಿದೆ. ವಿಮಾನಯಾನ ಸಂಪರ್ಕ ಕಡಿಮೆ ಇರುವ ಹಾಗೂ ಸೇವೆಗಳಿಲ್ಲದ ಪ್ರದೇಶಗಳಿಗೆ ವಿಮಾನ ಸಂಪರ್ಕ ಕಲ್ಪಿಸುವುದರ ಜೊತೆಗೆ, ಪ್ರಾದೇಶಿಕ ವಿಮಾನಯಾನ ಸೇವೆಗಳನ್ನು ಉತ್ತೇಜಿಸುವುದು ಇದರ ಪ್ರಮುಖ ಉದ್ದೇಶವಾಗಿದೆ.

ನೀತಿಯಡಿ ಪ್ರಾದೇಶಿಕ ಸಂಪರ್ಕ ಯೋಜನೆ (Regional Connectivity Scheme–ಉಡಾನ್), ಕಾರ್ಯಸಾಧ್ಯತೆಯ ಅಂತರ ನಿಧಿ (Viability Gap Funding-VGF) ಹಾಗೂ ಅಗತ್ಯ ಹಣಕಾಸು ನೆರವಿನ ಮೂಲಕ ವಿಮಾನಯಾನ ಸೇವೆಗಳ ವಿಸ್ತರಣೆಗೆ ಉತ್ತೇಜನ ನೀಡಲು ಉದ್ದೇಶಿಸಲಾಗಿದೆ.

ರಾಜ್ಯದ ಎರಡನೇ ಮತ್ತು ಮೂರನೇ ಹಂತದ ನಗರಗಳಲ್ಲಿ ವಿಮಾನ ನಿಲ್ದಾಣಗಳು, ವಿಮಾನ ಪಟ್ಟಿಗಳು, ಹೆಲಿಪೋರ್ಟ್‌ಗಳು ಮತ್ತು ಜಲವಿಮಾನ ನಿಲ್ದಾಣಗಳ ಅಭಿವೃದ್ಧಿಗೂ ನೀತಿಯಲ್ಲಿ ಆದ್ಯತೆ ನೀಡಲಾಗಿದೆ. ಈ ಮೂಲಸೌಕರ್ಯಗಳ ಅಭಿವೃದ್ಧಿಯ ಮೂಲಕ ಪ್ರಾದೇಶಿಕ ಸಂಪರ್ಕವನ್ನು ಸುಧಾರಿಸುವುದು, ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವುದು ಹಾಗೂ ಆರ್ಥಿಕ ಚಟುವಟಿಕೆಗಳನ್ನು ವಿಸ್ತರಿಸುವುದು ನಿರೀಕ್ಷಿಸಲಾಗಿದೆ.

ವಿಮಾನಯಾನ ಸೇವೆಗಳ ಅನುಷ್ಠಾನ, ಹಣಕಾಸು ನೆರವು, ಕಾರ್ಯಾಚರಣೆ ಮತ್ತು ಸಂಬಂಧಿತ ಪ್ರಕ್ರಿಯೆಗಳನ್ನು ವ್ಯವಸ್ಥಿತಗೊಳಿಸಲು ಅಗತ್ಯ ಮಾರ್ಗಸೂಚಿಗಳು ಹಾಗೂ ಪ್ರಮಾಣಿತ ಕಾರ್ಯಾಚರಣಾ ವಿಧಾನಗಳನ್ನು ರೂಪಿಸುವುದಕ್ಕೂ ನೀತಿ ಅವಕಾಶ ಕಲ್ಪಿಸುತ್ತದೆ.

ಈ ನೀತಿಯ ಅನುಷ್ಠಾನದಿಂದ ರಾಜ್ಯದ ವಿವಿಧ ಭಾಗಗಳಿಗೆ ವಿಮಾನ ಸಂಪರ್ಕ ಸುಧಾರಿಸುವುದರ ಜೊತೆಗೆ, ಪ್ರಾದೇಶಿಕ ಅಭಿವೃದ್ಧಿ ಮತ್ತು ಆರ್ಥಿಕ ಬೆಳವಣಿಗೆಗೆ ನೆರವಾಗಲಿದೆ.

# ಲಡಾಖ್‌ಗೆ 3,350 ಕೋಟಿ ರೂ. ಮೌಲ್ಯದ ಐದು ಅಭಿವೃದ್ಧಿ ಯೋಜನೆಗಳ ಕೊಡುಗೆ

**ವಿಮಾನ ನಿಲ್ದಾಣ, 298 ಕಿ.ಮೀ ರಸ್ತೆ, ಜಲವಿದ್ಯುತ್ ಯೋಜನೆಗೆ ಪ್ರಧಾನಿ ಮೋದಿ ಚಾಲನೆ**



**ಪ್ರಧಾನಿ ನರೇಂದ್ರ ಮೋದಿ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಲಡಾಖ್‌ನಲ್ಲಿ ಐದು ಪ್ರಮುಖ ಅಭಿವೃದ್ಧಿ ಯೋಜನೆಗಳನ್ನು ರಾಷ್ಟ್ರಕ್ಕೆ ಸಮರ್ಪಿಸಿದರು.**

**ನವದೆಹಲಿ, ಅ.15:** ಲಡಾಖ್‌ನ ಸಂಪರ್ಕ ವ್ಯವಸ್ಥೆ, ವಿದ್ಯುತ್ ಸೌಲಭ್ಯ, ಜಲ ಭದ್ರತೆ ಹಾಗೂ ಪ್ರಾಚೀನ ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆಗೆ ಒತ್ತು ನೀಡುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು 3,350 ಕೋಟಿ ಮೌಲ್ಯದ ಐದು ಪ್ರಮುಖ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದ್ದಾರೆ. ವಿಡಿಯೊ ಕಾನ್ಫರೆನ್ಸ್ ಮೂಲಕ ನಡೆದ ಕಾರ್ಯಕ್ರಮದಲ್ಲಿ ಯೋಜನೆಗಳನ್ನು ಉದ್ಘಾಟಿಸಿ, ಕೆಲವು ಯೋಜನೆಗಳನ್ನು ಸಮರ್ಪಿಸಲಾಯಿತು.

ಲೇಹ್‌ನ ಕುಶೋಕ್ ಬಕುಲಾ ರಿಂಪೋಚೆ ವಿಮಾನ ನಿಲ್ದಾಣದಲ್ಲಿ 640 ಕೋಟಿ ವೆಚ್ಚದಲ್ಲಿ ನಿರ್ಮಿಸಲಾದ ನೂತನ ಪ್ರಯಾಣಿಕರ ಟರ್ಮಿನಲ್ ಪ್ರಮುಖ ಯೋಜನೆಗಳಲ್ಲಿ ಒಂದಾಗಿದೆ. ಸುಮಾರು 23,800 ಚದರ ಮೀಟರ್ ವಿಸ್ತೀರ್ಣ ಹೊಂದಿರುವ ಈ ಟರ್ಮಿನಲ್ ವಾರ್ಷಿಕವಾಗಿ 35 ಲಕ್ಷ ಪ್ರಯಾಣಿಕರನ್ನು ನಿರ್ವಹಿಸುವ ಸಾಮರ್ಥ್ಯ ಹೊಂದಿದೆ. ಭೂಶಾಖದ ಇಂಧನ ತಂತ್ರಜ್ಞಾನವನ್ನು ಬಳಸಿರುವ ಈ ಕಟ್ಟಡವು ಇಂಧನ ದಕ್ಷತೆ ಹೆಚ್ಚಿಸುವ ಹಾಗೂ ಇಂಗಾಲದ ಹೊರಸೂಸುವಿಕೆ ಕಡಿಮೆ ಮಾಡುವ ಉದ್ದೇಶ ಹೊಂದಿದೆ. ಆಧುನಿಕ ಸೌಲಭ್ಯಗಳೊಂದಿಗೆ ಲಡಾಖ್‌ನ ಸ್ಥಳೀಯ ಕಲೆ ಮತ್ತು ಸಂಸ್ಕೃತಿಯ ಅಂಶಗಳಿಗೂ ಆದ್ಯತೆ ನೀಡಲಾಗಿದೆ.

ಗಡಿ ರಸ್ತೆಗಳ ಸಂಸ್ಥೆ ನಿರ್ಮಿಸಿರುವ 298 ಕಿ.ಮೀ. ಉದ್ದದ ನಿಂಮುಪದಂದರ್ಚಾ ರಸ್ತೆಯನ್ನು ಪ್ರಧಾನಿ ರಾಷ್ಟ್ರಕ್ಕೆ ಸಮರ್ಪಿಸಿದ್ದಾರೆ. ಲೇಹ್ ಸಮೀಪದ ನಿಂಮು ಪ್ರದೇಶವನ್ನು ಹಿಮಾಚಲ ಪ್ರದೇಶದ ದರ್ಚಾ ಜತೆಗೆ ಸಂಪರ್ಕಿಸುವ ಈ ರಸ್ತೆ ಝುನ್ಸ್ಕರ್ ಕಣಿವೆ ಹಾಗೂ ಎತ್ತರದ ಶಿಂಕುನ್ ಲಾ ಕಣಿವೆಯ ಮೂಲಕ ಹಾದುಹೋಗುತ್ತದೆ.

ಶ್ರೀನಗರ–ಲೇಹ್ ಮತ್ತು ಮನಾಲಿ–ಲೇಹ್ ಹೆದ್ದಾರಿಗಳಿಗೆ ಪರ್ಯಾಯವಾಗಿ ಈ ರಸ್ತೆ ಕಾರ್ಯನಿರ್ವಹಿಸಲಿದೆ. ಇದರಿಂದ ದುರ್ಗಮ ಪ್ರದೇಶಗಳಿಗೆ ಸಂಪರ್ಕ ಸುಧಾರಿಸುವುದರ ಜತೆಗೆ, ಸೇನೆಯ ಸಿಬ್ಬಂದಿ ಮತ್ತು ಅಗತ್ಯ ಸಾಮಗ್ರಿಗಳ ಸಾಗಣೆಗೆ ನೆರವಾಗಲಿದೆ. ಸ್ಥಳೀಯರಿಗೆ ಆರೋಗ್ಯ ಸೇವೆ, ಶಿಕ್ಷಣ ಹಾಗೂ ಮಾರುಕಟ್ಟೆಗಳಿಗೆ ತಲುಪುವುದೂ ಸುಲಭವಾಗಲಿದೆ.

ಲಡಾಖ್‌ನ ವಿದ್ಯುತ್ ಮೂಲಸೌಕರ್ಯ ಬಲಪಡಿಸುವ ಉದ್ದೇಶದಿಂದ 9 ಮೆಗಾವಾಟ್ ಸಾಮರ್ಥ್ಯದ ಹಾನು ಕಿರು ಜಲವಿದ್ಯುತ್ ಯೋಜನೆ ಹಾಗೂ 66 ಕೆ.ವಿ. ಸಾಮರ್ಥ್ಯದ ದಾಹ್–ಹಾನು–ಖಾಲ್ಸಿ ದ್ವಿ–ಸರ್ಕ್ಯೂಟ್ ವಿದ್ಯುತ್ ಪ್ರಸರಣ ಮಾರ್ಗಕ್ಕೂ ಚಾಲನೆ ನೀಡಲಾಗಿದೆ. ಈ ಯೋಜನೆಗಳು ಸ್ಥಳೀಯ ವಿದ್ಯುತ್ ಜಾಲದ ವಿಶ್ವಾಸಾರ್ಹತೆಯನ್ನು ಹೆಚ್ಚಿಸಲು ಹಾಗೂ ಜಲವಿದ್ಯುತ್ ಸಂಪನ್ಮೂಲಗಳ ಬಳಕೆಯನ್ನು ಬಲಪಡಿಸಲು ಸಹಕಾರಿಯಾಗಲಿವೆ.

ಲಡಾಖ್‌ನ ಸಾವಿರಾರು ವರ್ಷಗಳ ಇತಿಹಾಸವನ್ನು ಸಾರುವ ಪ್ರಾಚೀನ ಶಿಲಾಚಿತ್ರಗಳನ್ನು ಸಂರಕ್ಷಿಸಲು ಲೇಹ್‌ನ ಸಿಂಧು ಘಾಟ್‌ನಲ್ಲಿ ದೇಶದ ಮೊದಲ ಪೆಟ್ರೋಗ್ಲಿಫ್ ಸಂರಕ್ಷಣಾ ಉದ್ಯಾನವನ್ನು ಉದ್ಘಾಟಿಸಲಾಗಿದೆ. ಪ್ರಾಚೀನ ಶಿಲೆಗಳಲ್ಲಿ ಕೆತ್ತಲಾಗಿರುವ ಪ್ರಾಣಿಗಳ ಚಿತ್ರಗಳು, ಮಾನವ ಆಕೃತಿಗಳು ಹಾಗೂ ವಿವಿಧ ಸಂಕೇತಗಳನ್ನು ಸಂರಕ್ಷಿಸುವುದು ಈ ಉದ್ಯಾನದ ಪ್ರಮುಖ ಉದ್ದೇಶವಾಗಿದೆ. ಇದರಿಂದ ಲಡಾಖ್‌ನ ಐತಿಹಾಸಿಕ ಪರಂಪರೆಯ ರಕ್ಷಣೆ ಜತೆಗೆ ಪಾರಂಪರಿಕ ಪ್ರವಾಸೋದ್ಯಮಕ್ಕೂ ಉತ್ತೇಜನ ದೊರೆಯುವ ನಿರೀಕ್ಷೆಯಿದೆ.

ಪ್ರಾಜೆಕ್ಟ್ ಹಿಮ್ ಸರೋವರ್ ಅಡಿಯಲ್ಲಿ 40 ಗ್ರಾಮಗಳಲ್ಲಿ ಅಭಿವೃದ್ಧಿಪಡಿಸಿರುವ 40 ಜಲಮೂಲಗಳಿಗೂ ಚಾಲನೆ ನೀಡಲಾಗಿದೆ. ಹಿಮ ಕರಗಿದಾಗ ದೊರೆಯುವ ನೀರನ್ನು ಸಂಗ್ರಹಿಸಿ, ಅಗತ್ಯವಿರುವ ಸಮಯದಲ್ಲಿ ಕೃಷಿ ಮತ್ತು ನೀರಾವರಿಗೆ ಬಳಸಲು ಈ ಯೋಜನೆ ನೆರವಾಗಲಿದೆ. ಬಿತ್ತನೆ ಅವಧಿಯಲ್ಲಿ ಎದುರಾಗುವ ನೀರಿನ ಕೊರತೆಯನ್ನು ಕಡಿಮೆ ಮಾಡಿ, ರೈತರ ಜೀವನೋಪಾಯವನ್ನು ಬೆಂಬಲಿಸುವುದು ಇದರ ಉದ್ದೇಶವಾಗಿದೆ.

# ಕಬ್ಬು ಬೆಳೆಗಾರರ ಹಿತರಕ್ಷಣೆಗೆ ಎಸ್‌ಎಪಿ ಜಾರಿ ಪರಿಹಾರ ಕ್ರಮ

**ಮುಖ್ಯಮಂತ್ರಿಗೆ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಪತ್ರ**





**ಬೆಂಗಳೂರು, ಅ.15:** ಕಬ್ಬು ಬೆಳೆಗಾರರ ಹಿತರಕ್ಷಣೆಗೆ ರಾಜ್ಯ ಸರ್ಕಾರದಿಂದ ಎಸ್‌ಎಪಿ ಜಾರಿ ಸೇರಿದಂತೆ ಪರಿಹಾರ ಕ್ರಮಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಪತ್ರ ಬರೆದಿದ್ದಾರೆ. ದೆಹಲಿಯಲ್ಲಿ ಅ.12ರಂದು ನಡೆದ ಕಬ್ಬು ಬೆಳೆಗಾರರ ಸಭೆಯಲ್ಲಿ ರೈತರ ಸಮಸ್ಯೆ, ಅಹವಾಲುಗಳನ್ನು ಆಲಿಸಿದ್ದ ಸಚಿವರು ಇದೀಗ ಕಬ್ಬು ಬೆಳೆಗಾರರ ನೈಜ ಸಮಸ್ಯೆಗಳ ಬಗ್ಗೆ ಅಧ್ಯಯನಕ್ಕೆ ಕೇಂದ್ರದಿಂದ ಜಂಟಿ ಸಮಿತಿ ರಚಿಸಿದ ಬೆನ್ನಲ್ಲೇ ಮುಖ್ಯಮಂತ್ರಿ ಅವರಿಗೂ ಪತ್ರ ಬರೆದು ಗಮನ ಸೆಳೆದಿದ್ದಾರೆ. ರಾಜ್ಯದ ಕಬ್ಬು ಬೆಳೆಗಾರರ ಮನವಿಗೆ ರಾಜ್ಯ ಸರ್ಕಾರ ತಕ್ಷಣವೇ ಸ್ಪಂದಿಸಬೇಕು ಹಾಗೂ ರಾಜ್ಯದ ಕಬ್ಬು ಬೆಳೆಗಾರರಿಗೆ ರಾಜ್ಯ ಸಲಹಾ ಬೆಲೆಯನ್ನು ಜಾರಿಗೊಳಿಸುವ ಮೂಲಕ ರೈತರ ಹಿತ ಕಾಪಾಡಬೇಕೆಂದು ಪತ್ರದಲ್ಲಿ ತಿಳಿಸಿದ್ದಾರೆ.

ದೆಹಲಿಯಲ್ಲಿ ಕಬ್ಬು ಬೆಳೆಗಾರರು ಮತ್ತು ಪ್ರತಿನಿಧಿಗಳೊಂದಿಗೆ ನಡೆದ ಸುದೀರ್ಘ ಚರ್ಚೆಯ ಬಳಿಕ, ರೈತ ಮುಖಂಡರು ನೀಡಿದ ಮನವಿ ಮೇರೆಗೆ ರಾಜ್ಯದಲ್ಲಿ ರೈತರು ಎದುರಿಸುತ್ತಿರುವ ಸಮಸ್ಯೆಗಳ ಕುರಿತಂತೆ ಸಚಿವ ಜೋಶಿ ಅವರು ಮುಖ್ಯಮಂತ್ರಿಗೆ ಪತ್ರ ಬರೆದಿದ್ದಾರೆ.

ಸಿಎಂಗೆ ಬರೆದ ಪತ್ರದಲ್ಲಿ ಸಕ್ಕರೆ ಇಳುವರಿಯ ಸ್ವತಂತ್ರ ತಪಾಸಣೆ, ತೂಕದ ಯಂತ್ರಗಳ ಪಾರದರ್ಶಕ ಪರಿಶೀಲನೆ, ಯಂತ್ರ ಕೊಯ್ಲಿನ ಶೇ.8ರಷ್ಟು ಕಡಿತದ ಮರುಪರಿಶೀಲನೆ, ರಾಜ್ಯ ಸಲಹಾ ಬೆಲೆ (ಎಸ್‌ಎಪಿ) ಘೋಷಣೆ ಸೇರಿದಂತೆ ಕಬ್ಬು ಬೆಳೆಗಾರರ ಹಲವು ಬೇಡಿಕೆ–ಮನವಿಗಳ ಬಗ್ಗೆ ರಾಜ್ಯ ಸರ್ಕಾರ ತಕ್ಷಣವೇ ಸ್ಪಂದಿಸಬೇಕು ಎಂದು ಒತ್ತಾಯಿಸಿದ್ದಾರೆ.

# ಜನ್ಮದಿನದಂದೇ ಕರ್ನಾಟಕದ 2ನೇ ಮಹಿಳಾ ರಾಜ್ಯಪಾಲರಾಗಿ ಡಾ. ಸುಧಾ ಯಾದವ್ ಇಂದು ಪ್ರಮಾಣವಚನ



ಬೆಂಗಳೂರು, ಅ.15: ಕರ್ನಾಟಕದ ನೂತನ ರಾಜ್ಯಪಾಲರಾಗಿ ಬಿಜೆಪಿ ಹಿರಿಯ ನಾಯಕಿ ಹಾಗೂ ಪಕ್ಷದ ಸಂಸದೀಯ ಮಂಡಳಿ ಸದಸ್ಯೆ ಡಾ. ಸುಧಾ ಯಾದವ್ ಅವರು ಶುಕ್ರವಾರ (ಅ.,16) ಬೆಂಗಳೂರಿನ ಲೋಕಭವನದಲ್ಲಿ ಬೆಳಿಗ್ಗೆ 10 ಗಂಟೆಗೆ ಪ್ರಮಾಣವಚನ ಸ್ವೀಕರಿಸಲಿದ್ದಾರೆ. ವಿಶೇಷವೆಂದರೆ, ಅಕ್ಟೋಬರ್ 16 ಅವರ ಹುಟ್ಟುಹಬ್ಬವೂ ಆಗಿದ್ದು, ಜನ್ಮದಿನದಂದೇ ರಾಜ್ಯದ ಅತ್ಯುನ್ನತ ಸಾಂವಿಧಾನಿಕ ಹುದ್ದೆಯ ಜವಾಬ್ದಾರಿ ವಹಿಸಿಕೊಳ್ಳಲಿದ್ದಾರೆ.ಜನ್ಮದಿನದಂದೇ ಹೊಸ ಜವಾಬ್ದಾರಿ!

ಹುಟ್ಟುಹಬ್ಬದ ದಿನವೇ ರಾಜ್ಯಪಾಲರಾಗಿ ಪ್ರಮಾಣ ವಚನ ಸ್ವೀಕರಿಸುತ್ತಿರುವುದು ಸುಧಾ ಯಾದವ್ ಅವರಿಗೆ ವಿಶೇಷ ಕ್ಷಣವಾಗಲಿದೆ. ವೈಯಕ್ತಿಕವಾಗಿ ಸಂಭ್ರಮದ ದಿನವಾಗಿರುವ ಜನ್ಮದಿನದಂದೇ ರಾಜ್ಯದ ಸಾಂವಿಧಾನಿಕ ಮುಖ್ಯಸ್ಥೆಯಾಗಿ ಹೊಸ ಅಧ್ಯಾಯ ಆರಂಭಿಸಲಿದ್ದಾರೆ.

ಬೆಂಗಳೂರಿನ ಲೋಕಭವನದ ಗಾಜಿನಮನೆಯಲ್ಲಿ ಬೆಳಿಗ್ಗೆ 10 ಗಂಟೆಗೆ ಕಾರ್ಯಕ್ರಮ ನಡೆಯಲಿದೆ. ರಾಜ್ಯಪಾಲರ ನೇಮಕಾತಿಗೆ ಸಂಬಂಧಿಸಿದಂತೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇತ್ತೀಚೆಗೆ ಕರ್ನಾಟಕ ಸೇರಿದಂತೆ ಆರು ರಾಜ್ಯ ಗಳಿಗೆ ಹೊಸ ರಾಜ್ಯಪಾಲರನ್ನು ನೇಮಿಸಿ ಆದೇಶ ಹೊರಡಿಸಿದ್ದರು. ಈ ನಿರ್ಧಾರದಡಿ ನಾಲ್ವರಿಗೆ ಹೊಸದಾಗಿ ರಾಜ್ಯಪಾಲರ ಜವಾಬ್ದಾರಿ ನೀಡಲಾಗಿದ್ದು, ಇಬ್ಬರು ಹಾಲಿ ರಾಜ್ಯಪಾಲರನ್ನು ಬೇರೆ ರಾಜ್ಯಗಳಿಗೆ ವರ್ಗಾಯಿಸಲಾಗಿದೆ. ಸುಧಾ ಯಾದವ್ ಅವರ ಪ್ರಮಾಣವಚನ ದೊಂದಿಗೆ ಕರ್ನಾಟಕದ ರಾಜ್ಯಪಾಲ ರಾಗಿ ಅವರ ಅಧಿಕೃತ ಜವಾಬ್ದಾರಿ ಆರಂಭವಾಗಲಿದೆ.ಹುಟ್ಟುಹಬ್ಬದ ಸಂಭ್ರಮದ ನಡುವೆಯೇ ರಾಜ್ಯಪಾಲ ರಾಗಿ ಅಧಿಕಾರ ವಹಿಸಿಕೊಳ್ಳಲಿರುವ ಸುಧಾ ಯಾದವ್ ಅವರ ಪ್ರಮಾಣ ವಚನ ಸಮಾರಂಭದತ್ತ ಈಗ ಎಲ್ಲರ ಗಮನ ನೆಟ್ಟಿದೆ.

# ಬರ: 60 ಸಾವಿರ ಕೋಟಿ ರೂ.ಗೂ ಅಧಿಕ ನಷ್ಟ- ಪರಂ

**9 ತಾಲೂಕುಗಳ ಸೇರ್ಪಡೆಯೊಂದಿಗೆ ಒಟ್ಟು ಬರಪೀಡಿತ ತಾಲೂಕುಗಳ ಸಂಖ್ಯೆ 226ಕ್ಕೆ ಏರಿಕೆ**

**ಬೆಂಗಳೂರು, ಅ.15:** ರಾಜ್ಯದಲ್ಲಿ ಹೊಸದಾಗಿ ಒಂಬತ್ತು ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದ್ದು, ಇದರೊಂದಿಗೆ ಒಟ್ಟು 226 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಗುರುತಿಸಲಾಗಿದೆ. ಬರದಿಂದ ಉಂಟಾಗಿರುವ ನಷ್ಟದ ಕುರಿತು ಅಂತಿಮ ಮನವಿಪತ್ರ (ಮೆಮೊರಾಂಡಮ್) ಸಿದ್ಧಪಡಿಸ ಲಾಗುತ್ತಿದ್ದು, ಮುಂದಿನ ಒಂದೆರಡು ದಿನಗಳಲ್ಲಿ ಪೂರ್ಣಗೊಳ್ಳಲಿದೆ ಎಂದು ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದರು. ಸಚಿವ ಸಂಪುಟ ಸಭೆಯ ಬಳಿಕ ಮಾಧ್ಯಮ ದವರೊಂದಿಗೆ ಮಾತನಾಡಿದ ಅವರು, ಈ ಹಿಂದೆ 217 ತಾಲ್ಲೂಕುಗಳನ್ನು ಬರಪೀಡಿತವೆಂದು ಘೋಷಿಸಲಾಗಿತ್ತು. ಇದೀಗ ಮತ್ತೆ ಒಂಬತ್ತು ತಾಲ್ಲೂಕುಗಳನ್ನು ಸೇರ್ಪಡೆಗೊಳಿಸಿರುವುದರಿಂದ ಒಟ್ಟು ಸಂಖ್ಯೆ 226ಕ್ಕೆ ಏರಿಕೆಯಾಗಿದೆ. ನಷ್ಟದ ಕುರಿತು ಈಗಾಗಲೇ 46,000 ಕೋಟಿಯಷ್ಟು ಅಂದಾಜು ಮಾಡಲಾಗಿದೆ. ಅಂತಿಮ ಲೆಕ್ಕಾಚಾರದಲ್ಲಿ ನಷ್ಟದ ಪ್ರಮಾಣ 60,000 ಕೋಟಿ ರೂ.ಗಳಿಂದ 70,000 ಕೋಟಿಯವರೆಗೆ ತಲುಪಬಹುದು ಎಂಬ ಪ್ರಾಥಮಿಕ ಅಂದಾಜುಗಳಿವೆ. ಈ ಬಾರಿಯೂ 60,000 ಕೋಟಿಯಷ್ಟು ನಷ್ಟ ಸಂಭವಿಸಿದರೆ, ಮಾರ್ಗಸೂಚಿಗಳ ಪ್ರಕಾರ 18,000–20,000 ಕೋಟಿ ರೂ.ವರೆಗೆ ಪರಿಹಾರ ಕೋರಬೇಕಾಗಬಹುದು ಎಂದು ಹೇಳಿದರು.

ಉಳಿದ ತಾಲ್ಲೂಕುಗಳಲ್ಲಿ ಬರ ಪರಿಸ್ಥಿತಿಯನ್ನು ಪರಿಶೀಲಿಸಲಾಗುತ್ತಿದ್ದು, ಟ್ರಿಗರ್–1 ಮಾನದಂಡಗಳಡಿ ಅರ್ಹತೆ ಪಡೆದ ತಾಲ್ಲೂಕುಗಳನ್ನು ಗ್ರೌಂಡ್ ಟ್ರೂಥಿಂಗ್ ಪ್ರಕ್ರಿಯೆಗೆ ಒಳಪಡಿಸಲಾಗುವುದು. ಈ ಪ್ರಕ್ರಿಯೆಯಲ್ಲಿ ಅರ್ಹತೆ ಕಂಡುಬಂದರೆ ಮತ್ತಷ್ಟು ತಾಲ್ಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು. ಇಲ್ಲವಾದಲ್ಲಿ ಪ್ರಸ್ತುತ ಘೋಷಿಸಿರುವ 226 ತಾಲ್ಲೂಕುಗಳ ಪಟ್ಟಿಯೇ ಅಂತಿಮವಾಗಲಿದೆ ಎಂದು ಸ್ಪಷ್ಟಪಡಿಸಿದರು.

# ಹಿಂದೂ ಧರ್ಮದಿಂದ ಇಸ್ಲಾಂಗೆ ಮತಾಂತರಗೊಂಡವರಿಗೆ ಓಬಿಸಿ ಮೀಸಲಾತಿ ಇಲ್ಲ

## ಮದ್ರಾಸ್ ಹೈಕೋರ್ಟ್ ಆದೇಶ ಎತ್ತಿಹಿಡಿದ ಸುಪ್ರೀಂ ಕೋರ್ಟ್

**ನವದೆಹಲಿ, ಅ.15:** ಹಿಂದೂ ಧರ್ಮದಿಂದ ಇಸ್ಲಾಂ ಧರ್ಮಕ್ಕೆ ಮತಾಂತರಗೊಂಡ ಮಾತ್ರಕ್ಕೆ ಹಿಂದುಳಿದ ವರ್ಗದ ಮುಸ್ಲಿಂ ಮೀಸಲಾತಿ ಪಡೆಯಲು ಅರ್ಹರಾಗುವುದಿಲ್ಲ ಎಂದು ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ. ಈ ಮೂಲಕ ಮತಾಂತರಗೊಂಡವರಿಗೆ ಮೀಸಲಾತಿ ಸೌಲಭ್ಯ ಕಲ್ಪಿಸಲು ತಮಿಳುನಾಡು ಸರ್ಕಾರ ಹೊರಡಿಸಿದ್ದ ಆದೇಶವನ್ನು ರದ್ದುಗೊಳಿಸಿದ್ದ ಮದ್ರಾಸ್ ಹೈಕೋರ್ಟ್‌ನ ತೀರ್ಪನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದಿದೆ. ನ್ಯಾಯಮೂರ್ತಿಗಳಾದ ಪ್ರಶಾಂತ್‌ಕುಮಾರ್ ಮಿಶ್ರಾ ಮತ್ತು ಚಂದ್ರಶೇಖರ್ ಅವರನ್ನೊಳಗೊಂಡ ಪೀಠ ಈ ತೀರ್ಪು ನೀಡಿದೆ.

ಮತಾಂತರದಿಂದ ವ್ಯಕ್ತಿಯ ಹಿಂದಿನ ಜಾತಿ ಅಥವಾ ಸಮುದಾಯದ ಸ್ಥಾನಮಾನವು ಸ್ವಯಂಚಾಲಿತವಾಗಿ ಇಸ್ಲಾಂ ಧರ್ಮದ ಅಧಿಸೂಚಿತ ಹಿಂದುಳಿದ ವರ್ಗದ ಸಮುದಾಯಕ್ಕೆ ವರ್ಗಾವಣೆಯಾಗುವುದಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ತಮಿಳುನಾಡಿನಲ್ಲಿ ಹಿಂದುಳಿದ ವರ್ಗದ ಮುಸ್ಲಿಮರೆಂದು ಅಧಿಸೂಚಿಸಲಾದ ಏಳು ಸಮುದಾಯಗಳಲ್ಲಿ ಒಂದಕ್ಕೆ ಸೇರಿದವರೆಂದು ಗುರುತಿಸಿಕೊಳ್ಳಲು ಕೇವಲ ಧರ್ಮಾಂತರ




ಸಾಕಾಗುವುದಿಲ್ಲ. ಆ ಸಮುದಾಯಕ್ಕೆ ಸೇರಿದ ಅರ್ಹತೆಯನ್ನು ಸಂಬಂಧಿತ ಕಾನೂನು ಮತ್ತು ನಿಯಮಗಳ ಆಧಾರದಲ್ಲಿ ನಿರ್ಧರಿಸಬೇಕಾಗುತ್ತದೆ ಎಂದು ಪೀಠ ಹೇಳಿದೆ.

**2024ರ ಸರ್ಕಾರದ ಆದೇಶವೇನು?**

2024ರ ಮಾರ್ಚ್ 9ರಂದು ತಮಿಳುನಾಡು ಸರ್ಕಾರ ಹೊರಡಿಸಿದ್ದ ಸರ್ಕಾರಿ ಆದೇಶದ ಪ್ರಕಾರ, ಹಿಂದುಳಿದ ವರ್ಗಗಳು (BC), ಅತ್ಯಂತ ಹಿಂದುಳಿದ ವರ್ಗಗಳು (MBC), ಅಧಿಸೂಚಿತವಲ್ಲದ ಸಮುದಾಯಗಳು (DNC) ಮತ್ತು ಪರಿಶಿಷ್ಟ ಜಾತಿಗಳಿಗೆ (SC) ಸೇರಿದವರು ಇಸ್ಲಾಂಗೆ ಮತಾಂತರಗೊಂಡ ಬಳಿಕ ಹಿಂದುಳಿದ ವರ್ಗದ ಮುಸ್ಲಿಮರ ಸ್ಥಾನಮಾನ ಪಡೆಯಲು ಅವಕಾಶ ಕಲ್ಪಿಸಲಾಗಿತ್ತು. ಅದರಂತೆ, ಅಧಿಸೂಚಿತ ಏಳು ಮುಸ್ಲಿಂ ಸಮುದಾಯಗಳಲ್ಲಿ ಒಂದಕ್ಕೆ ಸೇರಿದವರೆಂದು ಪರಿಗಣಿಸಿ ಸಮುದಾಯ ಪ್ರಮಾಣಪತ್ರ ನೀಡುವ ವ್ಯವಸ್ಥೆ ಮಾಡಲಾಗಿತ್ತು.

ಆದರೆ, ಈ ಆದೇಶವನ್ನು ಪ್ರಶ್ನಿಸಿದ ಪ್ರಕರಣದಲ್ಲಿ ಮದ್ರಾಸ್ ಹೈಕೋರ್ಟ್, ಧರ್ಮಾಂತರದ ಆಧಾರದ ಮೇಲೆ ವ್ಯಕ್ತಿಯನ್ನು ನಿರ್ದಿಷ್ಟ ಹಿಂದುಳಿದ ಮುಸ್ಲಿಂ ಸಮುದಾಯಕ್ಕೆ ಸೇರಿದವರೆಂದು ಪರಿಗಣಿಸಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿತು. 2026ರ ಜೂನ್‌ನಲ್ಲಿ ಸರ್ಕಾರದ ಆದೇಶವನ್ನು ಅಸಂವಿಧಾನಿಕ ಎಂದು ಘೋಷಿಸಿ ರದ್ದುಗೊಳಿಸಿತು.

**ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ**

ಮದ್ರಾಸ್ ಹೈಕೋರ್ಟ್‌ನ ತೀರ್ಪನ್ನು ಪ್ರಶ್ನಿಸಿ ತಮಿಳುನಾಡು ಸರ್ಕಾರ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿತ್ತು. ಆಗಸ್ಟ್‌ನಲ್ಲಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಪೀಠ ತೀರ್ಪನ್ನು ಕಾಯ್ದಿರಿಸಿತ್ತು. ಇಂದು ರಾಜ್ಯ ಸರ್ಕಾರದ ಅರ್ಜಿಯನ್ನು ವಜಾಗೊಳಿಸಿ ಹೈಕೋರ್ಟ್ ತೀರ್ಪನ್ನು ಎತ್ತಿಹಿಡಿದಿದೆ.

ಮತಾಂತರದಿಂದ ಮಾತ್ರ ವ್ಯಕ್ತಿಯು ತಮಿಳುನಾಡಿನಲ್ಲಿ ಅಧಿಸೂಚಿತವಾಗಿರುವ ಏಳು ಹಿಂದುಳಿದ ಮುಸ್ಲಿಂ ಸಮುದಾಯಗಳಲ್ಲಿ ಒಂದರ ಸದಸ್ಯನಾಗುವುದಿಲ್ಲ. ಹಿಂದಿನ ಜಾತಿ ಅಥವಾ ಸಮುದಾಯದ ಸ್ಥಾನಮಾನವನ್ನು ಹೊಸ ಧರ್ಮದ ಹಿಂದುಳಿದ ವರ್ಗದ ಸ್ಥಾನಮಾನಕ್ಕೆ ಸ್ವಯಂಚಾಲಿತವಾಗಿ ವರ್ಗಾಯಿಸಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಸ್ಪಷ್ಟಪಡಿಸಿದೆ. ಇದಲ್ಲದೆ, ಖಾಸಗಿ ಧಾರ್ಮಿಕ ಸಂಸ್ಥೆಯೊಂದು ನೀಡುವ ನಿರ್ಧಾರ ಅಥವಾ ಪ್ರಮಾಣಪತ್ರದ ಆಧಾರದ ಮೇಲೆಯೇ ವ್ಯಕ್ತಿಯ ಕಾನೂನುಬದ್ಧ ಮೀಸಲಾತಿ ಅರ್ಹತೆಯನ್ನು ಅಂತಿಮವಾಗಿ ನಿರ್ಧರಿಸಲು ಸಾಧ್ಯವಿಲ್ಲ ಎಂದು ನ್ಯಾಯಪೀಠ ಹೇಳಿದೆ.

**ಪರಿಶಿಷ್ಟ ಜಾತಿ ಮೀಸಲಾತಿಯ ಬಗ್ಗೆಯೂ ಸ್ಪಷ್ಟನೆ**

1950ರ ಸಂವಿಧಾನದ ಪರಿಶಿಷ್ಟ ಜಾತಿಗಳ ಆದೇಶದ ಪ್ರಕಾರ, ಹಿಂದೂ, ಸಿಖ್ ಅಥವಾ ಬೌದ್ಧ ಧರ್ಮವನ್ನು ಹೊರತುಪಡಿಸಿದ ಧರ್ಮವನ್ನು ಅನುಸರಿಸುವ ವ್ಯಕ್ತಿಯನ್ನು ಪರಿಶಿಷ್ಟ ಜಾತಿಗೆ ಸೇರಿದವರೆಂದು ಪರಿಗಣಿಸಲು ಸಾಧ್ಯವಿಲ್ಲ ಎಂಬ ಅಂಶವನ್ನೂ ನ್ಯಾಯಾಲಯ ಉಲ್ಲೇಖಿಸಿದೆ. ಅಲ್ಲದೆ, ಮತಾಂತರಗೊಂಡ ವ್ಯಕ್ತಿ ಮತ್ತೆ ಹಿಂದೂ ಧರ್ಮಕ್ಕೆ ಮರಳಿದರೂ, ಹಿಂದಿನ ಮೀಸಲಾತಿ ಅರ್ಹತೆ ಸ್ವಯಂಚಾಲಿತವಾಗಿ ಮರುಸ್ಥಾಪನೆಯಾಗುವುದಿಲ್ಲ. ಅಂತಹ ಸಂದರ್ಭಗಳಲ್ಲಿ ಅನ್ವಯಿಸುವ ಕಾನೂನು ಮತ್ತು ಸಂವಿಧಾನಾತ್ಮಕ ಮಾನದಂಡಗಳ ಆಧಾರದಲ್ಲಿ ಅರ್ಹತೆಯನ್ನು ನಿರ್ಧರಿಸಬೇಕಾಗುತ್ತದೆ ಎಂದು ಪೀಠ ಸ್ಪಷ್ಟಪಡಿಸಿದೆ.

### ಪ್ರಕರಣದ ಹಿನ್ನೆಲೆ

**ಈ ಪ್ರಕರಣವು ತಮಿಳುನಾಡಿನ ತೂತ್ತುಕುಡಿ ಜಿಲ್ಲೆಯ ಸಮೀರ್ ಅಹಮದ್ ಎನ್. ಎಂಬುವವರ ಮನವಿಯಿಂದ ಆರಂಭವಾಗಿತ್ತು. ಅವರು ಹಿಂದೆ ಪರಮಶಿವಂ ಎಂಬ ಹೆಸರಿನಿಂದ ಗುರುತಿಸಿಕೊಂಡಿದ್ದು, 2015ರಲ್ಲಿ ಇಸ್ಲಾಂ ಧರ್ಮಕ್ಕೆ ಮತಾಂತರಗೊಂಡು ಸಮೀರ್ ಅಹಮದ್ ಎಂದು ಹೆಸರು ಬದಲಿಸಿಕೊಂಡಿದ್ದರು. ಬಳಿಕ ಇಸ್ಲಾಮಿಕ್ ಸಂಪ್ರದಾಯದಂತೆ ವಿವಾಹವಾಗಿದ್ದರು. ತಮಿಳುನಾಡಿನಲ್ಲಿ ಹಿಂದುಳಿದ ವರ್ಗದ ಮುಸ್ಲಿಮರೆಂದು ಗುರುತಿಸಲ್ಪಟ್ಟಿರುವ ಏಳು ಸಮುದಾಯಗಳಲ್ಲಿ ಒಂದಾದ ಮುಸ್ಲಿಂ ಲೆಬ್ಬೈ ಸಮುದಾಯಕ್ಕೆ ಸೇರಿದ ಪ್ರಮಾಣಪತ್ರ ನೀಡುವಂತೆ ಅವರು ಅರ್ಜಿ ಸಲ್ಲಿಸಿದ್ದರು. ಆದರೆ, ತಹಶೀಲ್ದಾರ್ ಅವರ ಅರ್ಜಿಯನ್ನು ತಿರಸ್ಕರಿಸಿದ್ದರು. ಇದನ್ನು ಪ್ರಶ್ನಿಸಿ ಸಮೀರ್ ಅಹಮದ್ ಮದ್ರಾಸ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.**

# ಎಸ್‌ಐಆರ್ ವಿರುದ್ಧ ಪ್ರತಿಭಟನೆ: ರಾಹುಲ್ ನಡವಳಿಕೆಗೆ ಸುಪ್ರೀಂ ಆಕ್ಷೇಪ

**ಜಂತರ್ ಮಂತರ್ ಪ್ರತಿಭಟನಾ ಸ್ಥಳದ ಸ್ಥಾನಮಾನ ರದ್ದು ಪ್ರಶ್ನಿಸಿ ಅರ್ಜಿ । ಪೊಲೀಸರ ವಿರುದ್ಧದ ಆರೋಪಗಳ ತನಿಖೆಗೆ ಸಿಸಿಟಿವಿ ದೃಶ್ಯ ಸಂರಕ್ಷಣೆಗೆ ಸೂಚನೆ**

**ನವದೆಹಲಿ, ಅ.15:** ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ವಿರುದ್ಧ ಕಾಂಗ್ರೆಸ್ ನೇತೃತ್ವದ ಇಂಡಿಯಾ ಒಕ್ಕೂಟದ ನಾಯಕರು ನಡೆಸಿದ ಪ್ರತಿಭಟನಾ ಮೆರವಣಿಗೆಯ ವಿಚಾರವಾಗಿ ಸುಪ್ರೀಂ ಕೋರ್ಟ್ ಆಕ್ಷೇಪ ವ್ಯಕ್ತಪಡಿಸಿದೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ನಡವಳಿಕೆ ಕುರಿತು ಮುಂದಿನ ವಿಚಾರಣೆಯಲ್ಲಿ ಪ್ರಶ್ನಿಸುವುದಾಗಿ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ತಿಳಿಸಿದ್ದಾರೆ. ಇದೇ ವೇಳೆ, ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸಲು ಅವಕಾಶ ನೀಡುವ ವಿಚಾರ ಹಾಗೂ ಪ್ರತಿಭಟನಾಕಾರರ ಮೇಲೆ ಪೊಲೀಸರು ದೌರ್ಜನ್ಯ ನಡೆಸಿದ್ದಾರೆಂಬ ಆರೋಪಗಳ ಸಂಬಂಧವೂ ನ್ಯಾಯಾಲಯ ವಿಚಾರಣೆ ನಡೆಸಿದೆ.

ಎಸ್‌ಐಆರ್ ನಿರ್ಧಾರಗಳನ್ನು ಪ್ರಶ್ನಿಸಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ ಇಂಡಿಯಾ ಒಕ್ಕೂಟದ ನಾಯಕರು ಸಲ್ಲಿಸಿರುವ ಅರ್ಜಿಯ ವಿಚಾರಣೆ ವೇಳೆ ಸುಪ್ರೀಂ ಕೋರ್ಟ್ ಈ ಅಭಿಪ್ರಾಯ ವ್ಯಕ್ತಪಡಿಸಿದೆ. ಅರ್ಜಿಗೆ ಸಂಬಂಧಿಸಿದಂತೆ ಚುನಾವಣಾ ಆಯೋಗ, ಮುಖ್ಯ ಚುನಾವಣಾ ಆಯುಕ್ತರು ಹಾಗೂ ಇತರ ಸಂಬಂಧಪಟ್ಟ ಅಧಿಕಾರಿಗಳಿಗೆ ನ್ಯಾಯಾಲಯ ನೋಟಿಸ್ ಜಾರಿಗೊಳಿಸಿದೆ. ವಿಚಾರಣೆಯ



ವೇಳೆ ಪ್ರತಿಭಟನೆಯ ಉದ್ದೇಶದ ಬಗ್ಗೆಯೂ ಪ್ರಶ್ನಿಸುವುದಾಗಿ ನ್ಯಾಯಾಲಯ ತಿಳಿಸಿದೆ.

ಅ.12ರಂದು ರಾಹುಲ್ ಗಾಂಧಿ ಸೇರಿದಂತೆ ಇಂಡಿಯಾ ಒಕ್ಕೂಟದ ನಾಯಕರು ಸುಪ್ರೀಂ ಕೋರ್ಟ್‌ನತ್ತ ಪ್ರತಿಭಟನಾ ಮೆರವಣಿಗೆ ನಡೆಸಿದ ವಿಚಾರವೂ ವಿಚಾರಣೆಯ ಸಂದರ್ಭದಲ್ಲಿ ಪ್ರಸ್ತಾಪವಾಯಿತು. ಈ ಸಂಬಂಧ ನಾಲ್ವರು ವಕೀಲರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ವೇಳೆ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಮತ್ತು ಹಿರಿಯ ವಕೀಲ ಗೌರವ್ ಭಾಟಿಯಾ ಮೆರವಣಿಗೆಯ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದರು. ಸುಪ್ರೀಂ ಕೋರ್ಟ್‌ನತ್ತ ರಾಜಕೀಯ ಮೆರವಣಿಗೆ ನಡೆಸಿರುವುದನ್ನು ಒಪ್ಪಲು ಸಾಧ್ಯವಿಲ್ಲ ಮತ್ತು ಇಂತಹ ಘಟನೆ ನಡೆಯಬಾರದಿತ್ತು ಎಂದು ಭಾಟಿಯಾ ಹೇಳಿದರು.

ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಾಂಗವನ್ನು ಯಾರೂ ಸೋಲಿಸಲು ಸಾಧ್ಯವಿಲ್ಲ ಎಂದು ಹೇಳಿದರು. ಅರ್ಜಿಗೆ ಸಂಬಂಧಿಸಿದಂತೆ ನೋಟಿಸ್ ಜಾರಿಗೊಳಿಸಿರುವುದನ್ನು ಯಾರನ್ನಾದರೂ ಖಂಡಿಸಿದಂತೆ ಪರಿಗಣಿಸಬಾರದು. ಆದರೆ, ಮುಂದಿನ ವಿಚಾರಣೆಯ ದಿನದಂದು ಅರ್ಜಿದಾರರಲ್ಲಿ ಒಬ್ಬರ ನಡವಳಿಕೆ ಕುರಿತು ಪ್ರಶ್ನಿಸಲು ಬಯಸುವುದಾಗಿ ರಾಹುಲ್ ಗಾಂಧಿ ಪರ ಹಾಜರಾಗಿದ್ದ ಹಿರಿಯ ವಕೀಲ ಕಪಿಲ್ ಸಿಬಲ್ ಅವರಿಗೆ ತಿಳಿಸಿದರು.

### ಜಂತರ್ ಮಂತರ್ ಪ್ರತಿಭಟನಾ ಸ್ಥಳದ ಸ್ಥಾನಮಾನದ ವಿವಾದ

ದೆಹಲಿಯ ಪ್ರಮುಖ ಪ್ರತಿಭಟನಾ ಸ್ಥಳವಾಗಿರುವ ಜಂತರ್ ಮಂತರ್‌ಗೆ ಪ್ರತಿಭಟನಾ ಸ್ಥಳದ ಸ್ಥಾನಮಾನ ನಿರಾಕರಿಸಿರುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಯ ವಿಚಾರಣೆಯನ್ನೂ ಸುಪ್ರೀಂ ಕೋರ್ಟ್ ನಡೆಸಿತು. ಈ ಸಂಬಂಧ ಕೇಂದ್ರ ಸರ್ಕಾರ ಮತ್ತು ದೆಹಲಿ ಪೊಲೀಸರಿಗೆ ನ್ಯಾಯಾಲಯ ನೋಟಿಸ್ ಜಾರಿಗೊಳಿಸಿ ಪ್ರತಿಕ್ರಿಯೆ ಕೇಳಿದೆ.

ಸಮಿತಿಯೊಂದರ ಶಿಫಾರಸಿನ ಮೇರೆಗೆ ಜಂತರ್ ಮಂತರ್‌ಗೆ ಪ್ರತಿಭಟನಾ ಸ್ಥಳದ ಸ್ಥಾನಮಾನ ನಿರಾಕರಿಸುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಕೇಂದ್ರ ಸರ್ಕಾರದ ಪರವಾಗಿ ಹಾಜರಾಗಿದ್ದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ನ್ಯಾಯಾಲಯಕ್ಕೆ ತಿಳಿಸಿದರು. ಕೇಂದ್ರ ಸರ್ಕಾರ ಮತ್ತು ದೆಹಲಿ ಪೊಲೀಸರ ಉತ್ತರವನ್ನು ಪರಿಶೀಲಿಸಿದ ಬಳಿಕ ಮುಂದಿನ ಕ್ರಮದ ಬಗ್ಗೆ ನಿರ್ಧರಿಸಲಾಗುವುದು ಎಂದು ನ್ಯಾಯಾಲಯ ಸ್ಪಷ್ಟಪಡಿಸಿತು.

### ಸಿಸಿಟಿವಿ, ಬಾಡಿ ಕ್ಯಾಮರಾ ದೃಶ್ಯ ಸಂರಕ್ಷಣೆಗೆ ಸೂಚನೆ

ಪ್ರತಿಭಟನೆಯಲ್ಲಿ ಭಾಗವಹಿಸಿದ್ದವರ ಮೇಲೆ ಪೊಲೀಸರು ದೌರ್ಜನ್ಯ ನಡೆಸಿದ್ದಾರೆ ಹಾಗೂ ಕೆಲವರನ್ನು ಅನಧಿಕೃತವಾಗಿ ಬಂಧಿಸಲಾಗಿದೆ ಎಂಬ ಆರೋಪಗಳ ಬಗ್ಗೆಯೂ ಸುಪ್ರೀಂ ಕೋರ್ಟ್ ಗಮನ ಹರಿಸಿದೆ. ಪ್ರಕರಣಕ್ಕೆ ಸಂಬಂಧಿಸಿದ ಸಿಸಿಟಿವಿ ದೃಶ್ಯಗಳು ಮತ್ತು ಪೊಲೀಸರ ಬಾಡಿ ಕ್ಯಾಮರಾಗಳಲ್ಲಿ ದಾಖಲಾಗಿರುವ ದೃಶ್ಯಗಳನ್ನು ಸಂರಕ್ಷಿಸುವಂತೆ ನ್ಯಾಯಾಲಯ ಸೂಚನೆ ನೀಡಿದೆ.

ಪ್ರತಿಭಟನಾಕಾರರ ವಿರುದ್ಧದ ಪೊಲೀಸ್ ಕ್ರಮಗಳು, ಬಂಧನಗಳಿಗೆ ಸಂಬಂಧಿಸಿದ ಆರೋಪಗಳು ಮತ್ತು ಪ್ರತಿಭಟನೆ ನಡೆಸಲು ಅವಕಾಶ ನೀಡುವ ವಿಚಾರಗಳು ಮುಂದಿನ ವಿಚಾರಣೆಯಲ್ಲಿ ಮತ್ತಷ್ಟು ಚರ್ಚೆಗೆ ಬರಲಿವೆ. ಎಸ್‌ಐಆರ್ ವಿರುದ್ಧದ ಅರ್ಜಿಯ ವಿಚಾರಣೆಯ ಜತೆಗೆ ಪ್ರತಿಭಟನಾ ಮೆರವಣಿಗೆಯ ಸಂದರ್ಭದಲ್ಲಿ ನಡೆದ ಘಟನೆಗಳ ಬಗ್ಗೆಯೂ ಸುಪ್ರೀಂ ಕೋರ್ಟ್ ಪರಿಶೀಲನೆ ನಡೆಸುವ ಸಾಧ್ಯತೆಯಿದೆ.

# ಅಂಕಿತಾ ಭಂಡಾರಿ ಪೋಷಕರ ಬಂಧನ ಹೇಡಿತನ: ಮಲ್ಲಿಕಾರ್ಜುನ ಖರ್ಗೆ ಆಕ್ರೋಶ

**ನವದೆಹಲಿ, ಅ.15:** ಅಂಕಿತಾ ಭಂಡಾರಿ ಕೊಲೆ ಪ್ರಕರಣದಲ್ಲಿ ಆರೋಪಿಯಾಗಿದ್ದಾರೆ ಎಂದು ಶಂಕಿಸಲಾಗಿರುವ ಬಿಜೆಪಿ ನಾಯಕ ದುಷ್ಯಂತ್‌ಕುಮಾರ್ ಗೌತಮ್ ಅವರನ್ನು ಸಿಕ್ಕಿಂ ರಾಜ್ಯಪಾಲರನ್ನಾಗಿ ನೇಮಿಸಲಾಗಿದೆ. ಈ ನೇಮಕಾತಿಯನ್ನು ವಿರೋಧಿಸಿ, ನ್ಯಾಯಕ್ಕಾಗಿ ಆಗ್ರಹಿಸಿ ದೆಹಲಿಯ



ಇಂಡಿಯಾ ಗೇಟ್ ಆವರಣದಲ್ಲಿ ಧರಣಿ ನಡೆಸುತ್ತಿದ್ದ ಅಂಕಿತಾ ಭಂಡಾರಿ ಅವರ ಪೋಷಕರನ್ನು ದೆಹಲಿ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಪೊಲೀಸರ ಈ ಕೃತ್ಯವನ್ನು ಖಂಡಿಸಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮೋದಿ ಸರ್ಕಾರದ ಹೇಡಿತನ ಮತ್ತು ಸಂವೇದನಾರಹಿತ ಕ್ರೌರ್ಯದ ಪರಮಾವಧಿ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅಂಕಿತಾ ಪೋಷಕರ ಬಂಧನವನ್ನು ಖಂಡಿಸಿ ಟ್ವೀಟ್ ಮಾಡಿರುವ ಖರ್ಗೆ, ತಮ್ಮ ಮಗಳನ್ನು ಕಳೆದುಕೊಂಡು ಕಣ್ಣೀರಿನಲ್ಲಿ ಕೈತೊಳೆಯುತ್ತಿರುವ ಪೋಷಕರಿಗೆ ನ್ಯಾಯ ಒದಗಿಸುವ ಬದಲು ಪೊಲೀಸರ ಮೂಲಕ ಬಂಧಿಸಿರುವುದು ಅತ್ಯಂತ ನಾಚಿಕೆಗೇಡಿನ ಮತ್ತು ಖಂಡನೀಯ ಎಂದಿದ್ದಾರೆ.

ಪ್ರಕರಣದಲ್ಲಿ ಆರೋಪ ಎದುರಿಸುತ್ತಿರುವ ಬಿಜೆಪಿ ನಾಯಕರೊಬ್ಬರನ್ನು ರಾಜ್ಯಪಾಲರ ಹುದ್ದೆಗೆ ನೇಮಕ ಮಾಡಿ ಪುರಸ್ಕರಿಸಲಾಗುತ್ತಿದೆ. ಆದರೆ, ನ್ಯಾಯಕ್ಕಾಗಿ ಹಂಬಲಿಸುತ್ತಿರುವ ಸಂತ್ರಸ್ತೆಯ ಹೆತ್ತವರನ್ನು ಪೊಲೀಸರಿಂದ ಬಂಧಿಸಲಾಗುತ್ತಿದೆ. ಅಂಕಿತಾ ಭಂಡಾರಿ ಅವರಿಗೆ ನ್ಯಾಯ ಸಿಗುವವರೆಗೆ ಕಾಂಗ್ರೆಸ್ ಪಕ್ಷವು ತನ್ನ ಹೋರಾಟವನ್ನು ಮುಂದುವರಿಸಲಿದೆ ಎಂದು ಅವರು ದೃಢವಾಗಿ ಹೇಳಿದ್ದಾರೆ.

ಇಂಡಿಯಾ ಗೇಟ್ ಬಳಿ ಶಾಂತಿಯುತ ಪ್ರತಿಭಟನೆ ನಡೆಸುತ್ತಿದ್ದ ಅಂಕಿತಾ ಭಂಡಾರಿ ಅವರ ತಂದೆ ಮತ್ತು ತಾಯಿಯನ್ನು ಗುರುವಾರ ಮುಂಜಾನೆ ಸುಮಾರು 4 ಗಂಟೆಗೆ ದೆಹಲಿ ಪೊಲೀಸರು ವಶಕ್ಕೆ ಪಡೆದಿದ್ದರು. ಅವರನ್ನು ತಿಲಕ್ ಮಾರ್ಗ್ ಪೊಲೀಸ್ ಠಾಣೆಗೆ ಕರೆದೊಯ್ದಿದ್ದರು. ಈ ಸುದ್ದಿ ತಿಳಿಯುತ್ತಿದ್ದಂತೆ ಕಾಂಗ್ರೆಸ್ ನಾಯಕರಾದ ಪವನ್ ಖೇರಾ, ಇಮ್ರಾನ್ ಪ್ರತಾಪ್ ಗಢಿ, ಜೋತಿಮಣಿ ಸೇರಿದಂತೆ ಹಲವು ನಾಯಕರು ಪೊಲೀಸ್ ಠಾಣೆಗೆ ಧಾವಿಸಿ, ಠಾಣೆಯಲ್ಲಿ ಪ್ರತಿಭಟನೆ ನಡೆಸಿದ್ದು, ಬಳಿಕ, ಪೋಷಕರನ್ನು ಪೊಲೀಸರು ಬಿಡುಗಡೆ ಮಾಡಿದ್ದಾರೆ.

ಅಂಕಿತಾ ಕೊಲೆ ಪ್ರಕರಣದಲ್ಲಿ ವಿಐಪಿ ವ್ಯಕ್ತಿಯೊಬ್ಬರ ಪಾತ್ರವಿದೆ ಎಂಬ ಆರೋಪವಿದ್ದು, ಆ ಬಗ್ಗೆ ಸಿಬಿಐ ತನಿಖೆ ಪೂರ್ಣಗೊಳ್ಳುವವರೆಗೆ ದುಷ್ಯಂತ್ ಗೌತಮ್ ಅವರ ರಾಜ್ಯಪಾಲರ ನೇಮಕಾತಿಯನ್ನು ತಡೆಹಿಡಿಯಬೇಕು ಎಂದು ಪೋಷಕರು ಪಟ್ಟುಹಿಡಿದಿದ್ದಾರೆ.

ಪ್ರತಿಭಟನಾ ಸ್ಥಳಕ್ಕೆ ಬುಧವಾರ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ಭೇಟಿ ನೀಡಿ, ಪೋಷಕರಿಗೆ ಸಾಂತ್ವನ ಹೇಳಿದ್ದರು.

ಉತ್ತರಾಖಂಡದ ರಿಷಿಕೇಶದ ರೆಸಾರ್ಟ್ ಒಂದರಲ್ಲಿ ರಿಸೆಪ್ಷನಿಸ್ಟ್ ಆಗಿ ಕೆಲಸ ಮಾಡುತ್ತಿದ್ದ 19 ವರ್ಷದ ಅಂಕಿತಾ ಭಂಡಾರಿ ಅವರನ್ನು 2022ರ ಸೆಪ್ಟೆಂಬರ್‌ನಲ್ಲಿ ಭೀಕರವಾಗಿ ಹತ್ಯೆ ಮಾಡಲಾಗಿತ್ತು. ಈ ಪ್ರಕರಣದಲ್ಲಿ ಪ್ರಮುಖ ಆರೋಪಿ ಪುಲ್ಕಿತ್ ಆರ್ಯ ಮತ್ತು ಆತನ ಇಬ್ಬರು ಸಹಚರರಿಗೆ ಕೋರ್ಟ್ ಜೀವಾವಧಿ ಶಿಕ್ಷೆ ವಿಧಿಸಿದೆ. ಆದಾಗ್ಯೂ, ಪ್ರಕರಣದಲ್ಲಿ ವಿಐಪಿ ವ್ಯಕ್ತಿಯೊಬ್ಬರೂ ಭಾಗಿಯಾಗಿದ್ದಾರೆ ಎಂದು ಆರೋಪಿಸಲಾಗಿದ್ದು, ಆ ಬಗ್ಗೆ ಸರಿಯಾಗಿ ತನಿಖೆ ನಡೆದಿಲ್ಲ ಎಂದು ಆರೋಪಿಸಿ ಪೋಷಕರು ಹೋರಾಟ ಮುಂದುವರಿಸಿದ್ದಾರೆ.

# ಸಿಜೆಪಿಯಿಂದ ದೆಹಲಿಯಲ್ಲಿಂದು ತ್ರಿವರ್ಣಧ್ವಜ ಪ್ರತಿಭಟನೆ

**ನವದೆಹಲಿ, ಅ. 15:** ಸಿಜೆಪಿ ನಾಯಕರಾದ ಆಶುತೋಷ್ ರಂಕಾ ಮತ್ತು ಸೌರವ್‌ದಾಸ್ ಅವರ ಬಂಧನದ ಬೆನ್ನಲ್ಲೇ, ಪಕ್ಷದ ಸಂಸ್ಥಾಪಕ ಅಭಿಜೀತ್ ದೀಪ್ಕೆ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ದೇಶದಲ್ಲಿ ಅಘೋಷಿತ ತುರ್ತು ಪರಿಸ್ಥಿತಿಯನ್ನು ಹೇರಲಾಗಿದೆ ಎಂದು ಆರೋಪಿಸಿರುವ ಅವರು, ಶುಕ್ರವಾರ ನವದೆಹಲಿಯಲ್ಲಿ ತ್ರಿವರ್ಣಧ್ವಜ ಪ್ರತಿಭಟನೆ ನಡೆಸುವುದಾಗಿ ತಿಳಿಸಿದ್ದಾರೆ.

ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸಿದ ಕಾರಣಕ್ಕೆ ರಂಕಾ ಮತ್ತು ದಾಸ್ ಅವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿರುವುದನ್ನು ದೀಪ್ಕೆ ಪ್ರಶ್ನಿಸಿದ್ದಾರೆ. ದೇಶದಲ್ಲಿ ತ್ರಿವರ್ಣ ಧ್ವಜವನ್ನು ಹಿಡಿಯುವುದು ಈಗ ಅಪರಾಧವಾಗಿದೆಯೇ ಅವರು ಜಂತರ್ ಮಂತರ್‌ನಲ್ಲಿ ರಾಷ್ಟ್ರಧ್ವಜವನ್ನು ಮಾತ್ರ ಹಿಡಿದಿದ್ದರು.

ಅದರಿಂದ ಶಾಂತಿಗೆ ಹೇಗೆ ಭಂಗ ಉಂಟಾಗುತ್ತದೆ ಸರ್ಕಾರ ತುರ್ತುಪರಿಸ್ಥಿತಿಯನ್ನು ಘೋಷಿಸಬೇಕೆಂದಿದ್ದರೆ ಅಧಿಕೃತವಾಗಿ ಘೋಷಿಸಲಿ.



ಆದರೆ, ಅಘೋಷಿತ ತುರ್ತು ಪರಿಸ್ಥಿತಿಯ ರೀತಿಯಲ್ಲಿ ಕ್ರಮ ಕೈಗೊಳ್ಳುವುದು ಏಕೆ ಎಂದು ಆಕ್ಷೇಪಿಸಿದ್ದಾರೆ. ಪ್ರತಿಭಟನಾಕಾರರನ್ನು ಐದು ದಿನಗಳ ನ್ಯಾಯಾಂಗ ಬಂಧನಕ್ಕೆ ಕಳುಹಿಸಿರುವುದನ್ನೂ ದೀಪ್ಕೆ ಟೀಕಿಸಿದ್ದಾರೆ.

ಇದೇ ವೇಳೆ, ಸಂಸತ್ತಿನತ್ತ ಕಾಂಗ್ರೆಸ್ ನಡೆಸುತ್ತಿರುವ ಮೆರವಣಿಗೆಗೆ ದೀಪ್ಕೆ ಬೆಂಬಲ ವ್ಯಕ್ತಪಡಿಸಿದ್ದಾರೆ. ಕಾಂಗ್ರೆಸ್ ಮತ್ತು ತಮ್ಮ ಪಕ್ಷದ ನಡುವೆ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ ಎಂದು ಅವರು ಹೇಳಿದ್ದಾರೆ. ಸಿಜೆಪಿಗೆ ವಿದೇಶಿ ಮೂಲಗಳಿಂದ ಹಣಕಾಸು ನೆರವು ದೊರೆಯುತ್ತಿದೆ ಎಂಬ ಮಾಜಿ ಸಾಲಿಸಿಟರ್ ಜನರಲ್ ಹರೀಶ್ ಸಾಳ್ವೆ ಅವರ ಹೇಳಿಕೆಗೆ ಪ್ರತಿಕ್ರಿಯಿಸಿರುವ ದೀಪ್ಕೆ, ವಿದೇಶಿ ಹಣಕಾಸು ನೆರವಿನ ಕುರಿತು ತಮ್ಮ ಬಳಿ ಸಾಕ್ಷ್ಯಗಳಿದ್ದರೆ ಅವುಗಳನ್ನು ಸರ್ಕಾರಕ್ಕೆ ಸಲ್ಲಿಸಲಿ ಎಂದು ಸವಾಲು ಹಾಕಿದ್ದಾರೆ.

ದೆಹಲಿ ಪೊಲೀಸರು ಈ ತ್ರಿವರ್ಣಧ್ವಜ ಪ್ರತಿಭಟನೆಗೆ ಅನುಮತಿ ನೀಡುತ್ತಾರೋ ಅಥವಾ ಮುನ್ನೆಚ್ಚರಿಕೆ ಕ್ರಮವಾಗಿ ನಾಯಕರನ್ನು ತಡೆಯುತ್ತಾರೋ ಎಂಬುದು ಕುತೂಹಲಕಾರಿಯಾಗಿದೆ. ನ್ಯಾಯಾಂಗ ಬಂಧನದಲ್ಲಿರುವ ಆಶುತೋಷ್ ರಂಕಾ ಮತ್ತು ಸೌರವ್ ದಾಸ್ ಅವರ ಜಾಮೀನು ಅರ್ಜಿಯ ವಿಚಾರಣೆ ನ್ಯಾಯಾಲಯದಲ್ಲಿ ಹೇಗೆ ಸಾಗಲಿದೆ ಹಾಗೂ ವಿದೇಶಿ ನಿಧಿ ಆರೋಪಕ್ಕೆ ಸಂಬಂಧಿಸಿದಂತೆ ಸರ್ಕಾರ ಅಥವಾ ತನಿಖಾ ಸಂಸ್ಥೆಗಳು ಅಧಿಕೃತವಾಗಿ ತನಿಖೆ ಪ್ರಾರಂಭಿಸುತ್ತವೆಯೇ? ಎಂಬುದನ್ನು ಕಾದು ನೋಡಬೇಕಿದೆ.

# ವಿದೇಶಿ ಪೌರತ್ವ ನಿಯಮ ಉಲ್ಲಂಘನೆ: ಭಾರತ ತೊರೆಯುವಂತೆ ನಟ ಇಮ್ರಾನ್ ಖಾನ್‌ಗೆ ನೋಟಿಸ್

**ನವದೆಹಲಿ, ಅ.15:** ಬಾಲಿವುಡ್ ನಟ ಇಮ್ರಾನ್ ಖಾನ್ ಅವರಿಗೆ ಮುಂಬೈ ಪೊಲೀಸ್ ಇಲಾಖೆಯು ದೇಶ ತೊರೆಯುವಂತೆ ಅಧಿಕೃತ ನೋಟಿಸ್ ಜಾರಿ ಮಾಡಿದೆ. ಅಮೆರಿಕದ ಪೌರತ್ವವನ್ನು ಹೊಂದಿದ್ದು, ಭಾರತದ ವೀಸಾ ಮತ್ತು ಸಾಗರೋತ್ತರ ಭಾರತೀಯ ನಾಗರಿಕ ಕಾರ್ಡ್ ಮೂಲಕ ಇಲ್ಲಿ ವಾಸಿಸುತ್ತಿರುವ ಇಮ್ರಾನ್ ಖಾನ್, ಇತ್ತೀಚೆಗೆ ಮುಂಬೈನ ಆಗಸ್ಟ್ ಕ್ರಾಂತಿ ಮೈದಾನದಲ್ಲಿ ನಡೆದ ಕಾಕ್ರೋಚ್ ಜನತಾ ಪಕ್ಷ (ಸಿಜೆಪಿ) ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ವಿರುದ್ಧ ನಡೆದ ಈ ಪ್ರತಿಭಟನೆಯಲ್ಲಿ ಭಾಗವಹಿಸಿರುವುದು ವಿದೇಶಿ ಪೌರತ್ವ ನಿಯಮಗಳು ಮತ್ತು ಒಸಿಐ ನಿಬಂಧನೆಗಳ ಉಲ್ಲಂಘನೆಯಾಗಿದೆ ಎಂದು ಮುಂಬೈ ಪೊಲೀಸರು ಹೇಳಿದ್ದಾರೆ.

ಪ್ರತಿಭಟನೆಯ ಸಂದರ್ಭದಲ್ಲಿ ಇಮ್ರಾನ್ ಖಾನ್, ಮತ್ತು ಅವರ ಸಂಗಾತಿ, ನಟಿ ಲೇಖಾ ವಾಷಿಂಗ್ಟನ್ ಹಾಗೂ ಸೋದರ ಸಂಬಂಧಿ ಜೈನ್ ಮೇರಿ ಖಾನ್ ಅವರನ್ನು



ಪೊಲೀಸರು ವಶಕ್ಕೆ ಪಡೆದು ನಂತರ ಬಿಡುಗಡೆ ಮಾಡಿದ್ದರು. ವಶಕ್ಕೆ ಪಡೆದ ಸಂದರ್ಭದಲ್ಲಿ ಪೊಲೀಸ್ ವ್ಯಾನ್‌ನಲ್ಲಿದ್ದ ತಮ್ಮ ಚಿತ್ರವನ್ನು ಪೋಸ್ಟ್ ಮಾಡಿದ್ದ ಇಮ್ರಾನ್ ಖಾನ್, ಸ್ಪಷ್ಟವಾಗಿ ನಾನು ಡ್ರೈವ್‌ಗೆ ಹೋಗುತ್ತಿದ್ದೇನೆ ಎಂದು ವ್ಯಂಗ್ಯವಾಗಿ ಬರೆದುಕೊಂಡಿದ್ದರು. ಅಲ್ಲದೆ, ತಾವು ಯಾವುದೇ ನಿರ್ದಿಷ್ಟ ಬೇಡಿಕೆಗಳಿಗಾಗಿ ಅಲ್ಲದೆ, ಒಬ್ಬ ಸಾಮಾನ್ಯ ಮುಂಬೈ ನಗರದ ನಾಗರಿಕನಾಗಿ, ಜನರ ಸಂಚಾರ ಸ್ವಾತಂತ್ರ್ಯವನ್ನು ಯಾಕೆ ನಿರ್ಬಂಧಿಸಲಾಗುತ್ತಿದೆ ಮತ್ತು ಧ್ವನಿಯನ್ನು ಯಾಕೆ ಅಡಗಿಸಲಾಗುತ್ತಿದೆ ಎಂಬುದನ್ನು ಪ್ರಶ್ನಿಸಲು ಬಂದಿರುವುದಾಗಿ ಮಾಧ್ಯಮಗಳಿಗೆ ತಿಳಿಸಿದ್ದರು.

ಈ ಪ್ರತಿಭಟನೆಯಲ್ಲಿ ವಿದೇಶಿ ಪ್ರಜೆಗಳು ಭಾಗವಹಿಸುವುದನ್ನು ವಿರೋಧಿಸಿ ಬಿಜೆಪಿ ನಾಯಕ ಕಿರಿತ್ ಸೋಮಯ್ಯ ಅವರು ಗಮದೇವಿ ಪೊಲೀಸ್ ಠಾಣೆಗೆ ದೂರು ನೀಡಿ, ಇಮ್ರಾನ್ ಖಾನ್ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಆಗ್ರಹಿಸಿದ್ದರು. ಇದರ ಬೆನ್ನಲ್ಲೇ ಮುಂಬೈ ಪೊಲೀಸರು ಇಮ್ರಾನ್ ಖಾನ್ ಅವರಿಗೆ ನೂತನ ವಿದೇಶಿಗರ ಮತ್ತು ವಲಸೆ ಕಾಯ್ದೆ–2025ರ ಅಡಿಯಲ್ಲಿ ನೋಟಿಸ್ ಜಾರಿ ಮಾಡಿದ್ದು, ಅಕ್ಟೋಬರ್ 28 ರೊಳಗೆ ಭಾರತವನ್ನು ತೊರೆಯುವಂತೆ ಗಡುವು ನೀಡಿದ್ದಾರೆ.

# ಧ್ರುವ ರಾಠಿಗೆ ಹೊಸ ಸಮನ್ಸ್ ಜಾರಿ

**ನವದೆಹಲಿ, ಅ.15:** ಡಿಜಿಟಲ್ ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಚರ್ಚೆಗೆ ಗ್ರಾಸವಾಗಿದ್ದ 2018ರ ಕ್ರಿಮಿನಲ್ ಮಾನಹಾನಿ ದೂರಿಗೆ ಸಂಬಂಧಿಸಿದಂತೆ, ಖ್ಯಾತ ಯೂಟ್ಯೂಬರ್ ಧ್ರುವರಾಠಿ ಅವರಿಗೆ ದೆಹಲಿಯ ಸಾಕೇತ್ ನ್ಯಾಯಾಲಯವು ಹೊಸದಾಗಿ ಸಮನ್ಸ್



ಜಾರಿಗೊಳಿಸಿದೆ. ಹಲವು ವರ್ಷಗಳಿಂದ ವಿದೇಶದಲ್ಲಿದ್ದ ಧ್ರುವ್‌ರಾಠಿ ಅವರು ಸಿಜೆಪಿ ಪ್ರತಿಭಟನೆ ಹಿನ್ನೆಲೆ ದೆಹಲಿ ಬಂದಿದ್ದಾರೆ. ಸಿಜೆಪಿ ಪ್ರತಿಭಟನೆಯಲ್ಲಿ ಅವರು ಸಕ್ರಿಯವಾಗಿ ತೊಡಗಿಕೊಂಡಿರುವ ಹೊತ್ತಿನಲ್ಲೇ, ಅವರಿಗೆ ನ್ಯಾಯಾಲಯವು ಸಮನ್ಸ್ ನೀಡಿದೆ.

2018ರಲ್ಲಿ ಧ್ರುವರಾಠಿ ತಮ್ಮ ಯೂಟ್ಯೂಬ್ ಚಾನೆಲ್‌ನಲ್ಲಿ ಪ್ರಕಟಿಸಿದ್ದ ಬಿಜೆಪಿ ಐಟಿ ಸೆಲ್ ಪಾರ್ಟ್–2 ಶೀರ್ಷಿಕೆಯ ವಿಡಿಯೋ ಪ್ರಕಟಿಸಿದ್ದರು. ಬಿಜೆಪಿ ಐಟಿ ಸೆಲ್ ವಿರುದ್ಧದ ಆರೋಪಗಳನ್ನು ಹಿಂಪಡೆಯಲು ಮಹಾವೀರ್ ಪ್ರಸಾದ್ ಎಂಬುವವರಿಗೆ ಮಧ್ಯವರ್ತಿಯೊಬ್ಬರ ಮೂಲಕ 50 ಲಕ್ಷ ರೂ. ಲಂಚದ ಆಮಿಷ ಒಡ್ಡಲಾಗಿತ್ತು ಎಂದು ವಿಡಿಯೋದಲ್ಲಿ ಧ್ರುವ ರಾಠಿ ಆರೋಪಿಸಿದ್ದರು. ಇದರ ವಿರುದ್ಧ ಐ ಸಪೋರ್ಟ್ ನರೇಂದ್ರ ಮೋದಿ ಸಾಮಾಜಿಕ ಜಾಲತಾಣ ಪುಟದ ಸ್ಥಾಪಕ ವಿಕಾಸ್ ಸಂಕೃತ್ಯಾಯನ್ (ವಿಕಾಸ್ ಪಾಂಡೆ) ಎಂಬಾತ ದೆಹಲಿ ಕೋರ್ಟ್‌ನಲ್ಲಿ ಮಾನನಷ್ಟ ಮೊಕದಮೆ ದಾಖಲಿಸಿದ್ದರು. ಈ ವಿಡಿಯೋದಲ್ಲಿ ತಮ್ಮ ವಿರುದ್ಧ ಸುಳ್ಳು, ಆಧಾರರಹಿತ ಹಾಗೂ ನಿಂದನೀಯ ಆರೋಪಗಳನ್ನು ಮಾಡಲಾಗಿದೆ ಎಂದು ಆರೋಪಿಸಿದ್ದರು.

ಈ ಪ್ರಕರಣದಲ್ಲಿ ಸಾಕೇತ್ ನ್ಯಾಯಾಲಯವು ಮೊದಲ ಬಾರಿಗೆ 2019ರ ಜುಲೈ 23 ರಂದೇ ಧ್ರುವ ರಾಠಿ ಅವರಿಗೆ ಸಮನ್ಸ್ ಹೊರಡಿಸಿತ್ತು. ಆದರೆ, ಅವರು ವಿದೇಶದಲ್ಲಿ ನೆಲೆಸಿದ್ದರಿಂದ ಸಾಂಪ್ರದಾಯಿಕ ಮಾರ್ಗಗಳಲ್ಲಿ ನೋಟಿಸ್ ಜಾರಿಗೊಳಿಸಲು ಸಾಧ್ಯವಾಗಿರಲಿಲ್ಲ. ಇದರಿಂದಾಗಿ ನ್ಯಾಯಾಂಗ ಪ್ರಕ್ರಿಯೆ ವಿಳಂಬವಾಗುತ್ತಾ ಬಂದಿತ್ತು. ಆದರೆ, ಇತ್ತೀಚೆಗೆ ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆದ ಪ್ರತಿಭಟನೆಗೆ ಭಾಗಿಯಾಗಲು ಧ್ರುವ ರಾಠಿ ಭಾರತಕ್ಕೆ ಬಂದಿದ್ದಾರೆ. ಈ ಹಿನ್ನೆಲೆಯಲ್ಲಿ ದೂರುದಾರರ ಪರ ವಕೀಲರು ನವೆಂಬರ್ 20ಕ್ಕೆ ನಿಗದಿಯಾಗಿದ್ದ ವಿಚಾರಣೆಯನ್ನು ಮುಂಚಿತವಾಗಿಯೇ ಕೈಗೆತ್ತಿಕೊಳ್ಳಬೇಕೆಂದು ಕೋರ್ಟ್‌ಗೆ ಮನವಿ ಮಾಡಿದ್ದರು. ಪ್ರಕರಣದ ವಿಚಾರಣೆ ನಡೆಸಿರುವ ಸಾಕೇತ್ ನ್ಯಾಯಾಲಯದ ಮ್ಯಾಜಿಸ್ಟ್ರೇಟ್ ರಾಹುಲ್ ಜೈನ್ ಅವರಿಗೆ ದೂರುದಾರರು ಖುದ್ದಾಗಿ ಸಮನ್ಸ್ ನೀಡಲು, ಅಂದರೆ ದಸ್ತಿ ಸಮನ್ಸ್ ಜಾರಿ ಮಾಡಲು ಅವಕಾಶ ಕಲ್ಪಿಸಿದ್ದಾರೆ. ನ್ಯಾಯಾಲಯದ ಹೊಸ ಆದೇಶದಂತೆ, ದೂರುದಾರರ ಸಮ್ಮುಖದಲ್ಲೇ ಪ್ರಕ್ರಿಯೆ ಸಿಬ್ಬಂದಿ ಮೂಲಕ ಗುರುಗ್ರಾಮದಲ್ಲಿರುವ ಧ್ರುವ ರಾಠಿ ಅವರ ನಿವಾಸಕ್ಕೆ ಖುದ್ದಾಗಿ ದಸ್ತಿ ಸಮನ್ಸ್ ಜಾರಿಗೊಳಿಸಲು ವ್ಯವಸ್ಥೆ ಮಾಡಲಾಗಿದೆ. ಸಾಕೇತ್ ನ್ಯಾಯಾಲಯವು ಈ ಪ್ರಕರಣದ ಮುಂದಿನ ನಿರ್ಣಾಯಕ ವಿಚಾರಣೆಯನ್ನು ಅಕ್ಟೋಬರ್ 17, 2026 ಕ್ಕೆ ನಿಗದಿಪಡಿಸಲಾಗಿದೆ.

# ಬಾಲಿವುಡ್‌ನಲ್ಲಿ ಹಿಂದೂ ಫೋಬಿಯಾ: ಏಕ್ತಾ ಕಪೂರ್

**ಮುಂಬೈ, ಅ.15:** ಹಿಂದಿ ಚಿತ್ರರಂಗದಲ್ಲಿರುವ ಹಿಂದೂ ಸಂಸ್ಕೃತಿ ಮತ್ತು ನಂಬಿಕೆಗಳ ಮೇಲಿನ ತಾರತಮ್ಯ ಹಾಗೂ 'ಹಿಂದೂ ಫೋಬಿಯಾ' ಕುರಿತು ಖ್ಯಾತ ಬಾಲಿವುಡ್ ನಿರ್ಮಾಪಕಿ ಏಕ್ತಾ ಕಪೂರ್ ನೀಡಿರುವ ಸ್ಫೋಟಕ ಹೇಳಿಕೆ ಈಗ ಚಿತ್ರರಂಗದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಬಾಲಿವುಡ್ ಚಿತ್ರರಂಗದಲ್ಲಿ ಭಾರತೀಯ ಸಂಸ್ಕೃತಿ, ಆಚಾರ–ವಿಚಾರಗಳು ಹಾಗೂ ಹಿಂದೂ ಧರ್ಮದ ಆಚರಣೆಗಳನ್ನು ಕಡೆಗಣಿಸುವ ಮತ್ತು ವಿರೋಧಿಸುವ ಧೋರಣೆ ಇದೆ ಎಂದು ಖ್ಯಾತ ನಿರ್ಮಾಪಕಿ ಏಕ್ತಾ ಕಪೂರ್ ಬಹಿರಂಗವಾಗಿ ಅಸಮಾಧಾನ ಹೊರಹಾಕಿದ್ದಾರೆ.

ಇತ್ತೀಚೆಗೆ ರಣವೀರ್ ಅಲ್ಲಾಬಾಡಿಯಾ ಅವರ ಪಾಡ್‌ಕಾಸ್ಟ್‌ನಲ್ಲಿ ಭಾಗವಹಿಸಿದ್ದ ಏಕ್ತಾ ಕಪೂರ್, ತಮ್ಮ ಬಾಲ್ಯ ಮತ್ತು ವೃತ್ತಿಜೀವನದಲ್ಲಿ ತಾವು ಧಾರ್ಮಿಕ ನಂಬಿಕೆಗಳನ್ನು ಬಹಿರಂಗವಾಗಿ ಪಾಲಿಸಿದ್ದಕ್ಕಾಗಿ ಎದುರಿಸಿದ ಅವಮಾನ ಹಾಗೂ ತಾರತಮ್ಯದ



ಕಹಿ ಅನುಭವಗಳನ್ನು ಹಂಚಿಕೊಂಡಿದ್ದಾರೆ. ಪಾಶ್ಚಿಮಾತ್ಯ ಸಂಸ್ಕೃತಿಯನ್ನು ಮುಕ್ತವಾಗಿ ಸ್ವಾಗತಿಸುವ ಬಾಲಿವುಡ್, ಸ್ವದೇಶಿ ಸಂಪ್ರದಾಯಗಳನ್ನು ಅನುಸರಿಸುವವರನ್ನು ವಿಭಿನ್ನವಾಗಿ ನೋಡುವುದು ದುಃಖಕರ ಎಂದು ಅಭಿಪ್ರಾಯಪಟ್ಟಿದ್ದಾರೆ.

ತಮ್ಮ ಬಾಲ್ಯದ ದಿನಗಳನ್ನು ಸ್ಮರಿಸಿಕೊಂಡ ಏಕ್ತಾ ಕಪೂರ್, ಹಣೆಯ ಮೇಲೆ ತಿಲಕವಿಟ್ಟುಕೊಂಡು ಮತ್ತು ಕೈಯಲ್ಲಿ ರಕ್ಷಾಬಂಧನ ಧರಿಸಿ ಹೊರಗೆ ಹೋದಾಗ ಜನರು ತಮ್ಮನ್ನು ವಿಚಿತ್ರ ಪ್ರಾಣಿಯಂತೆ ನೋಡುತ್ತಿದ್ದರು ಎಂದು ಗಂಭೀರ ಆರೋಪ ಮಾಡಿದ್ದಾರೆ. ನಮ್ಮ ಸಂಸ್ಕೃತಿಯ ಪ್ರಕಾರ ತಿಲಕ ಇಟ್ಟುಕೊಳ್ಳುವುದು ಹೇಗೆ ವಿಚಿತ್ರವಾಗುತ್ತದೆ ಎಂದು ಪ್ರಶ್ನಿಸುತ್ತಿದ್ದೆವು ಎಂದು ತಿಳಿಸಿದ್ದಾರೆ. ಅಲ್ಲದೆ, ದೇವಸ್ಥಾನಕ್ಕೆ ಹೋಗಿ ನೇರವಾಗಿ ಕ್ಲಬ್‌ಗೆ ಹೋದಾಗ ಅಲ್ಲಿನ ಜನರು ತಾವು ದೇವಸ್ಥಾನಕ್ಕೆ ಹೋಗಿ ಬಂದಿರುವುದನ್ನು ಕಂಡು ಅಚ್ಚರಿ ವ್ಯಕ್ತಪಡಿಸುತ್ತಿದ್ದರು ಎಂಬುದನ್ನು ನೆನಪಿಸಿಕೊಂಡು, ಅಂತಹ ಮನಸ್ಥಿತಿಗಳ ಬಗ್ಗೆ ಆಘಾತ ವ್ಯಕ್ತಪಡಿಸಿದ್ದಾರೆ.

ಪಾಶ್ಚಿಮಾತ್ಯ ಅನಿಮೇಷನ್, ಫ್ಯಾಂಟಸಿ ಮತ್ತು ವಿದೇಶಿ ಸಂಸ್ಕೃತಿಗಳನ್ನು ಬಾಲಿವುಡ್‌ನಲ್ಲಿ ಯಾವುದೇ ಹಿಂಜರಿಕೆಯಿಲ್ಲದೆ ಮುಕ್ತವಾಗಿ ಸ್ವೀಕರಿಸಲಾಗುತ್ತದೆ ಮತ್ತು ಅಪ್ಪಿಕೊಳ್ಳಲಾಗುತ್ತದೆ. ಆದರೆ, ಭಾರತೀಯ ಜಾನಪದ ಕಥೆಗಳು, ಪುರಾಣಗಳು ಅಥವಾ ಸಾಂಪ್ರದಾಯಿಕ ವಿಷಯಗಳನ್ನು ಪ್ರಸ್ತಾಪಿಸಿದಾಗ ಮಾತ್ರ ಚಿತ್ರರಂಗದ ಕೆಲವರ ಧೋರಣೆ ಮತ್ತು ವರ್ತನೆ ಸಂಪೂರ್ಣವಾಗಿ ಬದಲಾಗುತ್ತದೆ ಎಂದು ಏಕ್ತಾ ಕಪೂರ್ ಅಳಲು ತೋಡಿಕೊಂಡಿದ್ದಾರೆ. ಇದು ನಮ್ಮದೇ ನೆಲದ ಸಂಸ್ಕೃತಿಗೆ ಎಸಗುತ್ತಿರುವ ದೊಡ್ಡ ಅನ್ಯಾಯ ಎಂಬ ಭಾವನೆ ಮೂಡಿಸುತ್ತದೆ.

ಏಕ್ತಾ ಕಪೂರ್ ಅವರ ಈ ಬಹಿರಂಗ ಮಾತುಗಳು ಈಗ ಸಾಮಾಜಿಕ ಜಾಲತಾಣಗಳಲ್ಲಿ ಮತ್ತು ಚಲನಚಿತ್ರ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿವೆ. ಬಾಲಿವುಡ್ನಲ್ಲಿ ದಶಕಗಳಿಂದ ಬೇರೂರಿರುವ ದ್ವಂದ್ವ ನೀತಿ ಮತ್ತು ಸಾಂಸ್ಕೃತಿಕ ಅಸಹಿಷ್ಣುತೆಯ ಬಗ್ಗೆ ಅನೇಕರು ಧ್ವನಿ ಎತ್ತುತ್ತಿದ್ದು, ಈ ಕುರಿತು ಪರ–ವಿರೋಧ ಚರ್ಚೆಗಳು ಜೋರಾಗಿ ನಡೆಯುತ್ತಿವೆ. ಭಾರತೀಯ ಸಂಪ್ರದಾಯಗಳನ್ನು ಗೌರವಿಸುವವರ ಮೇಲೆ ಹೇರಲಾಗುವ ಈ ಮಾನಸಿಕ ಅಘಾತಗಳು ಮತ್ತು ತಾರತಮ್ಯದ ಧೋರಣೆಗಳು ಬದಲಾಗಬೇಕಾದ ಅಗತ್ಯವಿದೆ ಎಂಬುದನ್ನು ಈ ಘಟನೆ ಮತ್ತೊಮ್ಮೆ ಮುನ್ನೆಲೆಗೆ ತಂದಿದೆ.

# ದೇಶದಲ್ಲಿ ಆಡಳಿತ ಬದಲಾವಣೆ ಬಯಸಿದ್ದೇವೆ, ಇದರಲ್ಲಿ ತಪ್ಪೇನಿದೆ?

**ದೆಹಲಿ ಹೋರಾಟದ ಬಗ್ಗೆ ಪ್ರಶಾಂತ್ ಭೂಷಣ್ ಪ್ರತಿಕ್ರಿಯೆ**

**ನವದೆಹಲಿ, ಅ.15:** ದೇಶದಲ್ಲಿ ಆಡಳಿತ ಬದಲಾವಣೆ ಬಯಸುತ್ತಿದ್ದೇವೆ, ಹಾಗೆ ಬಯಸುವುದರಲ್ಲಿ ತಪ್ಪೇನಿದೆ? ಎಂದು ಸುಪ್ರೀಂ ಕೋರ್ಟ್ ವಕೀಲ ಹಾಗೂ ಸಾಮಾಜಿಕ ಹೋರಾಟಗಾರ ಪ್ರಶಾಂತ್ ಭೂಷಣ್ ಪ್ರಶ್ನಿಸಿದ್ದಾರೆ.

ನವದೆಹಲಿಯ ಪ್ರೆಸ್‌ಕ್ಲಬ್‌ನಲ್ಲಿ ಕಾಕ್ರೋಚ್ ಜನತಾ ಪಕ್ಷ ನಾಯಕರೊಂದಿಗೆ ಗುರುವಾರ



ನಡೆದ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅಸ್ತಿತ್ವದಲ್ಲಿರುವ ಸರ್ಕಾರವನ್ನು ಬದಲಾಯಿಸಬೇಕು ಎಂದು ಆಶಿಸುವುದು ಅಥವಾ ಜನರಲ್ಲಿ ಜಾಗೃತಿ ಮೂಡಿಸುವುದು ಪ್ರತಿಯೊಬ್ಬ ನಾಗರಿಕನ ಸಾಂವಿಧಾನಿಕ ಹಕ್ಕಾಗಿದೆ. ಇದು ಯಾವುದೇ ರೀತಿಯ ಕಾನೂನುಬಾಹಿರ ಅಪರಾಧವಲ್ಲ ಎಂದಿದ್ದಾರೆ.

ಈ ಹಿಂದೆ ಪ್ರತಿಪಕ್ಷದಲ್ಲಿದ್ದಾಗ ಸ್ವತಃ ಬಿಜೆಪಿ ಪಕ್ಷವೇ ಆಡಳಿತ ಬದಲಾವಣೆಗಾಗಿ ದೇಶಾದ್ಯಂತ ಹಲವು ಬಾರಿ ಪ್ರತಿಭಟನೆಗಳನ್ನು ನಡೆಸಿತ್ತು. ಆದರೆ ಈಗ ಬೇರೆಯವರು ಆಡಳಿತ ಬದಲಾವಣೆ ಬಯಸಿದರೆ ಅದನ್ನು 'ಸಂಚು' ಅಥವಾ 'ದೇಶದ್ರೋಹ' ಎಂಬಂತೆ ಬಿಂಬಿಸುತ್ತಿರುವುದು ಬಿಜೆಪಿಯ ಇಬ್ಬಂದಿತನವನ್ನು ತೋರಿಸುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದೇಶದ ಚುನಾವಣಾ ಪ್ರಜಾಪ್ರಭುತ್ವವನ್ನು ಹತ್ತಿಕ್ಕಲು ಸರ್ಕಾರ ಪ್ರಯತ್ನಿಸುತ್ತಿದೆ. ಜನರ ಮೇಲಿನ ಈ ರೀತಿಯ ದೌರ್ಜನ್ಯಗಳು ಹೀಗೆಯೇ ಮುಂದುವರಿದರೆ ದೇಶದಲ್ಲಿ ಖಂಡಿತವಾಗಿಯೂ ಆಡಳಿತ ಬದಲಾವಣೆ ಆಗಲಿದೆ ಎಂದು ಭವಿಷ್ಯ ನುಡಿದಿದ್ದಾರೆ. ಜೊತೆಗೆ, ಹಿಂಸಾಚಾರಕ್ಕೆ ಪ್ರಚೋದನೆ ನೀಡದ ಹೊರತು, ಸರ್ಕಾರದ ನೀತಿಗಳನ್ನು ಟೀಕಿಸುವುದು ಅಥವಾ ಆಡಳಿತದ ವಿರುದ್ಧ ಅಸಮಾಧಾನ ವ್ಯಕ್ತಪಡಿಸುವುದನ್ನು ಅಪರಾಧ ಎಂದು ಪರಿಗಣಿಸಲಾಗುವುದಿಲ್ಲ ಎಂದು ಸುಪ್ರೀಂ ಕೋರ್ಟ್ ಕೂಡ ಈ ಹಿಂದೆ ಸ್ಪಷ್ಟಪಡಿಸಿದೆ ಎಂಬುದನ್ನು ನೆನಪಿಸಿದ್ದಾರೆ.

# ನವೆಂಬರ್ 1ರಿಂದ ಅಪರಿಚಿತ ಕರೆ ಮಾಡಿದವರ ಹೆಸರೂ ಮೊಬೈಲ್‌ನಲ್ಲಿ ಪ್ರದರ್ಶನ

**ನವದೆಹಲಿ, ಅ.15:** ಅಪರಿಚಿತ ಮೊಬೈಲ್ ಸಂಖ್ಯೆಗಳಿಂದ ಬರುವ ಕರೆಗಳನ್ನು ಗುರುತಿಸಲು ಅನುಕೂಲವಾಗುವಂತೆ ಕೇಂದ್ರ ಸರ್ಕಾರ ಹೊಸ ವ್ಯವಸ್ಥೆ ಜಾರಿಗೆ ತರಲು ಮುಂದಾಗಿದೆ. ನವೆಂಬರ್ 1 ರಿಂದ ದೇಶದ ದೂರಸಂಪರ್ಕ ಸೇವಾ ಕಂಪನಿಗಳು ಕಾಲಿಂಗ್ ನೇಮ್ ಪ್ರೆಸೆಂಟೇಷನ್ (ಸಿಎನ್‌ಎಪಿ) ವ್ಯವಸ್ಥೆಯನ್ನು ಜಾರಿಗೆ ತರಬೇಕು ಎಂದು ದೂರಸಂಪರ್ಕ ಇಲಾಖೆ ಸೂಚಿಸಿದೆ. ಈ ವ್ಯವಸ್ಥೆಯಡಿ ಮೊಬೈಲ್‌ಗೆ ಕರೆ ಬಂದಾಗ ಕರೆ ಮಾಡುವವರ ಸಂಖ್ಯೆಯ ಜತೆಗೆ ಅವರ ಹೆಸರೂ ಪರದೆಯ ಮೇಲೆ ಕಾಣಿಸಿಕೊಳ್ಳಲಿದೆ. ಇದರಿಂದ ಅಪರಿಚಿತ ಕರೆಗಳ ಗುರುತು ಪತ್ತೆಹಚ್ಚಲು ಹಾಗೂ ಸ್ಪ್ಯಾಮ್ ಕರೆಗಳು ಮತ್ತು ಆನ್‌ಲೈನ್ ವಂಚನೆಗಳ ಬಗ್ಗೆ ಎಚ್ಚರಿಕೆ ವಹಿಸಲು ಗ್ರಾಹಕರಿಗೆ ಅನುಕೂಲವಾಗಲಿದೆ. ಪ್ರಸ್ತುತ, ಮೊಬೈಲ್‌ನಲ್ಲಿ ಉಳಿಸದ ಸಂಖ್ಯೆಯಿಂದ ಕರೆ ಬಂದಾಗ ಸಾಮಾನ್ಯವಾಗಿ ಆ ಸಂಖ್ಯೆಯಷ್ಟೇ ಕಾಣಿಸುತ್ತದೆ. ಆದರೆ ಸಿಎನ್‌ಎಪಿ ವ್ಯವಸ್ಥೆ ಜಾರಿಯಾದ ಬಳಿಕ, ಗ್ರಾಹಕರ ಸಂಪರ್ಕ ಪಟ್ಟಿಯಲ್ಲಿ ಉಳಿಸದ ದೇಶೀಯ ಸಂಖ್ಯೆಯಿಂದ ಕರೆ ಬಂದರೂ ದೂರಸಂಪರ್ಕ ಕಂಪನಿಯ ದಾಖಲೆಗಳಲ್ಲಿರುವ ಹೆಸರನ್ನು ಪ್ರದರ್ಶಿಸಲಾಗುತ್ತದೆ. ಈಗಾಗಲೇ ಸಂಪರ್ಕ ಪಟ್ಟಿಯಲ್ಲಿ ಸಂಖ್ಯೆ ಸೇವ್ ಆಗಿದ್ದರೆ ಆ ಪಟ್ಟಿಯಲ್ಲಿರುವ ಹೆಸರೇ ಕಾಣಿಸುತ್ತದೆ. ಈ ಸೇವೆಗಾಗಿ ಗ್ರಾಹಕರು ಪ್ರತ್ಯೇಕವಾಗಿ ಅರ್ಜಿ ಸಲ್ಲಿಸುವ ಅಥವಾ ಯಾವುದೇ ಹೆಚ್ಚುವರಿ ಆ್ಯಪ್ ಅಳವಡಿಸಿಕೊಳ್ಳುವ ಅಗತ್ಯವಿರುವುದಿಲ್ಲ. ದೂರಸಂಪರ್ಕ ಇಲಾಖೆಯ ಅಕ್ಟೋಬರ್ 13ರ ನಿರ್ದೇಶನದ ಪ್ರಕಾರ, 4ಜಿ ಮತ್ತು ಅದಕ್ಕಿಂತ ಮುಂದಿನ ತಂತ್ರಜ್ಞಾನ ಆಧಾರಿತ ಮೊಬೈಲ್ ಜಾಲಗಳಲ್ಲಿ ಈ ವ್ಯವಸ್ಥೆ ಜಾರಿಗೆ ಬರಲಿದೆ.

ಸಿಎನ್‌ಎಪಿ ವ್ಯವಸ್ಥೆಯು ಕರೆ ಮಾಡುವವರ ಗುರುತನ್ನು ತಿಳಿಯಲು ಸಹಾಯ ಮಾಡಬಹುದಾದರೂ, ಕರೆ ಮಾಡುವವರ ಹೆಸರು ಕಾಣಿಸಿಕೊಂಡ ಮಾತ್ರಕ್ಕೆ ಆ ಕರೆ ಸುರಕ್ಷಿತವಾಗಿದೆ ಎಂಬ ಖಾತರಿ ಇರುವುದಿಲ್ಲ. ಹೀಗಾಗಿ ಅಪರಿಚಿತ ಕರೆಗಳ ಮೂಲಕ ವೈಯಕ್ತಿಕ ಮಾಹಿತಿ, ಬ್ಯಾಂಕ್ ವಿವರ ಅಥವಾ ಒಟಿಪಿ ಕೇಳಿದರೆ ಎಚ್ಚರಿಕೆ ವಹಿಸುವುದು ಅಗತ್ಯ.

# ಬೃಹನ್ಮುಂಬಯಿಯಲ್ಲಿನ ಪ್ರಭಾ ಸುವರ್ಣ ಅವರಿಗೆ ಈಜಿಪ್ಟ್‌ನಲ್ಲಿ 'ಮೈಲ್‌ಸ್ಟೋನ್ ಜಾಗತಿಕ ಶಾಂತಿ ರಾಯಭಾರಿ ಪ್ರಶಸ್ತಿ' ಪ್ರದಾನ

**ಮುಂಬಯಿ, ಅ.15:** ಸಾಮಾಜಿಕ ಸೇವೆ ಹಾಗೂ ವೈಯಕ್ತಿಕ ಸಾಧನೆಗಳನ್ನು ಗುರುತಿಸಿ ಬೃಹನ್ಮುಂಬಯಿಯಲ್ಲಿನ ಹೆಸರಾಂತ ಸಮಾಜಸೇವಕಿ ಪ್ರಭಾ ಎನ್.ಪಿ ಸುವರ್ಣ ಅವರಿಗೆ ಇತ್ತೀಚೆಗೆ ಈಜಿಪ್ಟ್‌ನಲ್ಲಿ ನಡೆಸಲ್ಪಟ್ಟ ಪ್ರತಿಷ್ಠಿತ 'ಮೈಲ್‌ಸ್ಟೋನ್ ಗ್ಲೋಬಲ್ ಪೀಸ್ ಅಂಬಾಸಿಡರ್ ಅವಾರ್ಡ್' ಪ್ರದಾನಿಸಿ ಗೌರವಿಸಲಾಯಿತು.

ಕಳೆದ ಶನಿವಾರ ಈಜಿಪ್ಟ್‌ನ ಸ್ಟಾರ್ ಸಭಾಗೃಹದಲ್ಲಿ ನಡೆಸಲ್ಪಟ್ಟ ಸಮಾರಂಭದಲ್ಲಿ ಉದ್ಯಮಿ ಹಾಗೂ







ಹಾಲಿವುಡ್ ಅಕ್ವಾ ಪಾರ್ಕ್‌ನ ಮಾಲಕ ಮೊಹಮ್ಮದ್ ಎಲ್ ಮಸೂದ್ ಅವರು ಪ್ರಭಾ ಸುವರ್ಣ ಅವರಿಗೆ ಮೈಲ್‌ಸ್ಟೋನ್ ಗ್ಲೋಬಲ್ ಅವಾರ್ಡ್ಸ್ ಪ್ರಶಸ್ತಿ ಪ್ರದಾನಿಸಿ ಗೌರವಿಸಿದರು.

ಸಮಾಜಕ್ಕೆ ಪ್ರಭಾ ಸುವರ್ಣ ಅವರು ಸಲ್ಲಿಸಿರುವ ಕೊಡುಗೆಗಳನ್ನು ಗುರುತಿಸಿ ಈ ಗೌರವ ನೀಡಲಾಗಿದ್ದು, ಶಾಂತಿ, ಮಾನವೀಯತೆ, ಜಾಗತಿಕ ಏಕತೆ ಹಾಗೂ ಪರಸ್ಪರ ಸೌಹಾರ್ದತೆಯ ಮೌಲ್ಯಗಳನ್ನು ಹೊಂದಿದ ಗೌರವವಾಗಿದೆ.

ವಿಶ್ವದ ವಿವಿಧ ರಾಷ್ಟ್ರಗಳ ಗಣ್ಯರು ಹಾಗೂ ಸಾಧಕರ ಉಪಸ್ಥಿತಿಯಲ್ಲಿ ನಡೆದ ಭವ್ಯ ಸಮಾರಂಭದಲ್ಲಿ ಸಮಾಜಕ್ಕೆ ಗಮನಾರ್ಹ ಕೊಡುಗೆ ನೀಡಿದ ವ್ಯಕ್ತಿಗಳ ಸಾಧನೆಯನ್ನು ಗೌರವಿಸಲಾಯಿತು.

### ಸಚಿವ ಪ್ರಿಯಾಂಕ್ ಖರ್ಗೆ - ಯು.ಕೆ. ನಾರ್ತ್ ಈಸ್ಟ್ ಮೇಯರ್ ಕಿಮ್ ಮೆಕ್‌ಗಿನ್ನೆಸ್ ನಡುವಿನ ಚರ್ಚೆ

# ಬಾಹ್ಯಾಕಾಶ, ಸಂಶೋಧನೆ ಮತ್ತು ನಾವೀನ್ಯತೆ ಕ್ಷೇತ್ರಗಳಲ್ಲಿ ಬಲಪಡಿಸುವ ಗುರಿ

**ಬೆಂಗಳೂರು, ಅ.15:** ಕರ್ನಾಟಕ ಸರ್ಕಾರ ಮತ್ತು ಇಂಗ್ಲೆಂಡ್‌ನ ಈಶಾನ್ಯ ಭಾಗವು ಬಾಹ್ಯಾಕಾಶ ತಂತ್ರಜ್ಞಾನ, ಸಂಶೋಧನೆ, ನಾವೀನ್ಯತೆ, ಹೂಡಿಕೆ ಮತ್ತು ತಂತ್ರಜ್ಞಾನ ಪಾಲುದಾರಿಕೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಹಕಾರವನ್ನು ಬಲಪಡಿಸುವ ಅವಕಾಶಗಳ ಕುರಿತು ಗೃಹ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಹಾಗೂ ಯುನೈಟೆಡ್ ಕಿಂಗ್‌ಡಮ್‌ನ ನಾರ್ತ್ ಈಸ್ಟ್ ಮೇಯರ್ ಮತ್ತು ಎನ್.ಇ.ಎಂ.ಎಸ್ ಪ್ರತಿನಿಧಿ ಕಿಮ್ ಮೆಕ್‌ಗಿನ್ನೆಸ್ ನಡುವೆ ಚರ್ಚೆ ನಡೆಯಿತು.

ಎರಡೂ ಪ್ರದೇಶಗಳಲ್ಲಿರುವ ಪರಸ್ಪರ ಪೂರಕ ಸಾಮರ್ಥ್ಯಗಳನ್ನು ಬಳಸಿಕೊಂಡು ಸಂಸ್ಥೆಗಳು, ಉದ್ಯಮಗಳು ಮತ್ತು ಸಂಶೋಧನಾ ವಲಯಗಳ ನಡುವಿನ ಸಂಪರ್ಕವನ್ನು ಬಲಪಡಿಸುವುದು ಸಭೆಯ ಪ್ರಮುಖ ಉದ್ದೇಶವಾಗಿತ್ತು. ಈ ಪೈಕಿ ಬಾಹ್ಯಾಕಾಶ ತಂತ್ರಜ್ಞಾನವು ಸಹಕಾರದ ಪ್ರಮುಖ ಸಂಭಾವ್ಯ ಕ್ಷೇತ್ರವಾಗಿ ಹೊರಹೊಮ್ಮಿತು. ಉಪಗ್ರಹ ತಂತ್ರಜ್ಞಾನ ಪಾಲುದಾರಿಕೆ, ಜ್ಞಾನ ಮತ್ತು ತಂತ್ರಜ್ಞಾನ ವಿನಿಮಯ, ಬೌದ್ಧಿಕ ಆಸ್ತಿ ಹಕ್ಕುಗಳು



ಹಾಗೂ ಜಂಟಿ ಸಂಶೋಧನೆಯ ಅವಕಾಶಗಳ ಕುರಿತು ಚರ್ಚಿಸಲಾಯಿತು.

ತಂತ್ರಜ್ಞಾನ ಮತ್ತು ನಾವೀನ್ಯತೆಯಲ್ಲಿ ಕರ್ನಾಟಕದ ಸಾಮರ್ಥ್ಯಗಳನ್ನು ಉಲ್ಲೇಖಿಸಿದ ಸಚಿವ ಪ್ರಿಯಾಂಕ್ ಖರ್ಗೆ, ಜಾಗತಿಕ ಸಾಮರ್ಥ್ಯ ಕೇಂದ್ರಗಳ ಪ್ರಮುಖ ಜಾಗತಿಕ ತಾಣವಾಗಿ ಬೆಂಗಳೂರಿನ ಸ್ಥಾನಮಾನವನ್ನು ಒತ್ತಿಹೇಳಿದರು. ಕರ್ನಾಟಕದ ನಾವೀನ್ಯತಾ ಪರಿಸರ ವ್ಯವಸ್ಥೆಯು ಅಂತರರಾಷ್ಟ್ರೀಯ ಸಹಯೋಗಕ್ಕೆ, ವಿಶೇಷವಾಗಿ ಬಾಹ್ಯಾಕಾಶ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ ಮತ್ತು ಮುಂದುವರಿದ ಸಂಶೋಧನೆಯಂತಹ ಉದಯೋನ್ಮುಖ ಕ್ಷೇತ್ರಗಳಲ್ಲಿ, ಮಹತ್ವದ ಅವಕಾಶಗಳನ್ನು ಒದಗಿಸುತ್ತದೆ. ಜ್ಞಾನ ವಿನಿಮಯಕ್ಕೆ ಮಾತ್ರ ಸೀಮಿತವಾಗದೆ, ಜಂಟಿ ಸಂಶೋಧನೆ, ತಂತ್ರಜ್ಞಾನ ಅಭಿವೃದ್ಧಿ, ಮಾರುಕಟ್ಟೆ ಪ್ರವೇಶ ಮತ್ತು ಹೂಡಿಕೆಯ ಮೂಲಕ ಸ್ಪಷ್ಟ ಫಲಿತಾಂಶಗಳನ್ನು ಸೃಷ್ಟಿಸುವ ಪಾಲುದಾರಿಕೆಗಳನ್ನು ನಿರ್ಮಿಸಲು ನಾವು ಉತ್ಸುಕರಾಗಿದ್ದೇವೆ. ಗ್ಲೋಬಲ್ ಇನ್ನೋವೇಶನ್ ಅಲಯನ್ಸ್ ಮತ್ತು ಬಿಯಾಂಡ್ ಬೆಂಗಳೂರು ಲೀಪ್ ನಂತಹ ಉಪಕ್ರಮಗಳ ಮೂಲಕ, ಕರ್ನಾಟಕದಾದ್ಯಂತ ಇರುವ ಪ್ರತಿಭೆ ಮತ್ತು ನಾವೀನ್ಯತಾ ಪರಿಸರ ವ್ಯವಸ್ಥೆಗಳೊಂದಿಗೆ ಜಾಗತಿಕ ಪಾಲುದಾರರು ತೊಡಗಿಸಿಕೊಳ್ಳಲು ನಾವು ಹೆಚ್ಚಿನ ಅವಕಾಶಗಳನ್ನು ಕಲ್ಪಿಸುತ್ತಿದ್ದೇವೆ ಎಂದು ಹೇಳಿದರು.

ಮೇಯರ್ ಕಿಮ್ ಮೆಕ್‌ಗಿನ್ನೆಸ್ ಅವರು ಭಾರತದೊಂದಿಗಿನ ನಾರ್ತ್ ಈಸ್ಟ್ ಇಂಗ್ಲೆಂಡ್‌ನ ಕಾರ್ಯತಂತ್ರದ ಸಂಬಂಧದಲ್ಲಿ ಬೆಂಗಳೂರಿನ ಮಹತ್ವವನ್ನು ಉಲ್ಲೇಖಿಸಿದರು. ಬಾಹ್ಯಾಕಾಶ ತಂತ್ರಜ್ಞಾನವನ್ನು ಎರಡೂ ಪ್ರದೇಶಗಳ ನಡುವಿನ ಸಂಭಾವ್ಯ ಸಹಕಾರದ ಆದ್ಯತೆಯ ಕ್ಷೇತ್ರವೆಂದು ಗುರುತಿಸಿದರು. ಎರಡೂ ಪ್ರದೇಶಗಳ ಪರಿಣತಿಯನ್ನು ಒಗ್ಗೂಡಿಸುವುದು, ತಂತ್ರಜ್ಞಾನ ವಿನಿಮಯಕ್ಕೆ ಅವಕಾಶ ಕಲ್ಪಿಸುವುದು ಹಾಗೂ ಸಂಶೋಧನಾ ಪಾಲುದಾರಿಕೆಗಳನ್ನು ಬಲಪಡಿಸುವ ಕುರಿತು ಚರ್ಚಿಸಿದರು.

ಸಭೆಯಲ್ಲಿ ಕರ್ನಾಟಕದ ಬ್ರಿಟನ್ ಉಪ ಹೈಕಮಿಷನರ್ ಶ್ರೀ ಹರ್ಷ್‌ಬೀರ್ ಸಾಂಘಾ, ಕರ್ನಾಟಕ ಸರ್ಕಾರದ ಎಲೆಕ್ಟ್ರಾನಿಕ್ಸ್, ಐಟಿ, ಬಿಟಿ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಾ. ಮಂಜುಳಾ ಎನ್., ಕರ್ನಾಟಕ ನಾವೀನ್ಯತೆ ಮತ್ತು ತಂತ್ರಜ್ಞಾನ ಸೊಸೈಟಿ ಹಾಗೂ ನ ವ್ಯವಸ್ಥಾಪಕ ನಿರ್ದೇಶಕರು ಮತ್ತು ಎಲೆಕ್ಟ್ರಾನಿಕ್ಸ್, ಐಟಿ, ಬಿಟಿ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಇಲಾಖೆಯ ನಿರ್ದೇಶಕ ಡಾ. ಅವಿನಾಶ್ ರವೀಂದ್ರನ್ ಸಭೆಯಲ್ಲಿ ಉಪಸ್ಥಿತರಿದ್ದರು.



ಮೈಸೂರಿನಲ್ಲಿ ಗುರುವಾರ ಮಳೆಯ ನಡುವೆ ದೀಪಾಲಂಕಾರಗೊಂಡ ಮೈಸೂರು ಅರಮನೆ; ನಡೆಯುತ್ತಿರುವ ದಸರಾ ಮಹೋತ್ಸವವು ಜನಸಮೂಹವನ್ನು ಆಕರ್ಷಿಸುತ್ತಿದೆ.

# ಡ್ರೈಡೇ ಆದೇಶ ಹಿಂಪಡೆಯುವಂತೆ ಸರ್ಕಾರಕ್ಕೆ ಹೋಟೆಲ್ ಮಾಲೀಕರ ಸಂಘ ಮನವಿ

**ಬಾರ್, ಪಬ್ ರೆಸ್ಟೋರೆಂಟ್‌ಗಳಿಗೆ 500 ಕೋಟಿ ರೂ.ಗಳಿಗೂ ಅಧಿಕ ನಷ್ಟದ ಆತಂಕ**

**ಬೆಂಗಳೂರು, ಅ.15:** ವಿಧಾನ ಪರಿಷತ್ತಿನ ನಾಲ್ಕು ಸ್ಥಾನಗಳಿಗೆ ಅ.23ರಂದು ನಡೆಯಲಿರುವ ದ್ವೈವಾರ್ಷಿಕ ಚುನಾವಣೆಯ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಘೋಷಿಸಿರುವ ಡ್ರೈಡೇ ಆದೇಶ ಹಿಂಪಡೆಯುವಂತೆ ಬೆಂಗಳೂರು ಹೋಟೆಲ್ ಮಾಲೀಕರ ಸಂಘ ಮನವಿ ಮಾಡಿದೆ. ಈ ನಿರ್ಬಂಧದಿಂದ ಬಾರ್, ಪಬ್ ಮತ್ತು ರೆಸ್ಟೋರೆಂಟ್‌ಗಳಿಗೆ 500 ಕೋಟಿ ರೂ.ಅಧಿಕ ನಷ್ಟವಾಗುವ ಸಾಧ್ಯತೆ ಇದೆ ಎಂದು ಸಂಘ ಆತಂಕ ವ್ಯಕ್ತಪಡಿಸಿದೆ.

ಅ.13ರಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಪತ್ರ ಬರೆದಿರುವ ಸಂಘ, ಅಕ್ಟೋಬರ್ 21ರ ಸಂಜೆ 4 ಗಂಟೆಯಿಂದ ಅಕ್ಟೋಬರ್ 23ರವರೆಗೆ ಹಾಗೂ ಮತ ಎಣಿಕೆ ನಡೆಯುವ ಅಕ್ಟೋಬರ್ 27ರಂದು ಡ್ರೈ ಡೇ ಘೋಷಿಸಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದೆ.

ಚುನಾವಣೆಯ ಕಾರಣಕ್ಕೆ ಹಲವು ದಿನಗಳ ಕಾಲ ಮದ್ಯ ಮಾರಾಟಕ್ಕೆ ನಿರ್ಬಂಧ ವಿಧಿಸುವುದರಿಂದ ಆತಿಥ್ಯ ಉದ್ಯಮದ ಮೇಲೆ ಗಂಭೀರ ಪರಿಣಾಮ ಉಂಟಾಗಲಿದೆ. ಬಾರ್‌ಗಳು, ಪಬ್‌ಗಳು ಮತ್ತು ರೆಸ್ಟೋರೆಂಟ್‌ಗಳ ವ್ಯಾಪಾರ ಕುಸಿಯುವುದರ ಜತೆಗೆ ರಾಜ್ಯ ಸರ್ಕಾರದ ಅಬಕಾರಿ ಇಲಾಖೆಯ ಆದಾಯಕ್ಕೂ ಹೊಡೆತ ಬೀಳಬಹುದು ಎಂದು ಸಂಘ ತಿಳಿಸಿದೆ.

ಚುನಾವಣೆಯಲ್ಲಿ ಸುಮಾರು 20,000 ಮತದಾರರು ಮಾತ್ರ ಭಾಗವಹಿಸಲಿದ್ದು, ಅವರಲ್ಲಿ ಸುಮಾರು 15,000 ಮಂದಿ ಮಹಿಳೆಯರು ಎಂದು ಸಂಘ ತನ್ನ ಪತ್ರದಲ್ಲಿ ಉಲ್ಲೇಖಿಸಿದೆ. ಇಷ್ಟು ಕಡಿಮೆ ಸಂಖ್ಯೆಯ ಮತದಾರರನ್ನು ಹೊಂದಿರುವ ಚುನಾವಣೆಯ ಕಾರಣಕ್ಕೆ, ಪೊಲೀಸ್ ಕಮಿಷನರೇಟ್ ವ್ಯಾಪ್ತಿಯನ್ನು ಹೊರತುಪಡಿಸಿ ಬೆಂಗಳೂರು ನಗರದಾದ್ಯಂತ ಡ್ರೈ ಡೇ ಜಾರಿಗೊಳಿಸುವುದು ಮದ್ಯ ಮಾರಾಟಗಾರರು ಮತ್ತು ಆತಿಥ್ಯ ಉದ್ಯಮಕ್ಕೆ ಅನಗತ್ಯ ತೊಂದರೆ ಉಂಟುಮಾಡಲಿದೆ ಎಂದು ಸಂಘ ವಾದಿಸಿದೆ.

ಹೀಗಾಗಿ, ಉದ್ಯಮದ ಹಿತದೃಷ್ಟಿಯಿಂದ ಚುನಾವಣೆ ಮತ್ತು ಮತ ಎಣಿಕೆಗೆ ಸಂಬಂಧಿಸಿದಂತೆ ಘೋಷಿಸಿರುವ ಡ್ರೈ ಡೇ ಆದೇಶವನ್ನು ಹಿಂಪಡೆಯಬೇಕು ಎಂದು ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದೆ.

## ಅವಧಿ ಮೀರಿದ ಪದಾರ್ಥ ಬಳಸಿದರೆ ಪರವಾನಗಿ ರದ್ದು: ಸಚಿವ ಯು.ಟಿ. ಖಾದರ್ ಎಚ್ಚರಿಕೆ

**ಬೆಂಗಳೂರು, ಅ.15:** ನಾಡಹಬ್ಬ ದಸರಾ ಮತ್ತು ದೀಪಾವಳಿ ಹೀಗೆ ಸಾಲು ಸಾಲು ಹಬ್ಬಗಳಿರುವ ಹಿನ್ನೆಲೆಯಲ್ಲಿ ಮಾರುಕಟ್ಟೆಯಲ್ಲಿ ಹಾಗೂ ಕಳಪೆ ತಿಂಡಿಗಳು ಮಾರಾಟವಾಗುವುದನ್ನು ತಡೆಯಲು ಆರೋಗ್ಯ ಇಲಾಖೆ ಅಧಿಕಾರಿಗಳು ವಿಶೇಷ ದಾಳಿ ಆರಂಭಿಸಿದ್ದಾರೆ.

ಈ ಕುರಿತು ಮಾತನಾಡಿರುವ ಆರೋಗ್ಯ ಸಚಿವ ಯು.ಟಿ ಖಾದರ್, ರಾಜ್ಯಾದ್ಯಂತ ಸಿಹಿ ತಿಂಡಿ ತಯಾರಿಕಾ ಘಟಕಗಳು ಮತ್ತು ಸಿಹಿಯ ಅಂಗಡಿಗಳ ಮೇಲೆ ವ್ಯಾಪಕ ತಪಾಸಣೆ ಕೈಗೊಳ್ಳಲಾಗಿದ್ದು, ಅವಧಿ ಮೀರಿದ ಪದಾರ್ಥಗಳನ್ನು ಬಳಸಿದರೆ ಅಥವಾ ನಿಯಮಗಳನ್ನು ಉಲ್ಲಂಘಿಸುವುದು ಕಂಡುಬಂದರೆ ಅಂತಹ ಅಂಗಡಿಗಳ ಪರವಾನಗಿಯನ್ನು ತಕ್ಷಣವೇ ರದ್ದುಪಡಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ದೀಪಾವಳಿ ಮುಗಿಯುವರೆಗೂ ಲೈಸೆನ್ಸ್ ರದ್ದು ಮಾಡಲಾಗುತ್ತದೆ



ಸಾರ್ವಜನಿಕರ ಆರೋಗ್ಯದ ಜತೆ ಚೆಲ್ಲಾಟವಾಡುವ ಯಾವುದೇ ಘಟಕಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ದೀಪಾವಳಿ ಹಬ್ಬ ಮುಗಿಯುವವರೆಗೂ ಈ ವಿಶೇಷ ತಪಾಸಣಾ ಅಭಿಯಾನವು ನಿರಂತರವಾಗಿ ಮುಂದುವರಿಯಲಿದೆ. ಹಬ್ಬದ ಸಂದರ್ಭದಲ್ಲಿ ಜನರಿಗೆ ಶುದ್ಧ ಹಾಗೂ ಸುರಕ್ಷಿತ ಆಹಾರ ಪದಾರ್ಥಗಳು ಲಭ್ಯವಾಗುವಂತೆ ನೋಡಿಕೊಳ್ಳಲು ಎಲ್ಲಾ ಜಿಲ್ಲೆಗಳಲ್ಲೂ ಆಹಾರ ಸುರಕ್ಷತಾ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದರು.

### ಹಸ್ತಾಂತರ ಬಳಿಕವೂ ಗ್ರಾ.ಪಂ. ಬ್ಯಾಂಕ್ ಖಾತೆ ವ್ಯವಹಾರ: ತನಿಖೆಗೆ ಖಂಡ್ರೆ ಸೂಚನೆ

# ಕೋಳಾರ, ಅಲಿಯಾಬಾದ್, ಅಮಲಾಪುರ ಗ್ರಾಮಪಂಚಾಯ್ತಿಯಲ್ಲಿ ಅಕ್ರಮ ಆರೋಪ

**ಬೆಂಗಳೂರು, ಅ.15:** ಗ್ರಾಮ ಪಂಚಾಯತಿಗಳು ಪಟ್ಟಣ ಪಂಚಾಯತಿಯಾಗಿ ಇಲ್ಲವೇ ನಗರಸಭೆ, ನಗರ ಪಾಲಿಕೆಯಲ್ಲಿ ಸೇರ್ಪಡೆಯಾಗಿ ಸಂಪೂರ್ಣ ಹಸ್ತಾಂತರವಾದ ಬಳಿಕವೂ ಗ್ರಾ.ಪಂ. ಬ್ಯಾಂಕ್ ಖಾತೆಗಳಲ್ಲಿ ವ್ಯವಹಾರ ನಡೆದಿದೆ ಎಂಬ ಮಾಹಿತಿ ಹಿನ್ನೆಲೆಯಲ್ಲಿ ಸಮಗ್ರ ತನಿಖೆ ಮಾಡಿ ವರದಿ ಸಲ್ಲಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.

ಈ ಸಂಬಂಧ ಇಲಾಖೆಯ ಕಾರ್ಯದರ್ಶಿಯವರಿಗೆ ಲಿಖಿತ ಸೂಚನೆ ನೀಡಿರುವ ಅವರು, ಬ್ಯಾಂಕ್ ಖಾತೆಯ ಸಹಿತ ಕೆಲವು ಗ್ರಾಮ ಪಂಚಾಯತಿಗಳು ನಗರ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರ ಆದ ಬಳಿಕವೂ ಕೆಲವು ಪಂಚಾಯತಿಗಳಲ್ಲಿ ಅಧಿಕೃತ ಮಾದರಿ ಸಹಿ ಮತ್ತು ಸೀಲು ಬಳಸಿ ಬ್ಯಾಂಕ್ ಖಾತೆಯ ವಹಿವಾಟು ನಡೆದಿದೆ ಎಂಬ ವರದಿ ಹಿನ್ನೆಲೆಯಲ್ಲಿ ಈ ತನಿಖೆಗೆ ಆದೇಶಿಸಿದ್ದಾರೆ.

ಕೆಲವು ಪ್ರಕರಣಗಳಲ್ಲಿ ಗ್ರಾಮ ಪಂಚಾಯತಿಯ ಅಧೀನದಲ್ಲಿದ್ದ ಕೆಲವು ಗ್ರಾಮಗಳು ಮಾತ್ರವೇ ನಗರಸಭೆ, ನಗರ ಪಾಲಿಕೆಗೆ ಹಸ್ತಾಂತರವಾಗಿದ್ದು, ಹಸ್ತಾಂತರಿತ



ಗ್ರಾಮಗಳಲ್ಲಿ ಪಂಚಾಯತಿಯಿಂದ ಕೈಗೊಂಡಿದ್ದ ಹಾಗೂ ಪ್ರಗತಿಯಲ್ಲಿರುವ ಕಾಮಗಾರಿಗಳಿಗೆ ಪಂಚಾಯತಿಯೇ ಹಣ ಭರಿಸುವಂತಾಗಿದೆ ಎಂಬ ಮಾಹಿತಿಯೂ ಬಂದಿದ್ದು, ಈ ಬಗ್ಗೆಯೂ ಪರಿಶೀಲಿಸಿ ವರದಿ ಸಲ್ಲಿಸುವಂತೆ ಸೂಚಿಸಿದ್ದಾರೆ.

ಹಸ್ತಾಂತರ ಆಗಿರುವ ಗ್ರಾಮಪಂಚಾಯತಿಗಳ ಬ್ಯಾಂಕ್ ಖಾತೆಗಳಲ್ಲಿ ಅಕ್ರಮವಾಗಿ ವಹಿವಾಟಾಗಿದೆಯೇ. ಹಸ್ತಾಂತರ ನಂತರವೂ ಗ್ರಾಮಗಳ ಕಾಮಗಾರಿಗೆ ಗ್ರಾಮ ಪಂಚಾಯತಿ ವತಿಯಿಂದ ಹಣ ಭರಿಸಲಾಗಿದೆಯೇ ಎಂಬ ಬಗ್ಗೆ ಪರಿಶೀಲನೆ ನಡೆಸಲು ಒಂದು ಸಮಿತಿ ರಚಿಸಿ, ವರದಿಯನ್ನು 30 ದಿನಗಳ ಒಳಗಾಗಿ ಕಡತದಲ್ಲಿ ಸಲ್ಲಿಸಲು ಸೂಚನೆ ನೀಡಿದ್ದಾರೆ.

**ಕೋಳಾರ, ಅಲಿಯಾಬಾದ್, ಅಮಲಾಪೂರ ಗ್ರಾ.ಪಂ.ನಲ್ಲಿ ಅಕ್ರಮ ಆರೋಪ:**

ಬೀದರ್ ನಗರಪಾಲಿಕೆಗೆ ಸಂಪೂರ್ಣ ಹಸ್ತಾಂತರವಾದ ತರುವಾಯ ಬೀದರ್ ಜಿಲ್ಲಾ ಪಂಚಾಯತಿ ಅಧೀನದಲ್ಲಿದ್ದ ಕೋಳಾರ, ಅಲಿಯಾಬಾದ್ ಮತ್ತು ಅಮಲಾಪುರ ಗ್ರಾಮ ಪಂಚಾಯತಿಗಳ ಬ್ಯಾಂಕ್ ಖಾತೆಗಳಲ್ಲಿ ವಹಿವಾಟು ನಡೆದು ಹಣ ವೆಚ್ಚವಾಗಿರುವ ಬಗ್ಗೆಯೂ ತನಿಖೆಗೆ ಆದೇಶ ನೀಡಿದ್ದಾರೆ.

ಇದರಲ್ಲಿ ಗ್ರಾಮಪಂಚಾಯತಿಗಳಲ್ಲಿ ಈ ಹಿಂದೆ ಕೆಲಸ ಮಾಡುತ್ತಿದ್ದ ಸಿಬ್ಬಂದಿ ಮತ್ತು ಬ್ಯಾಂಕ್ ಸಿಬ್ಬಂದಿ ಶಾಮೀಲಾಗಿರುವ ಸಾಧ್ಯತೆಯಿದ್ದು, ಹಸ್ತಾಂತರಗೊಂಡ ಬ್ಯಾಂಕ್ ಖಾತೆಗಳ ವಹಿವಾಟು ನಡೆಯಲು ಹೇಗೆ ಸಾಧ್ಯ. ಇದಕ್ಕೆ ಅಧಿಕೃತ ಆದೇಶಗಳಿತ್ತೆ ಅಥವಾ ಅಧಿಕೃತ ಮಾದರಿ ಸಹಿ ಮತ್ತು ಕಚೇರಿಯ ಸೀಲುಗಳ ದುರ್ಬಳಕೆ ಆಗಿದೆಯೇ ಎಂಬ ಬಗ್ಗೆ ತನಿಖೆ ಮಾಡಿಸಿ, ಸಹಿಗಳ ನೈಜತೆಯನ್ನು ತಿಳಿಯಲು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಿ, ಅಕ್ರಮ ನಡೆದಿರುವುದು ಮೇಲ್ನೋಟಕ್ಕೆ ಕಂಡು ಬಂದಲ್ಲಿ, ಸಂಬಂಧಿತ ಸಿಬ್ಬಂದಿಯನ್ನು ಅಮಾನತು ಮಾಡಿ, ಸ್ಥಳೀಯ ಪೊಲೀಸ್ ಠಾಣೆಗೆ ದೂರು ದಾಖಲಿಸಿ, ಎಫ್.ಐ.ಆರ್. ಮಾಡಿಸಲು ಕ್ರಮ ವಹಿಸುವಂತೆಯೂ ಈಶ್ವರ ಖಂಡ್ರೆ ಸೂಚಿಸಿದ್ದಾರೆ.

### ಚುನಾವಣಾ ಆಯೋಗದಿಂದ ವಿಶೇಷ ಅಭಿಯಾನ: ಬೆಂಗಳೂರು ಜಿಲ್ಲಾ ಚುನಾವಣಾಧಿಕಾರಿ ಮಹೇಶ್ವರ್‌ರಾವ್ ಅಭಯ

# ಮತದಾರ ಪಟ್ಟಿಯಲ್ಲಿ ಹೆಸರಿಲ್ಲದಿದ್ದರೆ ಭಯ ಪಡಬೇಕಾಗಿಲ್ಲ

**ಬೆಂಗಳೂರು, ಅ.15:** ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದಿದ್ದರೆ ಸಾರ್ವಜನಿಕರು ಭಯಪಡುವ ಅಗತ್ಯವಿಲ್ಲ. ಅರ್ಹ ಮತದಾರರನ್ನು ಪಟ್ಟಿಗೆ ಸೇರ್ಪಡೆಗೊಳಿಸಲು ಚುನಾವಣಾ ಆಯೋಗವು ವಿಶೇಷ ಅಭಿಯಾನ ಹಮ್ಮಿಕೊಳ್ಳಲು ಕ್ರಮ ಕೈಗೊಳ್ಳಲಿದೆ ಎಂದು ಬೆಂಗಳೂರು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತರಾದ ಮಹೇಶ್ವರ್ ರಾವ್ ತಿಳಿಸಿದರು.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಿಬಿಎ ಕೇಂದ್ರ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭಾರತದ ಚುನಾವಣಾ ಆಯೋಗದ ನಿರ್ದೇಶನದ ಮೇರೆಗೆ ಮತದಾರರ ಪಟ್ಟಿಗೆ ಹೊಸದಾಗಿ ಹೆಸರು ಸೇರ್ಪಡೆಗೊಳಿಸಲು ವಿಶೇಷ ಅಭಿಯಾನ ಹಮ್ಮಿಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ. ಮತದಾರರ ಪಟ್ಟಿಗೆ ಹೊಸದಾಗಿ ಹೆಸರು ಸೇರ್ಪಡೆಗೊಳಿಸಲು ಅರ್ಹರು ನಮೂನೆ–6ರ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ತಿಳಿಸಿದರು.

**24,06,044 ಮಂದಿಗೆ ನೋಟಿಸ್ ನೀಡಿ ವಿಚಾರಣೆ**

ಕರಡು ಮತದಾರರ ಪಟ್ಟಿಯಲ್ಲಿ ಒಟ್ಟು 56,99,660 ಮತದಾರರಿದ್ದಾರೆ. 2002ರ ಮತದಾರರ ಪಟ್ಟಿಯಲ್ಲಿ ಹೆಸರು ಪತ್ತೆಯಾಗದಿರುವುದು ಹಾಗೂ ಇತರ ವ್ಯತ್ಯಾಸಗಳ ಕಾರಣದಿಂದ 24,06,044



ಮಂದಿಗೆ ನೋಟಿಸ್ ನೀಡಿ ವಿಚಾರಣೆ ನಡೆಸಬೇಕಾಗಿತ್ತು. ಈ ಪೈಕಿ ಬಹುತೇಕ ವಿಚಾರಣೆಗಳು ಈಗಾಗಲೇ ಪೂರ್ಣಗೊಂಡಿವೆ. ವಿಚಾರಣೆ ನಡೆಸುವ ಬದಲು ಬೂತ್ ಮಟ್ಟದ ಅಧಿಕಾರಿಗಳು ನೇರವಾಗಿ ಮನೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸುವಂತೆ ಭಾರತದ ಚುನಾವಣಾ ಆಯೋಗ ನಿರ್ದೇಶನ ನೀಡಿದ್ದು, ಅದರಂತೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿಗೆ ಹೊಸದಾಗಿ ಹೆಸರು ಸೇರ್ಪಡೆಗೊಳಿಸಲು 2.19 ಲಕ್ಷ ಮಂದಿ ನಮೂನೆ–6 ಸಲ್ಲಿಸಿದ್ದಾರೆ. ನಮೂನೆ–7 ಮತ್ತು ನಮೂನೆ–8 ಸೇರಿದಂತೆ ವಿವಿಧ ಅರ್ಜಿಗಳ ವಿಲೇವಾರಿ ಹಾಗೂ ಪರಿಶೀಲನೆಯ ಬಳಿಕ ಸುಮಾರು 2 ಲಕ್ಷ ಮತದಾರರ ಸೇರ್ಪಡೆಯಾಗುವ ನಿರೀಕ್ಷೆಯಿದೆ. ಈ ಹಿನ್ನೆಲೆಯಲ್ಲಿ ನಗರದಲ್ಲಿ ಒಟ್ಟು ಮತದಾರರ ಸಂಖ್ಯೆ 59 ಲಕ್ಷಕ್ಕೆ ತಲುಪುವ ನಿರೀಕ್ಷೆಯಿದೆ ಎಂದು ತಿಳಿಸಿದರು.

ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ನಮೂನೆ–7ರ ಅಡಿಯಲ್ಲಿ ಒಟ್ಟು 5,549 ಅರ್ಜಿಗಳು ಸಲ್ಲಿಕೆಯಾಗಿದ್ದು, ಈ ಪೈಕಿ ಈವರೆಗೆ 2,468 ಅರ್ಜಿಗಳಿಗೆ ಅನುಮೋದನೆ ನೀಡಲಾಗಿದೆ. ಇದುಒಟ್ಟು ಅರ್ಜಿಗಳ ಶೇ. 44ರಷ್ಟಾಗಿದೆ. ಬೂತ್ ಮಟ್ಟದ ಏಜೆಂಟ್‌ಗಳಿಗೆ ನಮೂನೆ–7ರ ಅಡಿಯಲ್ಲಿ ಗರಿಷ್ಠ 10 ಅರ್ಜಿಗಳನ್ನು ಸಲ್ಲಿಸಲು ಅವಕಾಶವಿದೆ. ಈ ಮಿತಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸಲ್ಲಿಕೆಯಾದಲ್ಲಿ ಅವುಗಳನ್ನು ಪರಿಶೀಲಿಸಿ, ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. ಈ ಸಂಬಂಧ ಮಲ್ಲೇಶ್ವರಂನಲ್ಲಿ 1,103 ನಮೂನೆ–7 ಅರ್ಜಿಗಳನ್ನು ತಿರಸ್ಕರಿಸಲಾಗಿದೆ. ಇತರೆ ಪ್ರದೇಶಗಳಲ್ಲಿ ಸಲ್ಲಿಕೆಯಾಗಿರುವ ಸಾಮೂಹಿಕ ಅರ್ಜಿಗಳನ್ನೂ ಪರಿಶೀಲಿಸಿ, ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

**ವೆಬ್‌ಸೈಟ್‌ನಲ್ಲಿ ಮಾಹಿತಿ ಲಭ್ಯ**

ವಿಧಾನಸಭಾ ಕ್ಷೇತ್ರವಾರು ಸ್ವೀಕೃತವಾಗಿರುವ ಹಕ್ಕು ಮತ್ತು ಆಕ್ಷೇಪಣೆಗಳ ಮಾಹಿತಿಯನ್ನು ಸಾರ್ವಜನಿಕರ ಅನುಕೂಲಕ್ಕಾಗಿ ನಮೂನೆ–9, 10, 11, 11ಎ ಮತ್ತು 11ಬಿ ಸೇರಿದಂತೆ ಸಂಬಂಧಿತ ನಮೂನೆಗಳ ವಿವರಗಳೊಂದಿಗೆ ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿ ಹಾಗೂ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ಚುನಾವಣಾ ಆಯೋಗದ ವೆಬ್‌ಸೈಟ್: https://voters.eci.gov.in/

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವೆಬ್‌ಸೈಟ್: ʒttps://bbmp.gov.in/home

**ಎಸ್‌ಐಆರ್ ವೇಳಾಪಟ್ಟಿ**

ಕರಡು ಮತದಾರರ ಪಟ್ಟಿ ಪ್ರಕಟಣೆ: 24.08.2026 – ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ: 24.08.2026ರಿಂದ 23.09.2026ರವರೆಗೆ

– ಹಕ್ಕು ಮತ್ತು ಆಕ್ಷೇಪಣೆಗಳ ಅರ್ಜಿಗಳ ವಿಲೇವಾರಿ: 24.08.2026ರಿಂದ 22.10.2026 ರವರೆಗೆ

– ಅಂತಿಮ ಮತದಾರರ ಪಟ್ಟಿ ಪ್ರಕಟಣೆ: 27.10.2026 ಸಭೆಯಲ್ಲಿ ವಿಶೇಷ ಆಯುಕ್ತರಾದ ಶಿಲ್ಪಾ ನಾಗ್, ಅಪರ ಜಿಲ್ಲಾ ಚುನಾವಣಾಧಿಕಾರಿಗಳಾದ ಪೊಮ್ಮಲ ಸುನೀಲ್ ಕುಮಾರ್, ರಮೇಶ್ ಕೆ.ಎನ್. ಹಾಗೂ ಜಿ. ಜಗದೀಶ್, ಅಪರ ಜಿಲ್ಲಾಧಿಕಾರಿ ಜಗದೀಶ್ ನಾಯ್ಕ್, ಜಂಟಿ ಆಯುಕ್ತರು, ಸಹಾಯಕ ಆಯುಕ್ತರು ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಹುಲಿ ಸಾವು, ಕಾಡಾನೆ ದಂತ ನಾಮಪತ್ತೆ ಪ್ರಕರಣ: ವಾರದೊಳಗೆ ವರದಿ ಸಲ್ಲಿಸುವಂತೆ ಸಚಿವ ರಾಮಲಿಂಗಾರೆಡ್ಡಿ ಸೂಚನೆ

**ಬೆಂಗಳೂರು, ಅ.15:** ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮದ್ದೂರು ವಲಯದಲ್ಲಿ ಹುಲಿ ಉರುಳಿಗೆ ಸಿಲುಕಿ ಮೃತಪಟ್ಟಿರುವುದು ಹಾಗೂ ಕರಡಿಕಲ್ಲು ಗುಡ್ಡ ಪ್ರದೇಶದಲ್ಲಿ ಮೃತಪಟ್ಟ ಕಾಡಾನೆಯ ದಂತಗಳು ನಾಪತ್ತೆಯಾಗಿರುವ ಗಂಭೀರ ಪ್ರಕರಣಗಳ ಕುರಿತು ಸಮಗ್ರ ತನಿಖೆ ನಡೆಸಿ, ಒಂದು ವಾರದೊಳಗೆ ವಿವರವಾದ ವರದಿ ಸಲ್ಲಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ರಾಮಲಿಂಗಾರೆಡ್ಡಿ ಅವರು ಅರಣ್ಯ ಇಲಾಖೆಯ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಅರಣ್ಯದ ಒಳಭಾಗದಲ್ಲೇ ಇಂತಹ ಕೃತ್ಯಗಳು ನಡೆದಿರುವುದು ಅರಣ್ಯ ಇಲಾಖೆಯ ಗಸ್ತು ವ್ಯವಸ್ಥೆ, ಮೇಲ್ವಿಚಾರಣೆ ಹಾಗೂ ಕರ್ತವ್ಯ ನಿರ್ವಹಣೆಯ ಬಗ್ಗೆ ತೀವ್ರ ಆತಂಕ ಮತ್ತು ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿದೆ ಎಂದು ಸಚಿವರು ತಮ್ಮ ಟಿಪ್ಪಣಿಯಲ್ಲಿ ಉಲ್ಲೇಖಿಸಿದ್ದಾರೆ. ವನ್ಯಜೀವಿಗಳ ಸಂರಕ್ಷಣೆಯಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯವನ್ನು ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿರುವ ಅವರು, ಈ ಕೆಳಗಿನ ಪ್ರಮುಖ ಅಂಶಗಳ ಕುರಿತು ತುರ್ತು ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ:

ಎರಡೂ ಘಟನೆಗಳ ನಡುವೆ ಪರಸ್ಪರ ನಂಟಿದೆಯೇ ಎಂಬುದನ್ನೂ ಪರಿಶೀಲಿಸಬೇಕು. ಮೃತದೇಹಗಳು ಕೊಳೆತ ಸ್ಥಿತಿಯಲ್ಲಿರುವುದರಿಂದ ಮರಣೋತ್ತರ ಪರೀಕ್ಷೆ, ಪ್ರಯೋಗಾಲಯದ ವರದಿಗಳು, ಸ್ಥಳ ಪರಿಶೀಲನೆ, ಭೌತಿಕ ಸಾಕ್ಷ್ಯಗಳು, ಸಿಬ್ಬಂದಿಯ ಹೇಳಿಕೆಗಳು ಹಾಗೂ ಗಸ್ತು ಪುಸ್ತಕಗಳನ್ನು ಪರಿಶೀಲಿಸಿ ಯಾವುದೇ ಸಾಕ್ಷ್ಯ ನಾಶವಾಗದಂತೆ ತನಿಖೆ ನಡೆಸಲು ಸೂಚಿಸಲಾಗಿದೆ.

**ಡಿಸಿಎಫ್, ಎಸಿಎಫ್‌ಗಳಿಗೆ ಕಡ್ಡಾಯ ಫೀಲ್ಡ್ ವಿಸಿಟ್:** ರಾಜ್ಯದ



ಎಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಹಾಗೂ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗಳು ಕೇವಲ ಕಚೇರಿಗಳಲ್ಲಿ ಕುಳಿತು ವರದಿ ಪಡೆಯುವುದಕ್ಕೆ ಸೀಮಿತವಾಗದೆ, ಇಂದಿನಿಂದಲೇ ಕಡ್ಡಾಯವಾಗಿ ತಮ್ಮ ವ್ಯಾಪ್ತಿಯ ಅರಣ್ಯ ಪ್ರದೇಶಗಳಿಗೆ ಖುದ್ದಾಗಿ ಭೇಟಿ ನೀಡಿ ಕ್ಷೇತ್ರ ಪರಿಶೀಲನೆ ನಡೆಸಬೇಕು. ವಿಶೇಷವಾಗಿ ಹುಲಿ ಸಂರಕ್ಷಿತ ಪ್ರದೇಶಗಳು ಹಾಗೂ ಸೂಕ್ಷ್ಮ ವಲಯಗಳಲ್ಲಿ ಸಿಬ್ಬಂದಿಯ ಗಸ್ತು ಮತ್ತು ಭದ್ರತಾ ವ್ಯವಸ್ಥೆಯನ್ನು ಖುದ್ದು ಪರಿಶೀಲಿಸಿ ಲೋಪಗಳನ್ನು ತಕ್ಷಣವೇ ಸರಿಪಡಿಸಬೇಕು ಎಂದರು

# ರಾಜ್ಯದ 12 ಜಿಲ್ಲೆಗಳಲ್ಲಿ ಮೂರು ದಿನ ಹಿಂಗಾರು ಅಬ್ಬರ

**ಬೆಂಗಳೂರು, ಅ.15:** ತೀವ್ರ ಮಳೆ ಕೊರತೆಯಿಂದ ಕೂಡಿದ್ದ ಮುಂಗಾರು ಹಂಗಾಮು ಕೊನೆಗೊಂಡಿದೆ. ಹಿಂಗಾರು ಆರಂಭವಾಗಿದೆ. ಬಂಗಾಳ ಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರ ಕುಸಿತದಿಂದಾಗಿ, ರಾಜ್ಯದ 12 ಜಿಲ್ಲೆಗಳಲ್ಲಿ ಮುಂದಿನ ಮೂರು ದಿನ ಅಂದರೆ, ಅಕ್ಟೋಬರ್ 18ರವರೆಗೆ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಈ ವರ್ಷ ಮುಂಗಾರು ಮಾತ್ರವಲ್ಲ, ಹಿಂಗಾರು ಮಳೆ ಕೂಡ ಸುಮಾರು 30%ರಷ್ಟು ಕೊರತೆಯಾಗಲಿದೆ ಎಂದು ಹವಾಮಾನ ತಜ್ಞರು ಆರಂಭಿಕ ಅಂದಾಜು ಮಾಡಿದ್ದಾರೆ. ಆದಾಗ್ಯೂ, ಹಿಂಗಾರಿನ ಆರಂಭದಲ್ಲಿಯೇ ಬಂಗಾಳ ಕೊಲ್ಲಿ ವಾಯುಭಾರ ಕುಸಿದಿರುವ ಪರಿಣಾಮ, ತಮಿಳುನಾಡು, ಆಂಧ್ರಪ್ರದೇಶ, ಕರ್ನಾಟಕ ಹಾಗೂ ಕೇರಳದಲ್ಲಿ ಮಳೆ ಅಬ್ಬರ ಜೋರಾಗಿದೆ.

ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ ಮತ್ತು ಉಡುಪಿ, ಮಲೆನಾಡು ಮತ್ತು ದಕ್ಷಿಣ ಒಳನಾಡು ಜಿಲ್ಲೆಗಳಾದ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಹಾಸನ, ಕೊಡಗು ಹಾಗೂ ಶಿವಮೊಗ್ಗ ಸೇರಿದಂತೆ



ವಿವಿಧ ಜಿಲ್ಲೆಗಳಲ್ಲಿ ಗುಡುಗು ಸಹಿತ ಭಾರೀ ಮಳೆಯಾಗಲಿದೆ ಎಂದು ಇಲಾಖೆ ತಿಳಿಸಿದೆ. ಉತ್ತರ ಒಳನಾಡಿನ ಜಿಲ್ಲೆಗಳಾದ ಬೆಳಗಾವಿ, ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಅಲ್ಲಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಬಾಗಲಕೋಟೆ, ಬೀದರ್, ಕಲಬುರಗಿ, ರಾಯಚೂರು, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿಯೂ ಮಳೆ ಯಾಗುವ ನಿರೀಕ್ಷೆಯಿದೆ. ಮಳೆಯಿಂದಾಗಿ ರಾಜ್ಯದಾದ್ಯಂತ ಹವಾಮಾನದಲ್ಲಿ ಭಾರೀ ಬದಲಾವಣೆಗಳು ಕಂಡು ಬಂದಿವೆ. ಹಲವೆಡೆ ಮೋಡ ಕವಿದ ವಾತಾವರಣ ಮುಂದುವರಿದಿದೆ. ಬಿಸಿಲಿನಿಂದ ಸುಡುತ್ತಿದ್ದ ಬೆಂಗಳೂರು ನಗರದಲ್ಲಿ ತಾಪಮಾನವು ಕನಿಷ್ಠ 20 ಡಿಗ್ರಿ ಸೆಲ್ಸಿಯಸ್‌ಗೆ ಇಳಿದಿದೆ. ಗಾಳಿಯೂ ಗಂಟೆಗೆ 30ರಿಂದ 40 ಕಿ.ಮೀ ವೇಗದಲ್ಲಿ ಬೀಸುತ್ತಿದೆ.

# ಕೊಲೆ ಪ್ರಕರಣದ ಅಪರಾಧಿ ರಿಂಗ್‌ರೋಡ್ ಶುಭಾ ಕ್ಷಮಾದಾನ ಅರ್ಜಿ ತಿರಸ್ಕರಿಸಿದ ಸಚಿವ ಸಂಪುಟ

**ಬೆಂಗಳೂರು, ಅ.15:** 2003ರಲ್ಲಿ ರಾಜ್ಯಾದ್ಯಂತ ಭಾರೀ ಸಂಚಲನ ಸೃಷ್ಟಿಸಿದ್ದ ರಿಂಗ್‌ರೋಡ್ ಶುಭಾ ಪ್ರಕರಣ ಮತ್ತೆ ಮುನ್ನೆಲೆಗೆ ಬಂದಿದೆ. ಗಿರೀಶ್ ಕೊಲೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆ ಅನುಭವಿಸುತ್ತಿರುವ ಶುಭಾ ಶಂಕರನಾರಾಯಣ ಮತ್ತು ಡಿ. ಅರುಣ್ ವರ್ಮಾ ಸಲ್ಲಿಸಿದ್ದ ಕ್ಷಮಾದಾನ ಅರ್ಜಿಗಳನ್ನು ರಾಜ್ಯ ಸಚಿವ ಸಂಪುಟ ಸಭೆ ತಿರಸ್ಕರಿಸಿದೆ.

ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು, ಶುಭಾ ಹಾಗೂ ಅರುಣ್ ಸಲ್ಲಿಸಿದ್ದ ಕ್ಷಮಾದಾನ ಅರ್ಜಿಗಳನ್ನು ತಿರಸ್ಕರಿಸಲಾಗಿದೆ ಎಂದರು.

ಶುಭಾ ಹಾಗೂ ಅರುಣ್ ವರ್ಮಾ ಕ್ಷಮಾದಾನ ಕೋರಿ ರಾಜ್ಯಪಾಲರ ಮುಂದೆ ಅರ್ಜಿ ಸಲ್ಲಿಸಿದ್ದು, ಈ ಅರ್ಜಿಗಳ ಕುರಿತು ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆಸಲಾಯಿತು. ಅಂತಿಮವಾಗಿ ಸಂಪುಟ ಸಭೆ ಕ್ಷಮಾದಾನ ಅರ್ಜಿಯನ್ನು ತಿರಸ್ಕಾರ ಮಾಡಿದೆ ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ.

ಅಪರಾಧದ ತೀವ್ರತೆ ಹಾಗೂ ಸಮಾಜದ ಮೇಲೆ ಬೀರಿದ ಪರಿಣಾಮವನ್ನು ಪರಿಗಣಿಸಿದ ಸಚಿವ ಸಂಪುಟ, ಯಾವುದೇ ಕಾರಣಕ್ಕೂ ಕ್ಷಮಾದಾನ ನೀಡಲು ಸಾಧ್ಯವಿಲ್ಲ ಎಂಬ ತೀರ್ಮಾನಕ್ಕೆ ಬಂದು ಅರ್ಜಿಯನ್ನು ತಿರಸ್ಕರಿಸಿದೆ. ಈ ಕ್ಷಮಾದಾನ ಅರ್ಜಿ ಇಲ್ಲಿನ ಕಾನೂನು ಚೌಕಟ್ಟಿನ ಒಳಗಿಲ್ಲ. ಕ್ಷಮಾದಾನ ಅರ್ಜಿ ತಿಸ್ಕರಿಸಿ ರಾಜ್ಯಪಾಲರಿಗೆ ಮಾಹಿತಿ ನೀಡಲಾಗುತ್ತದೆ ಎಂದು ಖರ್ಗೆ ತಿಳಿಸಿದರು.

ಬೆಂಗಳೂರಿನ 17ನೇ ತ್ವರಿತ ವಿಚಾರಣಾ ನ್ಯಾಯಾಲಯದಲ್ಲಿ ದಾಖಲಾಗಿದ್ದ ಎಸ್.ಸಿ. ಸಂಖ್ಯೆ 314/2004ರ ಪ್ರಕರಣಕ್ಕೆ ಸಂಬಂಧಿಸಿ ದಂತೆ ಈ ನಿರ್ಧಾರ ಕೈಗೊಳ್ಳಲಾಗಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ 2025ರ ಜುಲೈ 14ರಂದು ನೀಡಿದ ಆದೇಶದಲ್ಲಿ,



ಅರ್ಜಿದಾರರಿಗೆ ಭಾರತದ ಸಂವಿಧಾನದ 161ನೇ ವಿಧಿಯಡಿ ರಾಜ್ಯಪಾಲರ ಮುಂದೆ ಕ್ಷಮಾದಾನ ಕೋರಿ ಅರ್ಜಿ ಸಲ್ಲಿಸಲು ಎಂಟು ವಾರಗಳ ಕಾಲಾವಕಾಶ ನೀಡಿತ್ತು. ಅರ್ಜಿಗಳನ್ನು ಪರಿಗಣಿಸಿ ನಿರ್ಧಾರ ಕೈಗೊಳ್ಳುವವರೆಗೆ ಅವರನ್ನು ಬಂಧಿಸಬಾರದು ಹಾಗೂ ಶಿಕ್ಷೆಯನ್ನು ಅಮಾನತಿನಲ್ಲಿಡಬೇಕು ಎಂದು ನ್ಯಾಯಾಲಯ ನಿರ್ದೇಶಿಸಿತ್ತು.

ಜೀವಾವಧಿ ಶಿಕ್ಷೆಯನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿದ ಬಳಿಕ, ಶಿಕ್ಷೆಯಿಂದ ವಿನಾಯಿತಿ ಹಾಗೂ ಕ್ಷಮಾದಾನ ಕೋರಿ ಶುಭಾ ಶಂಕರ ನಾರಾಯಣ್ ಮತ್ತು ಅರುಣ್ ವರ್ಮಾ ನೇರವಾಗಿ ರಾಜ್ಯಪಾಲರಿಗೆ ಅರ್ಜಿ ಸಲ್ಲಿಸಿದ್ದರು. ರಾಜ್ಯಪಾಲರ ಸಚಿವಾಲಯವು ನಿಯಮಾನುಸಾರ ವರದಿ ನೀಡುವಂತೆ ಗೃಹ ಇಲಾಖೆಗೆ ಈ ಕಡತವನ್ನು ಕಳುಹಿಸಿಕೊಟ್ಟಿತ್ತು. ಗೃಹ ಇಲಾಖೆಯು ಕಾರಾಗೃಹ ಅಧಿಕಾರಿಗಳು ಹಾಗೂ ಪೊಲೀಸರಿಂದ ಅಭಿಪ್ರಾಯ ಪಡೆದು ಕಡತವನ್ನು ಸಚಿವ ಸಂಪುಟದ ಮುಂದಿಟ್ಟಿತ್ತು. ಸಂಪುಟವು ಅರ್ಜಿಯನ್ನು ಸಂಪೂರ್ಣವಾಗಿ ತಳ್ಳಿಹಾಕುವ ಮೂಲಕ ಅಪರಾಧಿಗಳಿಗೆ ಶಾಕ್ ನೀಡಿದೆ.

# ವೈಭವದ ಆನೇಕಲ್ ದಸರಾ: ಚೈತ್ರಾ ಭರತ್ ತಂಡದಿಂದ ಸುಗಮ ಸಂಗೀತ



**ಬೆಂಗಳೂರು,ಅ.15:** ಆನೇಕಲ್ ನ ತಿಲಕ್ ವೃತ್ತದ ಶ್ರೀ ಚೌಡೇಶ್ವರಿ ಅಮ್ಮನವರ ದೇವಾಲಯದಲ್ಲಿ 'ಆನೇಕಲ್ ದಸರಾ ಮಹೋತ್ಸವ' ವೈಭವದಿಂದ ನಡೆಯುತ್ತಿದ್ದು, ನವರಾತ್ರಿಯ ನಾಲ್ಕನೇ ದಿನವಾದ ಬುಧವಾರ ರಾತ್ರಿ ವಿದ್ವಾನ್ ಎನ್. ಮಲ್ಲೇಶ್ ಆರಾಧ್ಯ ಅವರ ಮೊಮ್ಮಗಳು ಚೈತ್ರಾ ಭರತ್ ತಂಡದಿಂದ ಸುಗಮ ಸಂಗೀತಗೋಷ್ಠಿ ಆಯೋಜಿಸಲಾಗಿತ್ತು.

ದೇವಾಲಯ ಸಮೀಪ ನಿರ್ಮಿಸಿದ್ದ ಭವ್ಯ ವೇದಿಕೆಯಲ್ಲಿ ಚೈತ್ರಭರತ್ ಅವರು ಭಕ್ತಿ, ಜಾನಪದ, ಸಿನೆಮಾ, ಖ್ಯಾತ ಕವಿಗಳ ರಚನೆ ಸೇರಿದಂತೆ ಎಲ್ಲಾ ಪ್ರಕಾರದ ಗೀತೆಗಳನ್ನು ಹಾಡಿ ರಂಜಿಸಿದರು. ಅಪಾರ ಭಕ್ತ ಸಮೂಹದ ಸಮ್ಮುಖದಲ್ಲಿ ಮಧ್ಯರಾತ್ರಿವರೆಗೂ ನಡೆದ ಕಾರ್ಯಕ್ರಮದಲ್ಲಿ ವಿದ್ವಾನ್ ಎಲ್ಲಪ್ಪ ಅವರು ಹಲವಾರು ಗೀತೆಗಳನ್ನು ಹಾಡಿದರು. ಮುನಿರಾಜು ತಬಲಾ, ಅರುಣ್ ಕುಮಾರ್ ರಿದಂ ಪ್ಯಾಡ್, ಸಿ. ಸಂತೋಷ್ ಕೀ ಪ್ಯಾಡ್ ನುಡಿಸಿ ಗಮನ ಸೆಳೆದರು.

# ಕಂಬಳ, ತುಳುನಾಡಿನ ಸ್ತಬ್ಧಚಿತ್ರ ಈ ಬಾರಿಯ ದಸರಾ ಆಕರ್ಷಣೆ: ಡಿ.ಕೆ.ಶಿ.



ಮಂಗಳೂರು, ಅ.15: ಕರಾವಳಿಯ ಕಂಬಳ, ತುಳುನಾಡಿನ ಟ್ಯಾಬ್ಲೋ ಈ ಬಾರಿಯ ಮೈಸೂರು ದಸರಾದ ಭಾಗವಾಗಿವೆ ಎಂದು ಸಿಎಂ ಡಿ ಕೆ ಶಿವಕುಮಾರ್ ತಿಳಿಸಿದರು. ಮಂಗಳೂರು ವಿಮಾನ ನಿಲ್ದಾಣದಲ್ಲಿ ಶಿವಕುಮಾರ್ ಮಾಧ್ಯಮಗಳಿಗೆ ಗುರುವಾರ ಪ್ರತಿಕ್ರಿಯೆ ನೀಡಿ, ದಸರಾ ಸಂದರ್ಭದಲ್ಲಿ ಕುದ್ರೋಳಿಗೆ ಆಗಮಿಸುವಂತೆ ಬಹಳ ವರ್ಷಗಳಿಂದ ಜನಾರ್ದನ ಪೂಜಾರಿ ಅವರು ಆಹ್ವಾನ ನೀಡುತ್ತಲೇ ಇದ್ದರು. ಕಳೆದ ವರ್ಷ ಹಬ್ಬದ ಮಧ್ಯೆ ಬಂದಿದ್ದೆ. ಬಹಳ ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಸಮಾಜಗಳು, ಸಮುದಾಯಗಳನ್ನು ಒಗ್ಗೂಡಿಸುವ ಕೆಲಸವಾಗುತ್ತಿದೆ. ನವರಾತ್ರಿಯಲ್ಲಿ ನವದುರ್ಗೆಯರಿಗೆ ಪ್ರಾರ್ಥಿಸಿ, ಸಾಂಸ್ಕೃತಿಕ ಬದುಕನ್ನು ಬಿಂಬಿಸಲಾಗುತ್ತಿದೆ ಎಂದು ತಿಳಿಸಿದರು.

ನಮ್ಮ ನಾಡಹಬ್ಬ ದಸರಾವನ್ನು ಮೈಸೂರಿನಲ್ಲಿ ಸರ್ಕಾರದ ಪರವಾಗಿ ಆಚರಿಸುತ್ತಿದ್ದೇವೆ. ಅ.21ರಂದು ವಿಜಯದಶಮಿಯಂದು ಕಾರ್ಯಕ್ರಮ ನಡೆಯಲಿದ್ದು, ತುಳುನಾಡಿನ ಪ್ರತಿನಿಧಿಗಳು ಕೂಡ ಆಗಮಿಸುತ್ತಿದ್ದಾರೆ. ಅನೇಕ ಹೊಸ ಕಾರ್ಯಕ್ರಮಗಳನ್ನು ಪರಿಚಯಿಸಲಾಗಿದ್ದು, ಪಥಸಂಚಲನದಲ್ಲಿ ನಮ್ಮ ಸೇನಾಪಡೆಗಳ ತಂಡಗಳು ಭಾಗವಹಿಸುತ್ತಿವೆ. ಈ ಬಾರಿ ಹೊಸ ಆನೆ ತಾಯಿ ಚಾಮುಂಡೇಶ್ವರಿ ಅಂಬಾರಿ ಹೊತ್ತು ಹೆಜ್ಜೆ ಹಾಕಲಿದೆ ಎಂದರು.

ಕಂಬಳವನ್ನು ಮೈಸೂರಿಗೆ ತೆಗೆದುಕೊಂಡು ಹೋಗಲಾಗುವುದು ಎಂದು ಹೇಳಿದ್ದೆ. ವಿಜಯನಗರ ಕಾಲದಲ್ಲಿ ದಸರಾ ಸಂದರ್ಭದಲ್ಲಿ ಕೋಣಗಳನ್ನು ಕರೆದುಕೊಂಡು ಬರುತ್ತಿದ್ದರು ಎಂಬ ಇತಿಹಾಸ ತಿಳಿದಿದ್ದೇನೆ. ಇದು ನಿಮ್ಮ ಹಬ್ಬ, ರಾಜ್ಯದ ಹಬ್ಬ ಎಂದರು.

### ಎಸ್ಐಆರ್: ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ

ಎಸ್ಐಆರ್ ದತ್ತಾಂಶಗಳ ವಿಚಾರವಾಗಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದೇವೆ. ಮತದಾನದ ಹಕ್ಕು ಬದುಕಿನ ಹಕ್ಕು. ಅದಕ್ಕಾಗಿ ನಾವೆಲ್ಲರೂ ಹೋರಾಟ ಮಾಡುತ್ತಿದ್ದೇವೆ. ಈ ಹೋರಾಟ ಮುಂದುವರಿಸುತ್ತೇವೆ. ಪ್ರತಿಭಟನೆ ಮೆರವಣಿಗೆ ವೇಳೆ ರಾಹುಲ್ ಗಾಂಧಿ ಅವರು ನನಗೆ ವಾಹನದಲ್ಲಿ ಬರಲು ಹೇಳಿದ್ದನ್ನು ಕೆಲವು ಮಾಧ್ಯಮಗಳು ಹಾಗೂ ಬಿಜೆಪಿ ನಾಯಕರು ಇದು ದೊಡ್ಡ ಅಪಮಾನ ಎಂದು ಅಪಪ್ರಚಾರ ಮಾಡಿದರು. ನನ್ನನ್ನು ರಾಜ್ಯದ ಮುಖ್ಯಮಂತ್ರಿ ಮಾಡಿದ್ದೇ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಅವರು. ಅವರ ಸಹಕಾರದಿಂದ ನಾವು ರಾಜ್ಯದಲ್ಲಿ ಮತದಾರರ ಹಕ್ಕು ಸಂರಕ್ಷಿಸುತ್ತಿದ್ದೇವೆ. ಬಿಜೆಪಿ ನಾಯಕರು ಇದರಲ್ಲಿ ಅಪಪ್ರಚಾರ ಮಾಡಿ ರಾಜಕೀಯ ಲಾಭಕ್ಕೆ ಮುಂದಾಗಿದ್ದಾರೆ. ಇಂತಹ ಸಣ್ಣ ವಿಚಾರವನ್ನು ಲಾಭಕ್ಕೆ ಬಳಸಿಕೊಳ್ಳುವುದು ಬೇಡ. ರಾಹುಲ್ ಗಾಂಧಿ ಅವರು ಮಾನವೀಯತೆ ಹೊಂದಿರುವ ನಾಯಕ ಎಂದು ತಿಳಿಸಿದರು. ಸ್ಟಿಂಗ್ ವಿಚಾರದಲ್ಲಿ ಬಂಧನವಾಗಿರುವ ಬಗ್ಗೆ ಕೇಳಿದಾಗ, ನನಗೆ ಮಾಹಿತಿ ಇಲ್ಲ ಎಂದರು.

## ಕಬ್ಬು ಬೆಳೆಗಾರರ ಬೇಡಿಕೆ ಈಡೇರುವವರೆಗೆ ಹೋರಾಟಕ್ಕೆ ರೈತರ ನಿರ್ಧಾರ

ಕಲಬುರಗಿ, ಅ. 15: ಕಬ್ಬಿಗೆ ಪ್ರತಿ ಕ್ವಿಂಟಾಲ್‌ಗೆ 5,500 ದರ ನಿಗದಿ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ನೇತೃತ್ವದಲ್ಲಿ ಕಬ್ಬು ಬೆಳೆಗಾರರು ನಗರದ ರಾಮಮಂದಿರ ವೃತ್ತದಲ್ಲಿ ನಡೆಸುತ್ತಿರುವ ಹೆದ್ದಾರಿ ತಡೆ ಪ್ರತಿಭಟನೆ ಆರಂಭವಾಗಿದ್ದು ನಾಲ್ಕನೇ ದಿನದಲ್ಲಿ ಅಹೋರಾತ್ರಿ ಮುಂದುವರಿಯಲಿದೆ ಎಂದು ಸಂಘಟಕರು ತಿಳಿಸಿದರು.

ಕೇಂದ್ರದಲ್ಲಿ ಸಂಧಾನದ ಮಾತುಕತೆ ವಿಫಲವಾದ ಕೂಡಲೇ ಆರಂಭವಾದ ಪ್ರತಿಭಟನೆ ವೇಳೆ ನೂರಾರು ರೈತರು ನಗರದ ಹೊರವಲಯದ ರಾಮಮಂದಿರ ವೃತ್ತದಲ್ಲಿ ಜಮಾಯಿಸಿ ರಾಷ್ಟ್ರೀಯ ಹೆದ್ದಾರಿ ತಡೆದು ಧರಣಿ ನಡೆಸಿದರು. ರಸ್ತೆಯಲ್ಲೇ ಕುಳಿತು ಸರ್ಕಾರದ ವಿರುದ್ಧ ಘೋಷಣೆ ಕೂಗಿದ ರೈತರು, ಕಬ್ಬಿನಗೂಡು ನಿರ್ಮಿಸಿ ಹೂವಿನಹಾರ ಹಾಕುವ ಮೂಲಕ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಕೇಂದ್ರ ಸರ್ಕಾರದ ಪ್ರತಿನಿಧಿಗಳೊಂದಿಗೆ ನಡೆದ ಸಂಧಾನ ಸಭೆಯಲ್ಲಿಯೂ ರೈತರ ಪ್ರಮುಖ ಬೇಡಿಕೆಗಳಿಗೆ ಸ್ಪಷ್ಟ ಒಪ್ಪಿಗೆ ದೊರೆಯದ ಹಿನ್ನೆಲೆಯಲ್ಲಿ ಹೋರಾಟ ಮುಂದುವರಿಸಲು ರೈತರು ನಿರ್ಧರಿಸಿದ್ದಾರೆ. ಕೇಂದ್ರದಿಂದ ಬೇಡಿಕೆಗಳಿಗೆ ಒಪ್ಪಿಗೆ ಸಿಗುವವರೆಗೆ ಪ್ರತಿಭಟನೆ ಕೈಬಿಡುವುದಿಲ್ಲ ಎಂದು ರೈತ ಮುಖಂಡರು ಸ್ಪಷ್ಟಪಡಿಸಿದ್ದಾರೆ.

# ರಾಜ್ಯಕ್ಕೆ ಬರಗಾಲ ಪರಿಹಾರವಾಗಿ ಕೇಂದ್ರ ಸರ್ಕಾರವೂ 8,500 ಕೋಟಿ ಬಿಡುಗಡೆ ಮಾಡಲಿ: ಸಚಿವ ಅಜಯ್ ಸಿಂಗ್ ಒತ್ತಾಯ

ರಾಯಚೂರು, ಅ. 15: ರಾಜ್ಯದಲ್ಲಿ ತೀವ್ರವಾದ ಬರಗಾಲದಿಂದ ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ, ಕೇಂದ್ರ ಸರ್ಕಾರಕ್ಕೆ ನಿಜವಾಗಿ ರೈತರ ಪರ ಕಾಳಜಿ ಇದ್ದರೆ ತಕ್ಷಣವೇ 8,500 ಕೋಟಿ ಬಿಡುಗಡೆ ಮಾಡಲಿ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಅಜಯ್ ಸಿಂಗ್ ಒತ್ತಾಯಿಸಿದ್ದಾರೆ.



ರಾಯಚೂರು ಜಿಲ್ಲೆಯ ಲಿಂಗಸುಗೂರ ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷರು, ವಿಧಾನಸಭಾ ಕಾಂಗ್ರೆಸ್ ಉಸ್ತುವಾರಿಗೆ ಅಭಿನಂದನಾ ಸಮಾರಂಭದಲ್ಲಿ ಸಚಿವ ಡಾ.ಅಜಯಸಿಂಗ್ ಅವರು ಮಾತನಾಡಿದರು.

ಲಿಂಗಸುಗೂರಿನ ಕಾಂಗ್ರೆಸ್ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷರು, ಲಿಂಗಸುಗೂರು ವಿಧಾನಸಭಾ ಕಾಂಗ್ರೆಸ್ ಉಸ್ತುವಾರಿಗೆ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಉದ್ದಿಮೆದಾರರ 14 ಲಕ್ಷ ಕೋಟಿ ಸಾಲ ಮನ್ನಾ ಮಾಡಲು ಕೇಂದ್ರ ಸರ್ಕಾರಕ್ಕೆ ಪುರಸೊತ್ತು ಇದೆ. ಆದರೆ ರಾಜ್ಯದಲ್ಲಿ ಬರಗಾಲದಿಂದ ರೈತರು ಸಂಕಷ್ಟ ಅನುಭವಿಸುತ್ತಿದ್ದರೂ ಕೇಂದ್ರ ಸರ್ಕಾರದಿಂದ ನಯಾಪೈಸೆ ಬಿಡುಗಡೆಯಾಗಿಲ್ಲ, ತಕ್ಷಣವೇ ಕನಿಷ್ಠ 8,500 ಕೋಟಿ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಸಿದ್ದರಾಮಯ್ಯ ಆಡಳಿತ ಅವಧಿಯಲ್ಲಿ ಕೇಂದ್ರದ ತಾರತಮ್ಯ ವಿರುದ್ಧ ದೆಹಲಿಯಲ್ಲಿ ಪ್ರತಿಭಟನೆ ಮಾಡಿ ಸುಪ್ರೀಂ ಕೋರ್ಟ್ ಧಾವೆ ಹೂಡಿ ಸುಪ್ರೀಂ ಕೋರ್ಟ್ ಆದೇಶ ನೀಡಿದ ಬಳಿಕ ರಾಜ್ಯಕ್ಕೆ ಅನುದಾನ ನೀಡಲಾಗಿತ್ತು. ಸುಪ್ರೀಂ ಕೋರ್ಟ್ ಮೂಲಕವೇ ಅನುದಾನ ಬಿಡುಗಡೆ ಮಾಡಿಸಿಕೊಳ್ಳಬೇಕಾದ ಅನಿವಾರ್ಯತೆ ಬಂದೊದಗಿದೆ ಎಂದರು.

ರಾಜ್ಯದಲ್ಲಿ ಬರಗಾಲದ ಹಿನ್ನೆಲೆಯಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 1 ಕೋಟಿ ಬಿಡುಗಡೆಗೊಳಿಸಲಾಗಿದೆ. ರಾಯಚೂರು ಜಿಲ್ಲೆಗೆ ಒಟ್ಟು 11 ಕೋಟಿ ಬಿಡುಗಡೆಗೊಳಿಸಿದೆ. ಇನ್ನೂ ಹೆಚ್ಚಿನ ಅನುದಾನ ನೀಡುವುದಾಗಿ ಸಿಎಂ ಡಿ.ಕೆ.ಶಿವಕುಮಾರ್ ಭರವಸೆ ನೀಡಿದ್ದಾರೆ. ಮುಂದಿನ ತಿಂಗಳು ಜಿ.ಪಂ ಮತ್ತು ತಾ.ಪಂ ಚುನಾವಣೆ ನಡೆಯಲಿದೆ. ಇದಕ್ಕಾಗಿ ಕಾಂಗ್ರೆಸ್ ಕಾರ್ಯಕರ್ತರು ಸಜ್ಜಾಗಬೇಕು. ಪಕ್ಷದ ಸಂಘಟನೆಗಾಗಿ ಇಂದಿನಿಂದಲೇ ಚಾಲನೆ ನೀಡಲಾಗಿದೆ. ಸ್ಥಳೀಯ ಸಂಸ್ಥೆಗಳಲ್ಲಿ ಗೆದ್ದರೆ ಮುಂಬರುವ ವಿಧಾನಸಭಾ ಹಾಗೂ ಲೋಕಸಭಾ ಚುನಾವಣೆಯಲ್ಲಿ ಗೆಲ್ಲಲು ಸಹಕಾರಿಯಾಗಲಿದೆ. ರಾಜ್ಯ ಸರ್ಕಾರದ ಆಡಳಿತ ಜನಪರ ಯೋಜನೆಗಳಿಂದಲೇ 2028ರಲ್ಲಿ ಕಾಂಗ್ರೆಸ್ ಮತ್ತೆ ಅಧಿಕಾರಕ್ಕೆ ಬರಲಿದೆ' ಎಂದು ಹೇಳಿದರು.

ಲಿಂಗಸುಗೂರ ವಿಧಾನಸಭಾ ಕಾಂಗ್ರೆಸ್ ಉಸ್ತುವಾರಿ ಬಸನಗೌಡ ಬಾದರ್ಲಿ ಮಾತನಾಡಿ, ಕಾಂಗ್ರೆಸ್‌ನಲ್ಲಿ ವ್ಯಕ್ತಿಪೂಜೆಗೆ ಅವಕಾಶವಿಲ್ಲ, ಪಕ್ಷಗಿಂತ ದೊಡ್ಡವರಿಲ್ಲ, ಇನ್ನು ಮುಂದೆ ಪಕ್ಷದ ಮುಖಂಡರಲ್ಲಿ ಸಣ್ಣಪುಟ್ಟ ಭಿನ್ನಾಭಿಪ್ರಾಯಗಳನ್ನು ಮರೆತು ಕೆಲಸ ಒಗ್ಗಟ್ಟಾಗಿ ಕೆಲಸ ಮಾಡಬೇಕು.

ಆದರೆ ಪಕ್ಷದಲ್ಲಿ ಇದ್ದುಕೊಂಡೇ ಪಕ್ಷದ ವಿರುದ್ಧ ಕೆಲಸ ಮಾಡುವವರ ವಿರುದ್ಧ ಕೆಪಿಸಿಸಿ ಅಧ್ಯಕ್ಷರಿಗೆ ದೂರು ನೀಡುವೆ. ಪಕ್ಷದ ಕೆಲಸಗಳನ್ನು ಶಿಸ್ತಿನಿಂದ ಕೆಲಸ ಮಾಡಬೇಕು ಎಂದರು.

# ಎಲ್ಲ ನಷ್ಟಕ್ಕೂ ಪ್ರಲ್ಹಾದ ಜೋಶಿ ಕಾರಣ: ರಾಜ್ಯ ರೈತಸಂಘದ ಅಧ್ಯಕ್ಷ ಚೂನಪ್ಪ ಆರೋಪ

## ಹೆದ್ದಾರಿ ತಡೆಯಿಂದ ನೂರಾರು ಕೋಟಿ ರೂ. ಹಾನಿ

ಬೆಳಗಾವಿ, ಅ.15: ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿದ್ದರಿಂದ ನೂರಾರು ಕೋಟಿ ರೂಪಾಯಿಗಳ ಹಾನಿ ಸಂಭವಿಸಿದೆ ಎಂದು ಸರ್ಕಾರ ಹೇಳಿದೆ. ಎಲ್ಲ ಹಾನಿಗೂ ಪ್ರಲ್ಹಾದ ಜೋಶಿ ಅವರೇ 'ಎ–1' ಆರೋಪಿ. ಅವರ ಕುತಂತ್ರದ ನಂತರ ರೈತರ ಬೀದಿಗೆ ಇಳಿದಿದ್ದಾರೆ' ಎಂದು ರಾಜ್ಯ ರೈತ ಸಂಘದ ಅಧ್ಯಕ್ಷ ಚೂನಪ್ಪ ಪೂಜೇರಿ ದೂರಿದರು.

'ಹುಬ್ಬಳ್ಳಿಯತ್ತ ಪಾದಯಾತ್ರೆ' ವೇಳೆ ಬೆಳಗಾವಿ ತಾಲ್ಲೂಕಿನ ಕಾಕತಿ ಬಳಿ ಗುರುವಾರ ಮಾತನಾಡಿದ ಅವರು, ಎರಡು ದಿನಗಳಿಂದ ರಾಜ್ಯದ ಬೇರೆಬೇರೆ ಕಡೆಗಳಲ್ಲಿ ರಾಷ್ಟ್ರೀಯ ಹೆದ್ದಾರಿ ಸಂಪೂರ್ಣ ಬಂದ್ ಮಾಡಿದ್ದೇವೆ. ಇದರಿಂದ ಜನರಿಗೆ, ವಾಹನ ಸವಾರರಿಗೆ ತೊಂದರೆ ಆಗಿದ್ದು ನಮಗೂ ಅರಿವಿದೆ. ಆದರೆ, ಎಲ್ಲರೂ ರೈತ ದುಡಿದ ಅನ್ನವನ್ನೇ ತಿನ್ನಬೇಕಲ್ಲ. ರೈತನೇ ಬದುಕಿಲ್ಲ ಎಂದಾದರೆ ಉಳಿದವರು ಹೇಗೆ ಬದುಕಲು ಸಾಧ್ಯ' ಎಂದೂ ಮರು ಪ್ರಶ್ನಿಸಿದರು.

ಇಷ್ಟೆಲ್ಲ ತೊಂದರೆ ಆಗುತ್ತಿದೆ ಎಂದು ಗೊತ್ತಿದ್ದರೂ ಯಾವೊಬ್ಬ ಜನಪ್ರತಿನಿಧಿ, ಅಧಿಕಾರಿ ಅಥವಾ ಜವಾಬ್ದಾರಿಯುತ ರಾಜಕಾರಣಿ ಸ್ಥಳಕ್ಕೆ ಬರಲಿಲ್ಲ. ರೈತರಿಗೆ ಸಮಾಧಾನ ಹೇಳುವ ಕೆಲಸ ಮಾಡಲಿಲ್ಲ. ಇವರೆಲ್ಲ ಸೇರಿಕೊಂಡು ರೈತರನ್ನು ಕೊಲ್ಲಲು ಹೊರಟಿದ್ದಾರೆ' ಎಂದೂ ಕಿಡಿ ಕಾರಿದರು.

ಪೆಟ್ರೋಲ್, ಡಿಸೇಲ್ ದರ ಏರಿಸುವಾಗ ಸರ್ಕಾರ ಜಂಟಿ ಸಮಿತಿ ಮಾಡಿ ಚರ್ಚೆಗೆ ಕರೆದಿಲ್ಲ. ಬೀಜ, ಗೊಬ್ಬರ ಬೆಲೆ ಏರಿಸುವಾಗ ರೈತರು ನೆನಪಾಗಿಲ್ಲ; ಚೂನಪ್ಪ ಪೂಜೇರಿಯೂ ನೆನಪಾಗಿಲ್ಲ. ಈಗ ಸಕ್ಕರೆಗೆ, ಕಬ್ಬಿಗೆ, ಎಥೆನಾಲ್‌ಗೆ ಬೆಲೆ ಕೇಳಬೇಕಾದಾಗ ಇವರಿಗೆ ಸಮಿತಿ ರಚಿವುಸುದು ನೆನಪಾಯಿತೇ ಎಂದೂ ಕಿಡಿ ಕಾರಿದರು.

**ಐಎಎಸ್ ಅಧಿಕಾರಿಗಳನ್ನು ದನ ಕಾಯಲು ಇಟ್ಟುಕೊಂಡಿದ್ದೀರಾ**

ಡಿ.ಕೆ.ಶಿವಕುಮಾರ್ ಅವರು ಬುಧವಾರ ಸಂಜೆ ಫೋನ್ ಮಾಡಿ ಮಾತನಾಡಿದರು. ಜನರಿಗೆ ತೊಂದರೆಯಾಗುತ್ತದೆ ಧರಣಿ ಕೈಬಿಡಿ ಎಂದರು. ಅವರ ಮಾತಿಗೆ ಗೌರವ



ಕೊಡುತ್ತೇವೆ. ಆದರೆ, ಹೋರಾಟ ನಿಲ್ಲಿಸುವುದಿಲ್ಲ. ರಾಷ್ಟ್ರೀಯ ಹೆದ್ದಾರಿಯ ಒಂದು ಬದಿಗೆ ಸಂಚಾರಕ್ಕೆ ಬಿಟ್ಟಿದ್ದೇವೆ. ಇನ್ನೊಂದು ಬದಿಯಲ್ಲಿ ನಾವು ಪಾದಯಾತ್ರೆ ಮಾಡುತ್ತಿದ್ದೇವೆ' ಎಂದರು.'ರೈತರ ಬೇಡಿಕೆ ಈಡೇರಿಸಬೇಕಾದ ಕರ್ತವ್ಯ ಮುಖ್ಯಮಂತ್ರಿ ಅವರದ್ದೂ ಆಗಿದೆ. ನಾವು ಅವರನ್ನೂ ಆಗ್ರಹ ಮಾಡಿದ್ದೇವೆ. ರಾಜ್ಯ ಸರ್ಕಾರದ ಪಾಲಿನ ಅನುದಾನವನ್ನೂ ಅವರು ನೀಡಲೇಬೇಕು. ಮಾತ್ರವಲ್ಲ; ಕೇವಲ 3 ತಾಸು ವಿದ್ಯುತ್ ನೀಡುತ್ತಿದ್ದಾರೆ. 7 ತಾಸು ಹಲಗಲು ವಿದ್ಯುತ್ ನೀಡಬೇಕು ಎಂದೂ ಮುಖ್ಯಮಂತ್ರಿ ಅವರನ್ನು ಕೇಳಿದ್ದೇನೆ' ಎಂದು ಚೂನಪ್ಪ ಹೇಳಿದರು.

# ದಸರಾ ಗಜಪಡೆಯ ಕ್ಯಾಪ್ಟನ್ ಅಭಿಮನ್ಯು ಮಾವುತನ ಪತ್ನಿ ನಿಧನ: ಅರಮನೆ ಆವರಣದಲ್ಲಿ ಶೋಕದ ಛಾಯೆ

ಮೈಸೂರು, ಅ.15: ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಸಂಭ್ರಮದ ನಡುವೆಯೇ ಗಜಪಡೆಯ ಶಿಬಿರದಲ್ಲಿ ತೀವ್ರ ದುಃಖದ ವಾತಾವರಣ ಆವರಿಸಿದೆ. ಚಿನ್ನದ ಅಂಬಾರಿ ಹೊರಲಿರುವ ಗಜಪಡೆಯ ನಾಯಕ 'ಅಭಿಮನ್ಯು' ಆನೆಯ ಮಾವುತ ಜೆ.ಎಸ್. ವಸಂತ ಅವರ ಪತ್ನಿ ಅಂಬಿಕಾ (35) ಅನಾರೋಗ್ಯದಿಂದ ಮೈಸೂರಿನ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಇಂದು ಮುಂಜಾನೆ ಕೊನೆಯುಸಿರೆಳೆದಿದ್ದಾರೆ.ದಸರಾ ಮಹೋತ್ಸವದ ಕರ್ತವ್ಯದ ನಿಮಿತ್ತ ಮಾವುತ ವಸಂತ ಅವರು ತಮ್ಮ ಕುಟುಂಬದೊಂದಿಗೆ ಮತ್ತಿಗೋಡು ಆನೆ ಶಿಬಿರದಿಂದ ಮೈಸೂರು ಅರಮನೆ ಆವರಣಕ್ಕೆ ಆಗಮಿಸಿ ವಾಸ್ತವ್ಯ ಹೂಡಿದ್ದರು. ಆದರೆ, ಮೂರು ದಿನಗಳ ಹಿಂದೆ ಅಂಬಿಕಾ ಅವರ ಆರೋಗ್ಯದಲ್ಲಿ ಗಂಭೀರ ಏರುಪೇರು ಕಂಡುಬಂದ ಹಿನ್ನೆಲೆಯಲ್ಲಿ ಅವರನ್ನು ತಕ್ಷಣವೇ ಮೈಸೂರು ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿತ್ತು. ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದರೂ, ಪರಿಸ್ಥಿತಿ ವಿಷಮಿಸಿ ಇಂದು ಬೆಳಿಗ್ಗೆ ಅವರು ಮೃತಪಟ್ಟಿದ್ದಾರೆ.

**ಮತ್ತಿಗೋಡು ಶಿಬಿರದಲ್ಲಿ ಅಂತ್ಯಕ್ರಿಯೆ:** ಅಂಬಿಕಾ ಅವರ ನಿಧನದ ಸುದ್ದಿ ತಿಳಿಯುತ್ತಿದ್ದಂತೆ ಅರಮನೆಯ ಗಜಪಡೆ ವಲಯದಲ್ಲಿ ನೀರವ ಮೌನ ಆವರಿಸಿದೆ. ಮೃತರ ಪಾರ್ಥಿವ ಶರೀರವನ್ನು ತಕ್ಷಣವೇ ಹುಟ್ಟೂರಾದ ಮತ್ತಿಗೋಡು ಆನೆ ಕ್ಯಾಂಪ್‌ಗೆ ರವಾನಿಸಲಾಗಿದ್ದು, ಅಂತಿಮ ವಿಧಿವಿಧಾನಗಳಲ್ಲಿ ಪಾಲ್ಗೊಳ್ಳಲು ದಸರಾ ಶಿಬಿರದ ಸಹ ಮಾವುತರು ಮತ್ತು ಕಾವಾಡಿಗರು ತೆರಳಿದ್ದಾರೆ. ಕುಟುಂಬದಲ್ಲಿ ದುಃಖ ಮಡು ಗಟ್ಟಿದ್ದರೂ, ದಸರಾ ಕರ್ತವ್ಯಕ್ಕೆ ಧಕ್ಕೆಯಾಗದಂತೆ ಅಭಿಮನ್ಯುವಿನ ಸಂಪೂರ್ಣ ಉಸ್ತುವಾರಿಯನ್ನು ಸದ್ಯಕ್ಕೆ ಕಾವಾಡಿ ರಾಜು ಅವರಿಗೆ ವಹಿಸಲಾಗಿದೆ.

ಕುಟುಂಬದ ಮಗನಂತಿದ್ದ ಅಭಿಮನ್ಯು:–ಅಭಿಮನ್ಯು ಮತ್ತು ಮಾವುತ ವಸಂತ ಅವರ ನಡುವಿನ ಸಂಬಂಧ ಕೇವಲ ಪ್ರಾಣಿ ಮತ್ತು ಮಾಲೀಕನ ನಂಟಲ್ಲ. 1977ರಲ್ಲಿ ಕೊಡಗಿನಲ್ಲಿ ಅಭಿಮನ್ಯು ಸೆರೆಸಿಕ್ಕ ಕಾಲದಿಂದಲೂ ವಸಂತ ಅವರ ತಂದೆ ಸಣ್ಣಪ್ಪ ಅವರೇ ಈ ಆನೆಯನ್ನು ಪೋಷಿಸಿದ್ದರು. ಮೂರನೇ ತಲೆಮಾರಿನಿಂದ ಆನೆಗಳ ಸೇವೆ ಯಲ್ಲಿರುವ ಈ ಕುಟುಂಬದಲ್ಲಿ ಅಭಿಮನ್ಯು ಮನೆಯ ಹಿರಿಯ ಮಗನಂತೆಯೇ ಬೆಳೆದಿದ್ದ. ಅಗಲಿದ ಅಂಬಿಕಾ ಕೂಡ ಅಭಿಮನ್ಯುವನ್ನು ಸ್ವಂತ ಮಗನಂತೆ ವಾತ್ಸಲ್ಯದಿಂದ ಕಾಣುತ್ತಿದ್ದರು.

**ಕರ್ತವ್ಯ ನಿಷ್ಠೆಗೆ ಹೆಸರಾದ ಮಾವುತ ವಸಂತ:** ತಮ್ಮ ಜೀವಿತಾವಧಿಯ ಬಹುಪಾಲು ಸಮಯವನ್ನು ಅಭಿಮನ್ಯುವಿನ ಆರೈಕೆ ಮತ್ತು ಕಾಡಾನೆ–ಹುಲಿ ಸೆರೆ ಕಾರ್ಯಾಚರಣೆಗಳಿಗೇ ಮುಡಿಪಾಗಿಟ್ಟಿರುವ ವಸಂತ ಅವರು ಅಪಾರ ತ್ಯಾಗಕ್ಕೆ ಹೆಸರಾದವರು. ಹಿಂದೆ ಕಾಡಾನೆ ಕಾರ್ಯಾಚರಣೆಯಲ್ಲಿದ್ದಾಗ ಮಗ ತೀರಿಕೊಂಡ ಹಾಗೂ ಮತ್ತೊಂದು ಸಂದರ್ಭದಲ್ಲಿ ತಾಯಿ ಮೃತಪಟ್ಟ ಸುದ್ದಿಯ ನಡುವೆಯೂ ಕರ್ತವ್ಯ ಮೊದಲೆಂದು ನಿಂತು ಕಾರ್ಯಾಚರಣೆ ಪೂರ್ಣಗೊಳಿಸಿದ್ದರು. ಇವರ ಈ ಅದ್ವಿತೀಯ ಸೇವೆ ಮತ್ತು ವನ್ಯಜೀವಿ ಸಂರಕ್ಷಣೆಯ ಕರ್ತವ್ಯ ನಿಷ್ಠೆಯನ್ನು ಗುರುತಿಸಿ ಸರ್ಕಾರ 'ಮುಖ್ಯಮಂತ್ರಿ ಪದಕ' ನೀಡಿ ಗೌರವಿಸಿದೆ.ಅಭಿಮನ್ಯುವಿನ ಪ್ರತಿ ಹೆಜ್ಜೆಯನ್ನೂ ಅರ್ಥಮಾಡಿಕೊಳ್ಳುವ ವಸಂತ ಅವರ ಕುಟುಂಬಕ್ಕೆ ಈಗ ಎದುರಾಗಿರುವ ಈ ವಿಯೋಗ ಅರಮನೆ ನಗರಿ ಹಾಗೂ ಅರಣ್ಯ ಇಲಾಖೆಯ ಸಿಬ್ಬಂದಿಯಲ್ಲಿ ತೀವ್ರ ನೋವುಂಟು ಮಾಡಿದೆ.

# ವಿವಿಧ ಸ್ಪರ್ಧೆಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಗಮನಾರ್ಹ ಸಾಧನೆಗೈದ ವಿದ್ಯಾರ್ಥಿಗಳು



ಬಳ್ಳಾರಿ ಅ 15: ಎನ್‌ಸಿಸಿ ವತಿಯಿಂದ ಆಯೋಜಿಸಲಾಗಿದ್ದ ಎಟಿಸಿ ಶಿಬಿರದಲ್ಲಿ ಬಳ್ಳಾರಿ ಇಂಡಿಪೆಂಡೆಂಟ್ ಪಿ.ಯು. ಕಾಲೇಜು ಹಾಗೂ ಶ್ರೀ ವಿಶ್ವೇಶ್ವರಯ್ಯ ಶಾಲೆಯ ಎನ್‌ಸಿಸಿ ಕೆಡೆಟ್‌ಗಳು ವಿವಿಧ ಸ್ಪರ್ಧೆಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಗಮನಾರ್ಹ ಸಾಧನೆ ಮಾಡಿದ್ದಾರೆ.

**ಬಳ್ಳಾರಿ ಇಂಡಿಪೆಂಡೆಂಟ್ ಪಿ.ಯು. ಕಾಲೇಜಿನ ಸಾಧನೆಗಳು:–**

ಕಾಲೇಜಿನ ಎನ್‌ಸಿಸಿ ಕೆಡೆಟ್‌ಗಳು ವಾಲಿಬಾಲ್ ಮತ್ತು ತ್ರೋಬಾಲ್ ಪಂದ್ಯಗಳಲ್ಲಿ ಪ್ರಥಮ ಸ್ಥಾನ ಪಡೆದು ವಿಜಯಿಗಳಾಗಿದ್ದಾರೆ. ಏಕವ್ಯಕ್ತಿ ಗಾಯನ ಸ್ಪರ್ಧೆಯಲ್ಲಿ ಕೆಡೆಟ್ ನಿಖಿತಾಶ್ರೀ ದ್ವಿತೀಯ ಸ್ಥಾನ, ಏಕವ್ಯಕ್ತಿ ನೃತ್ಯ ಸ್ಪರ್ಧೆಯಲ್ಲಿ ಕೆಡೆಟ್ ಎಂ. ಶ್ರೇಯಸ್ ಪ್ರಥಮ ಸ್ಥಾನ ಹಾಗೂ ಗುಂಪು ನೃತ್ಯ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಗಳಿಸಿದ್ದಾರೆ. ಅತ್ಯುತ್ತಮ ಕೆಡೆಟ್ ಪ್ರಶಸ್ತಿಗೆ ಸಾರ್ಜೆಂಟ್ ಬೊಪ್ಪಣ್ಣ ವರ್ಷಿಣಿ ಆಯ್ಕೆಯಾಗಿದ್ದಾರೆ.

**ಶ್ರೀ ವಿಶ್ವೇಶ್ವರಯ್ಯ ಶಾಲೆಯ ಸಾಧನೆಗಳು:–**

ಶಾಲೆಯ ಎನ್‌ಸಿಸಿ ಕೆಡೆಟ್‌ಗಳು ವಾಲಿಬಾಲ್ ಪಂದ್ಯದಲ್ಲಿ ರನ್ನರ್ಸ್–ಅಪ್ ಸ್ಥಾನ ಪಡೆದಿದ್ದಾರೆ. ಏಕವ್ಯಕ್ತಿ ಗಾಯನ ಸ್ಪರ್ಧೆಯಲ್ಲಿ ಕೆಡೆಟ್ ನಿರಜ್ ಪಿ.ಆರ್. ಪ್ರಥಮ ಸ್ಥಾನ, ಏಕವ್ಯಕ್ತಿ ನೃತ್ಯ ಸ್ಪರ್ಧೆಯಲ್ಲಿ ಕೆಡೆಟ್ ಜೀವನ್ ಎಸ್. ದ್ವಿತೀಯ ಸ್ಥಾನ ಹಾಗೂ ಬಾಲಕಿಯರ ಗುಂಪು ನೃತ್ಯ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ. ಧ್ವಜ ಪ್ರದೇಶದ ಸ್ಪರ್ಧೆಯಲ್ಲಿ ಶಾಲೆಯ ತಂಡ ತೃತೀಯ ಸ್ಥಾನ ಪಡೆದು ಸಂಸ್ಥೆಯ ಕೀರ್ತಿಯನ್ನು ಹೆಚ್ಚಿಸಿದೆ.

# ಸಾರ್ವಜನಿಕ ಸ್ಥಳದಲ್ಲಿ ಮದ್ಯ ಸೇವನೆಗೆ ಅವಕಾಶ ಅಬಕಾರಿ ಇಲಾಖೆಯಿಂದ 7 ಪ್ರಕರಣ ದಾಖಲು

ಶಿವಮೊಗ್ಗ, ಅ.15: ಸಾರ್ವಜನಿಕ ಸ್ಥಳಗಳಲ್ಲಿ ಅಕ್ರಮವಾಗಿ ಮದ್ಯ ಸೇವನೆ ಮಾಡಲು ಅವಕಾಶ ಮಾಡಿಕೊಡುತ್ತಿದ್ದ ಡಾಬಾ ಹಾಗೂ ಮಾಂಸಾಹಾರಿ ಹೋಟೆಲ್‌ಗಳ ಮೇಲೆ ಅಬಕಾರಿ ಇಲಾಖೆಯು ಸಾಮೂಹಿಕ ದಾಳಿ ನಡೆಸಿ, 7 ಪ್ರಕರಣಗಳನ್ನು ದಾಖಲಿಸಿಕೊಂಡಿದೆ. ಶಿವಮೊಗ್ಗ ಜಿಲ್ಲೆಯ ಅಬಕಾರಿ ಉಪ ಆಯುಕ್ತರಾದ ಡಾ. ಕೆ.ಎಸ್. ಮುರಳಿ ಅವರ ಮಾರ್ಗದರ್ಶನದಲ್ಲಿ, ಅಬಕಾರಿ ಉಪ ಅಧೀಕ್ಷಕರಾದ ನೌಷಾದ್ ಅಹಮ್ಮದ್ ಖಾನ್ ಎಚ್ (ಶಿವಮೊಗ್ಗ ಉಪ ವಿಭಾಗ) ಹಾಗೂ ಶೀಲಾ ಧಾರಜ್ಕರ್ (ಸಾಗರ ಉಪ ವಿಭಾಗ) ಅವರ ನೇತೃತ್ವದಲ್ಲಿ ಜಿಲ್ಲೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಈ ಜಂಟಿ ಕಾರ್ಯಾಚರಣೆ ನಡೆಸಿದ್ದಾರೆ.ಶಿವಮೊಗ್ಗ ಮತ್ತು ತೀರ್ಥಹಳ್ಳಿ ತಾಲೂಕಿನ ಗಾಜನೂರು, ಸಕ್ರೆಬೈಲು ಹಾಗೂ ಮಂಡಗದ್ದೆ ಗ್ರಾಮಗಳ ವ್ಯಾಪ್ತಿಯಲ್ಲಿರುವ ಡಾಬಾ ಮತ್ತು ಮಾಂಸಾಹಾರಿ ಹೋಟೆಲ್‌ಗಳ ಮೇಲೆ ಸಾಮೂಹಿಕ ದಾಳಿ ನಡೆಸಲಾಗಿದೆ. ಈ ವೇಳೆ ಗ್ರಾಹಕರಿಗೆ ಅಕ್ರಮವಾಗಿ ಮದ್ಯಪಾನ ಮಾಡಲು ಅವಕಾಶ ನೀಡಿದ್ದ ಹೋಟೆಲ್ ಹಾಗೂ ಡಾಬಾ ಮಾಲೀಕರ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ–1965 ರ ಕಲಂ–15(ಎ) ಮತ್ತು 32(3) ರ ಅಡಿಯಲ್ಲಿ ಒಟ್ಟು 07 ಮೊಕದ್ದಮೆಗಳನ್ನು ದಾಖಲಿಸಲಾಗಿದೆ.ಇನ್ನು ಮುಂದೆ ಯಾವುದೇ ಡಾಬಾ ಅಥವಾ ಮಾಂಸಾಹಾರಿ ಹೋಟೆಲ್‌ಗಳಲ್ಲಿ ಗ್ರಾಹಕರಿಗೆ ಅಕ್ರಮವಾಗಿ ಮದ್ಯ ಸೇವಿಸಲು ಅವಕಾಶ ನೀಡಬಾರದೆಂದು ಅಬಕಾರಿ ಇಲಾಖೆಯು ಮಾಲೀಕರಿಗೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದೆ ಎಂದು ಅಬಕಾರಿ ಉಪ ಆಯುಕ್ತ ಡಾ.ಕೆ.ಎಸ್.ಮುರಳಿ ತಿಳಿಸಿದ್ದಾರೆ.

ವಸತಿ ನಿಲಯಗಳ ನೋಂದಣಿಗೆ ಆನ್‌ಲೈನ್ ಅರ್ಜಿ ಆಹ್ವಾನ–ಶಿವಮೊಗ್ಗ ಜಿಲ್ಲೆಯಲ್ಲಿ 6 ರಿಂದ 18 ವರ್ಷದೊಳಗಿನ ಮಕ್ಕಳಿಗಾಗಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಸತಿ ನಿಲಯಗಳ ನೋಂದಣಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಅನ್ವಯಿಸುವ ವಸತಿ ನಿಲಯಗಳು: ಸರ್ಕಾರಿ, ಸರ್ಕಾರೇತರ, ನಾಗರಿಕ ಸಮಾಜ ಸಂಸ್ಥೆಗಳು, ಟ್ರಸ್ಟ್, ಧಾರ್ಮಿಕ, ಖಾಸಗಿ ಹಾಗೂ ವೈಯಕ್ತಿಕವಾಗಿ ನಡೆಸಲ್ಪಡುವ ಯಾವುದೇ ಔಪಚಾರಿಕ ಮತ್ತು ಅನೌಪಚಾರಿಕ ಶೈಕ್ಷಣಿಕ ವಸತಿ ನಿಲಯಗಳಿಗೆ (ಸ್ಟ್ಯಾಂಡ್–ಅಲೋನ್ ಹಾಸ್ಟೆಲ್‌ಗಳು, ಶಿಕ್ಷಣ ಸಂಸ್ಥೆಗಳ ವಸತಿ ನಿಲಯಗಳು ಮತ್ತು ವಸತಿ ಶಾಲೆಗಳು) ಈ ನಿಯಮ ಅನ್ವಯಿಸುತ್ತದೆ.

ಅಧಿಕೃತ ವೆಬ್‌ಸೈಟ್ https://shivamogga.nic.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಸಂಬಂಧಿತ ಕಚೇರಿಗಳು ಅರ್ಜಿ ನಮೂನೆಯನ್ನು ಭರ್ತಿ ಮಾಡಿ, ಮಾರ್ಗಸೂಚಿಯನ್ವಯ 31/10/2026 ರೊಳಗೆ ನೋಂದಣಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು.ಈ ಕುರಿತು ಹೆಚ್ಚಿನ ಮಾಹಿತಿಯನ್ನು ಪಡೆಯಲು ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿವಮೊಗ್ಗ ಇವರನ್ನು ಅಥವಾ ದೂರವಾಣಿ ಸಂಖ್ಯೆ 08182–295514 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಪ್ರಭುಲಿಂಗ ಕವಳಿಕಟ್ಟಿ ತಿಳಿಸಿದ್ದಾರೆ.

# ಮಾಸಿಕ 15 ಸಾವಿರ ಗೌರವಧನಕ್ಕೆ ಆಗ್ರಹಿಸಿ ಆಶಾ ಕಾರ್ಯಕರ್ತೆಯರ ಧರಣಿ

ಕಲಬುರಗಿ, ಅ. 15: ಮಾಸಿಕ 15 ಸಾವಿರ ಗೌರವಧನ ನಿಗದಿಪಡಿಸುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತರ ಸಂಘದ ಜಿಲ್ಲಾ ಘಟಕದಿಂದ ನಗರದಲ್ಲಿ ಧರಣಿ ನಡೆಸಲಾಯಿತು.



ನಗರದ ಜಗತ್ ವೃತ್ತದಲ್ಲಿ ಸುಡುಬಿಸಿಲಿನಲ್ಲಿ ಜಮಾಯಿಸಿದ ನೂರಾರು ಆಶಾ ಕಾರ್ಯಕರ್ತೆಯರು ಜಿಲ್ಲಾ ಪಂಚಾಯಿತಿ ಕಚೇರಿ ತನಕ ಪ್ರತಿಭಟನಾ ರ್‍ಯಾಲಿ ನಡೆಸಿದರು.

ಸಂಘದ ಜಿಲ್ಲಾಧ್ಯಕ್ಷೆ ಶಿವಲಿಂಗಮ್ಮ ನಂದೂರ ಮಾತನಾಡಿ, ಮೂರ್ನಾಲ್ಕು ವರ್ಷಗಳಿಂದ ಕನಿಷ್ಠ ವೇತನ ನೀಡಬೇಕೆಂಬ ನಮ್ಮ ಬೇಡಿಕೆಯನ್ನು ಸರ್ಕಾರ ಈಡೇರಿಸಿಲ್ಲ. 10 ಸಾವಿರ ಗೌರವ ಧನ ನೀಡುವುದಾಗಿ ಕೊಟ್ಟಿದ್ದ ಭರವಸೆಯನ್ನೂ ಸಾಕಾರಗೊಳಿಸಿಲ್ಲ. ಮೊಬೈಲ್ ಫೋನ್ ಕೊಡದೇ ಬರೀ ಸಿಮ್ ಕಾರ್ಡ್ ಕೊಟ್ಟು, ಹತ್ತಾರು ಆಯಪ್ ಆಧಾರಿತ ಕೆಲಸಗಳನ್ನು ನಮ್ಮಿಂದ ಮಾಡಿಸುತ್ತಿದೆ. ಕೊಡುತ್ತಿರುವ ಗೌರವಧನವೂ ಪ್ರತಿ ತಿಂಗಳೂ ಬರುತ್ತಿಲ್ಲ. ಮೂರ್ನಾಲ್ಕು ತಿಂಗಳಿಗೊಮ್ಮೆ ಜಮೆಯಾಗುತ್ತಿದೆ. ಕೆಲವು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಡಾಟಾ ಎಂಟ್ರಿ ಆಪರೇಟರ್‌ಗಳಿಲ್ಲ. ಇದರಿಂದ ಆಶಾಗಳು ಮಾಡುವ ಕೆಲಸ ನಿಗದಿತವಾಗಿ ದಾಖಲಾಗದೇ ಅವರಿಗೆ ಬರುವ ಪ್ರೋತ್ಸಾಹಧನದ ಮೇಲೆ ಹೊಡೆತ ಬೀಳುತ್ತಿದೆ. ಇದೆಲ್ಲವನ್ನೂ ಸರ್ಕಾರ ಸರಿಪಡಿಸಬೇಕು ಎಂದು ಆಗ್ರಹಿಸಿದರು.

ಆಶಾಗಳಿಗೆ ಕ್ಷಯ ರೋಗಿಗಳ ಪರೀಕ್ಷಾ ಕೆಲಸ ವಹಿಸಿದೆ. ನಾವೆಲ್ಲ ರೋಗಿಗಳ ಕಫ್ ಸಂಗ್ರಹಿಸಿ ಕೈಯಲ್ಲೇ ಆಸ್ಪತ್ರೆಗಳಿಗೆ ಒಯ್ಯುವಂಥ ಸ್ಥಿತಿಯಿದೆ. ಇದನ್ನು ಸರ್ಕಾರ ಕೂಡಲೇ ನಿಲ್ಲಿಸಬೇಕು ಎಂದು ಅವರು ಒತ್ತಾಯಿಸಿದರು.

ಸಂಘದ ಜಿಲ್ಲಾ ಗೌರವಾಧ್ಯಕ್ಷ ವಿ.ಜಿ.ದೇಸಾಯಿ ಮಾತನಾಡಿ, ಆಶಾ ಕಾರ್ಯಕರ್ತೆಯರು ಕಳೆದ 15 ವರ್ಷಗಳಿಂದ ದುಡಿಯುತ್ತಿದ್ದಾರೆ. ಆಶಾಗಳಿಗೆ 30 ಬಗೆಯ ಕೆಲಸ ನೀಡಲಾಗುತ್ತಿದೆ. ಆದರೆ, ಅವರಿಗೆ ಬರೀ 5 ಸಾವಿರ ಗೌರವಧನ ಕೊಡಲಾಗುತ್ತಿದೆ. ಕೇರಳ, ಮಹಾರಾಷ್ಟ್ರ, ಪಶ್ಚಿಮ ಬಂಗಾಳ, ಹರಿಯಾಣ, ದೆಹಲಿ ರಾಜ್ಯಗಳಲ್ಲಿ ಆಶಾಗಳಿಗೆ ಮಾಸಿಕ 15 ಸಾವಿರಕ್ಕೂ ಹೆಚ್ಚು ಗೌರವ ಧನ ನೀಡಲಾಗುತ್ತಿದೆ. ಅದರಂತೆ ರಾಜ್ಯದಲ್ಲೂ ಆಶಾ ಕಾರ್ಯಕರ್ತೆಯರಿಗೆ ಪ್ರೋತ್ಸಾಹ ಧನವೂ ಸೇರಿದಂತೆ ಮಾಸಿಕ ಕನಿಷ್ಠ 15 ಸಾವಿರ ಗೌರವಧನ ವಿತರಿಸಬೇಕು' ಎಂದು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ಗೀತಾ ಬಡಿಗೇರ, ಎಐಯುಟಿಯುಸಿ ಜಿಲ್ಲಾ ಕಾರ್ಯದರ್ಶಿ ಎಸ್.ಎಂ.ಶರ್ಮಾ, ಪ್ರಮುಖರಾದ ತಾಯಮ್ಮ ನರಿಬೋಳ, ಸಂಗೀತಾ ನಾಯಿಕೊಡಿ, ಭಾಗ್ಯಜ್ಯೋತಿ, ಯಲಮ್ಮ ಚಿತ್ತಾಪುರ, ಲಕ್ಷ್ಮಿ ಜೇರಟಗಿ ಸೇರಿದಂತೆ ನೂರಾರು ಆಶಾ ಕಾರ್ಯಕರ್ತೆಯರು ಪಾಲ್ಗೊಂಡಿದ್ದರು.

ವಿ.ಜಿ.ದೇಸಾಯಿ, ಜಿಲ್ಲಾ ಗೌರವಾಧ್ಯಕ್ಷ, ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತರ ಸಂಘಆಶಾ ಕಾರ್ಯಕರ್ತೆಯರಿಗೆ ಸರ್ಕಾರ ಆಯಪ್ ಆಧಾರಿತ ಕೆಲಸಗಳಿಗಾಗಿ ಪ್ರತ್ಯೇಕ ಮೊಬೈಲ್‌ಫೋನ್, ಸಿಮ್ ಕಾರ್ಡ್ ಕೊಡಬೇಕು. ಇಲ್ಲದಿದ್ದರೆ ಇಂಥ ಕೆಲಸ ನೀಡಬಾರದು.

# ಸಕಾಲಕ್ಕೆ ಪಡಿತರ ಧಾನ್ಯ ವಿತರಣೆಗೆ ಒತ್ತಾಯಿಸಿ ಪ್ರತಿಭಟನೆ



ಬೀದರ್, ಅ. 15: ಸಕಾಲಕ್ಕೆ ಪಡಿತರ ಆಹಾರ ಧಾನ್ಯ ವಿತರಿಸಲು ಒತ್ತಾಯಿಸಿ ಬೀದರ್ ತಾಲ್ಲೂಕಿನ ಕಾಡವಾದ ಗ್ರಾಮದ ಪಡಿತರ ಚೀಟಿದಾರರು ಗ್ರಾಮದ ಬೀದರ್–ಮನ್ನಾಎಖ್ಖೆಳ್ಳಿ ಮುಖ್ಯರಸ್ತೆಯಲ್ಲಿ ರಸ್ತೆ ಸಂಚಾರ ತಡೆ ಚಳವಳಿ ನಡೆಸಿದರು.ರಸ್ತೆ ಬದಿಯಲ್ಲಿ ಧರಣಿ ಕೂಡ ಮಾಡಿ ಆಡಳಿತದ ಗಮನ ಸೆಳೆಯಲು ಪ್ರಯತ್ನಿಸಿದರು.

ಗ್ರಾಮದ ನ್ಯಾಯಬೆಲೆ ಅಂಗಡಿಯ ಪಡಿತರ ವಿತರಕರು ಸರಿಯಾದ ಸಮಯಕ್ಕೆ ಆಹಾರ ಧಾನ್ಯ ವಿತರಿಸುತ್ತಿಲ್ಲ. ಪಡಿತರ ಚೀಟಿದಾರರೊಂದಿಗೆ ಅನುಚಿತವಾಗಿ ವರ್ತಿಸುತ್ತಿದ್ದಾರೆ. ಪ್ರತಿ ತಿಂಗಳು ಬೆರಳಚ್ಚು ನೀಡಲು ಮೂರು–ನಾಲ್ಕು ದಿನ ಸರದಿ ಸಾಲಿನಲ್ಲಿ ನಿಲ್ಲಬೇಕಾಗಿದೆ ಎಂದು ಅಳಲು ತೋಡಿಕೊಂಡರು.

ನ್ಯಾಯ ಬೆಲೆ ಅಂಗಡಿ ವಿತರಕರ ಪರವಾನಗಿ ರದ್ದುಪಡಿಸಬೇಕು. ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಪಡಿತರ ವಿತರಣೆ ಪರವಾನಗಿ ಕೊಡಬೇಕು ಎಂದು ಬೇಡಿಕೆ ಮಂಡಿಸಿದರು.

ಸ್ಥಳಕ್ಕೆ ಭೇಟಿ ನೀಡಿದ ಆಹಾರ ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕರು ಪಡಿತರ ಚೀಟಿದಾರರ ಅಳಲು ಆಲಿಸಿದರು.

ಪಡಿತರ ವಿತರಕರ ಕುರಿತು ನೀಡಿದ ದೂರಿನ ಬಗ್ಗೆ ಈಗಾಗಲೇ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ. ವರದಿ ಬಂದ ನಂತರ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು. ಪಡಿತರ ವಿರತಣೆಗೆ ಶೀಘ್ರ ಪರ್ಯಾಯ ವ್ಯವಸ್ಥೆ ಮಾಡಲಾಗುವುದು ಎಂದು ಭರವಸೆ ನೀಡಿದರು.

# ಸರ್ಕಾರದ ವೈಫಲ್ಯ ಮುಚ್ಚಿಕೊಳ್ಳಲು ಸ್ಟಿಂಗ್ ಆಪರೇಶನ್ ಅಸ್ತ್ರ ಬಳಕೆ: ಸಿ.ಟಿ.ರವಿ



ಕಲಬುರಗಿ, ಅ. 15: ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ಮೂಲಕ ಅಧಿಕಾರಕ್ಕೆ ಬಂದಿದ್ದು, ಇದೀಗ ಸರ್ಕಾರದಲ್ಲಿ ಹಗರಣಗಳೇ ಗ್ಯಾರಂಟಿಯಾಗಿವೆ ಹಾಗೂ ಬೆಲೆ ಏರಿಕೆಯೂ ಗ್ಯಾರಂಟಿಯಾಗಿದೆ ಬಸ್, ಮೆಟ್ರೋ, ಹಾಲಿನ ದರ, ವಿದ್ಯುತ್ ಇವೆಲ್ಲ ವರ್ಷದಲ್ಲಿ ಒಂದೆರಡು ಬರಿ ಏರುತ್ತಲೇ ಇವೆ. ಇಂಥ ಪರಿಸ್ಥಿತಿಯಲ್ಲಿ ಗ್ಯಾರಂಟಿ ಯಾವ ಸಂಭ್ರಮಕ್ಕೆ? ಯಾರಾದರೂ ಇವರನ್ನು ಉಚಿತ ಕೊಡಿ ಎಂದು ಕೇಳಿದ್ರಾ? ತಮ್ಮ ಅಧಿಕಾರದ ತೆವಲಿಗೆ ಘೋಷಣೆ ಮಾಡಿ ಇದೀಗ ಜನರ ತಲೆಯ ಮೇಲೆ ಭಾರ ಹೇರುತ್ತಿದ್ದಾರೆ ಎಂದು ಬಿಜೆಪಿ ಮುಖಂಡ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಟೀಕಿಸಿದರು.

ಸುದ್ದಿ ಗೋಷ್ಠಿಯಲ್ಲಿ, ಸರ್ಕಾರದ ವೈಫಲ್ಯ ಹಾಗೂ ನೈಜ ಸಮಸ್ಯೆಗಳಿಂದ ಜನರ ಗಮನ ಬೇರೆಡೆ ಸೆಳೆಯಲು ಸ್ಟಿಂಗ್ ಆಪರೇಷನ್ ವಿಚಾರವನ್ನು ಮುನ್ನೆಲೆಗೆ ತರಲಾಗುತ್ತಿದೆ. ಜನರ ಸಮಸ್ಯೆಗಳ ಕುರಿತು ಚರ್ಚೆಯಾಗ ಬೇಕಾದ ಸಂದರ್ಭದಲ್ಲಿ ವಿವಾದಗಳನ್ನು ಸೃಷ್ಟಿಸಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಸ್ಟಿಂಗ್ ಆಪರೇಷನ್ ವಿಚಾರವಾಗಿ ಮುಖ್ಯಮಂತ್ರಿ ಹಾಗೂ ಗೃಹ ಸಚಿವರು ಸ್ಪಷ್ಟವಾಗಿ ಏಕೆ ಮಾತನಾಡುತ್ತಿಲ್ಲ ಎಂದು ಪ್ರಶ್ನಿಸಿದ ಸಿ.ಟಿ. ರವಿ, ಈ ಪ್ರಕರಣದ ಹಿಂದೆ ಯಾರಿದ್ದಾರೆ, ಯಾರು ಏನು ಮಾಡ್ತಿದ್ದಾರೆ ಎಂಬುದರ ಕುರಿತು ಸಮಗ್ರ ತನಿಖೆ ನಡೆಸಿ ಸತ್ಯಾಂಶವನ್ನು ಬಹಿರಂಗಪಡಿಸ ಬೇಕು. ಈ ವಿಚಾರದಲ್ಲಿ ಕಾಂಗ್ರೆಸ್ ನಾಯಕರ ಪಾತ್ರದ ಕುರಿತು ತನಿಖೆ ನಡೆದರೆ ಹಲವು ಸಂಗತಿಗಳು ಹೊರಬರಬಹುದು ಎಂದು ಅವರು ಅಭಿಪ್ರಾಯಪಟ್ಟರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ಪಕ್ಷ ಕಡೆಗಣಿಸುತ್ತಿದೆ ಎಂದು ಆರೋಪಿಸಿದ ಅವರು, ಕಲಬುರಗಿಯಲ್ಲಿ ಸ್ಥಾಪಿಸಲಾಗಿರುವ ಸಿದ್ದರಾಮಯ್ಯ ಅವರ ಪ್ರತಿಮೆಯನ್ನು ಸರ್ಕಾರ ತೆರವುಗೊಳಿಸಿರುವ ವಿಚಾರವನ್ನು ಪ್ರಸ್ತಾಪಿಸಿ, ಈ ಬಗ್ಗೆ ಕಾಂಗ್ರೆಸ್ ಪಕ್ಷದ ನಿಲುವನ್ನು ಪ್ರಶ್ನಿಸಿದರು. ಒಂದು ವೇಳೆ ಕಾಂಗ್ರೆಸ್ ಬಿಜೆಪಿ ಸರ್ಕಾರದ ಅವಧಿಯಲ್ಲಿ ಇಂಥ ಘಟನೆ ನಡೆಸಿದ್ದರೆ ಪ್ರಿಯಂಕ್ ಖರ್ಗೆ ಅವರ ಪ್ರತಿಕ್ರಿಯೆ ಹೇಗಿರುತ್ತಿತ್ತು? ರಾಜ್ಯದಲ್ಲಿ ಮತಗಳ್ಳತನ ನಡೆದಿದೆ ಎಂಬ ಕಾಂಗ್ರೆಸ್ ನಾಯಕರ ಆರೋಪದ ಬಗ್ಗೆಯೂ ಪ್ರತಿಕ್ರಿಯಿಸಿದ ಅವರು, ನಿಜವಾಗಿಯೂ ಮತಗಳ್ಳತನ ನಡೆದಿದ್ದರೆ ಕಲಬುರಗಿಯಲ್ಲಿ ಬಿಜೆಪಿ ಅಭ್ಯರ್ಥಿಗಳು ಹೇಗೆ ಸೋಲುತ್ತಿದ್ದರು ಎಂದು ಪ್ರಶ್ನಿಸಿದ ಅವರು, ಬಿಜೆಪಿ ವಿರುದ್ಧ ಕಾಂಗ್ರೆಸ್ ನಾಯಕರು ಆಧಾರರಹಿತ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಟೀಕಿಸಿದರು. ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಸರಿಯಾಗಿ ನಡೆಯುತ್ತಿದೆ. ಮತದಾರರ ಪಟ್ಟಿಯಲ್ಲಿ ಹೆಸರುಗಳ ಪರಿಶೀಲನೆ ನಡೆಯುವಾಗ ಅಕ್ರಮಗಳ ಕುರಿತು ಸೂಕ್ತ ಕ್ರಮ ಕೈಗೊಳ್ಳಬೇಕು ಎಂಬ ನಿಲುವನ್ನು ವ್ಯಕ್ತಪಡಿಸಿದರು.

ಕಾಂಗ್ರೆಸ್ ದೇಶದ ಹಲವು ರಾಜ್ಯಗಳಲ್ಲಿ ಅಧಿಕಾರದಲ್ಲಿದೆ ಎಂದು ಉಲ್ಲೇಖಿಸಿದ ಅವರು, ಚುನಾವಣಾ ಆಯೋಗದ ಮೇಲೆ ನಂಬಿಕೆ ಇಲ್ಲವೆಂದಾದರೆ ಮೊದಲು ಆ ರಾಜ್ಯಗಳಲ್ಲಿನ ಅಧಿಕಾರಕ್ಕೆ ರಾಜೀನಾಮೆ ನೀಡಿ, ನಂತರ ಚುನಾವಣಾ ಆಯೋಗದ ವಿರುದ್ಧ ಮಾತನಾಡಲಿ ಎಂದು ಸವಾಲು ಹಾಕಿದರು. ಇವಿಎಂ ಸರಿಯಿಲ್ಲ ಎಂದು ಆರೋಪಿಸುವವರು ತಮ್ಮ ಗೆಲುವು ಕೂಡ ಅಕ್ರಮದಿಂದಲೇ ಬಂದಿದೆ ಎಂದು ಮೊದಲು ಒಪ್ಪಿಕೊಂಡು ರಾಜೀನಾಮೆ ನೀಡಲಿ. ಸಾಂವಿಧಾನಿಕ ಸಂಸ್ಥೆಗಳ ಮೇಲೆ ನಂಬಿಕೆ ಇಲ್ಲದಿರುವುದು ಸಂವಿಧಾನದ ಮೇಲಿನ ನಂಬಿಕೆಯ ಬಗ್ಗೆಯೂ ಪ್ರಶ್ನೆಗಳನ್ನು ಹುಟ್ಟು ಹಾಕುತ್ತದೆ. ತಮ್ಮ ರಾಜಕೀಯ ಲಾಭಕ್ಕಾಗಿ ಸಾಂವಿಧಾನಿಕ ಸಂಸ್ಥೆಗಳನ್ನು ದುರ್ಬಲಗೊಳಿಸುವ ಪ್ರಯತ್ನ ಮಾಡಬಾರದು ಎಂದು ಕಾಂಗ್ರೆಸ್ ನಾಯಕರಿಗೆ ಸಲಹೆ ನೀಡಿದರು.



ಶ್ರೀರಂಗಪಟ್ಟಣ ದಸರಾ ಪ್ರಯುಕ್ತ ಗುರುವಾರ ನಡೆದ ಜಂಬೂಸವಾರಿ ಜನಮನ ಸೆಳೆಯಿತು

## ಕಳಪೆ ಹಾಲು ಸಂಗ್ರಹ ಮಾಡುವ ಖಾಸಗಿ ಡೈರಿಗಳ ವಿರುದ್ಧ ಕ್ರಮಕ್ಕೆ ಆರ್.ಕೆ.ಪಾಟೀಲ್ ಮನವಿ



**ಬೀದರ್, ಅ. 15:** ನಿಗದಿತ ಮಾನದಂಡಗಳನ್ನು ಪಾಲಿಸದೆ ಗುಣ ಮಟ್ಟವಿಲ್ಲದ ಹಾಲು ಶೇಖರಿಸಿ, ಸಂಸ್ಕರಿಸಿ ಮಾರುಕಟ್ಟೆಗೆ ಬಿಡುಗಡೆ ಮಾಡುತ್ತಿರುವ ಖಾಸಗಿ ಹಾಲಿನ ಡೇರಿಗಳ ವಿರುದ್ಧ ತಪಾಸಣೆ ನಡೆಸಿ, ನಿಯಮಾನುಸಾರ ಕಾನೂನು ಕ್ರಮ ಕೈಗೊಳ್ಳುವಂತೆ ಕಲಬುರಗಿ, ಬೀದರ್ ಹಾಗೂ ಯಾದಗಿರಿ ಹಾಲು ಒಕ್ಕೂಟದ ಅಧ್ಯಕ್ಷ ಆರ್.ಕೆ.ಪಾಟೀಲ್ ಆಗ್ರಹಿಸಿದರು.

ನಗರದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರನ್ನು ಭೇಟಿ ಮಾಡಿ ಈ ಕುರಿತು ಮನವಿ ಸಲ್ಲಿಸಿದ ಅವರು, ನಾವು ನಂದಿನಿ ಡೈರಿಯ ವತಿಯಿಂದ ಕಷ್ಟಪಟ್ಟು ದುಡಿಯುತ್ತಿದ್ದೇವೆ. ಜನರಿಗೆ ಶುದ್ಧವಾದ ಆರೋಗ್ಯಕರವಾದ ಹಾಲು ಮತ್ತುಜ ಇತರ ಉತ್ಪನ್ನಗಳನ್ನು ನೀಡಲು ಶ್ರಮಿಸುತ್ತಿದ್ದೇವೆ. ಆದರೆ ಕೆಲವು ಖಾಸಗಿ ಸಂಸ್ಥೆಗಳವರು ಗುಣಮಟ್ಟವಿಲ್ಲದ ಹಾಲು ಸಂಗ್ರಹಿಸಿ ಅಗ್ಗ ದರದಲ್ಲಿ ಜನರಿಗೆ ಮಾರುವ ಮೂಲಕ ಮೋಸ ಮಾಡುತ್ತಿದ್ದಾರೆ. ಮತ್ತು ಇಂಥ ಹಾಲು ಸೇವನೆಯಿಂದ ಜನಾರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ಈ ಯಾವುದೇ ಜವಾಬ್ದಾರಿಗಳಿಲ್ಲದೇ ಕಳಪೆ ಹಾಲು ಮಾರಾಟ ಮಾಡುವವರ ವಿರುದ್ಧ ಕ್ರಮ ಕೈಕೊಳ್ಳುವಂತೆ ಮನವಿ ಮಾಡಿದರು.

ಈ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಖಾಸಗಿ ಹಾಲಿನ ಡೈರಿಗಳ ಗುಣಮಟ್ಟದ ಕುರಿತು ಪರಿಶೀಲನೆ ನಡೆಸುವ ಅಗತ್ಯವಿದೆ. ನಿಗದಿತ ಗುಣಮಟ್ಟದ ಮಾನದಂಡಗಳನ್ನು ಪಾಲಿಸದೆ ಹಾಲು ಶೇಖರಣೆ ಮತ್ತು ಸಂಸ್ಕರಣೆ ಮಾಡುವ ಡೇರಿಗಳನ್ನು ಗುರುತಿಸಿ, ಅವುಗಳ ವಿರುದ್ಧ ಸೂಕ್ತ ಕ್ರಮ ಜರುಗಿಸಬೇಕು. ಇಂತಹ ಹಾಲು ಮಾರುಕಟ್ಟೆಗೆ ಬಿಡುಗಡೆಯಾಗುವುದನ್ನು ತಡೆಯಲು ಸಂಬಂಧಪಟ್ಟ ಅಧಿಕಾರಿಗಳು ನಿಯಮಿತ ತಪಾಸಣೆ ನಡೆಸಬೇಕು ಎಂದು ಮನವಿ ಮಾಡಿದರು.

## ಚಂದ್ರನಲ್ಲಿ ನೀರು ಪತ್ತೆ- ಇದು ಭಾರತದ ಛಲದ ಪ್ರತೀಕ: ರಾಮನಗೌಡ ನಾಡಗೌಡ

**ಬಸವಕಲ್ಯಾಣ, ಅ. 15:** ಇತರೆ ದೇಶದವರು ಮೊದಲಿನಿಂದಲೂ ಪ್ರಯತ್ನಿಸಿದ್ದರೂ ಭಾರತದವರು ಮಾತ್ರ ಚಂದ್ರನಲ್ಲಿ ನೀರಿದೆ ಎಂದು ಪ್ರಥಮವಾಗಿ ಪತ್ತೆ ಹಚ್ಚಿದರು. ಇದು ನಮ್ಮವರ ಛಲದ ಪ್ರತೀಕ ಎಂದು ಯುವ ವೈಜ್ಞಾನಿಕ ಸಮಾವೇಶದಲ್ಲಿ ಯು.ಆರ್.ರಾವ್. ಉಪಗ್ರಹ ಕೇಂದ್ರದ ನಿವೃತ್ತ ಸಹಾಯಕ ನಿರ್ದೇಶಕ ರಾಮನಗೌಡ ನಾಡಗೌಡ ಹೇಳಿದರು.

ಯುವಕರು ಸಂಶೋಧನಾತ್ಮಕ ದೃಷ್ಟಿ ಬೆಳೆಸಿಕೊಳ್ಳಬೇಕು ಎಂದರು.

ಬೀದರ್ ಪಶುವೈದ್ಯಕೀಯ ವಿಶ್ವವಿದ್ಯಾಲಯದ ಕುಲಪತಿ ಡಾ.ಸಿ.ವೀರಣ್ಣ ಮಾತನಾಡಿ, ವಚನಗಳು ವೈಚಾರಿಕತೆ, ವೈಜ್ಞಾನಿಕ ನೆಲೆಗಟ್ಟನ್ನು ಹೊಂದಿವೆ. ಆದ್ದರಿಂದ ಇವು ಎಲ್ಲರಿಗೂ ಪ್ರಸ್ತುತವಾಗಿವೆ ಎಂದರು. ಹೈದರಾಬಾದ್ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ




ನಗರದ ಶರಣ ಹರಳಯ್ಯ ಗವಿಯಲ್ಲಿ ಅಂತರರಾಷ್ಟ್ರೀಯ ಲಿಂಗಾಯತ ಧರ್ಮ ಕೇಂದ್ರ ಮತ್ತು ಅಖಿಲ ಭಾರತ ಲಿಂಗವಂತ ಹರಳಯ್ಯ ಪೀಠದಿಂದ ನಡೆದ ನಾಲ್ಕನೇ ದಿನದ ಶರಣ ವಿಜಯೋತ್ಸವದ ಯುವ ವೈಜ್ಞಾನಿಕ ಸಮಾವೇಶ ಮತ್ತು ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸತತ ಪ್ರಯತ್ನ ಮತ್ತು ಸಾಧಿಸುವ ಮನಸ್ಸು, ಆತ್ಮವಿಶ್ವಾಸ ಬೇಕು. ಇಸ್ರೋ ಬಾಹ್ಯಾಕಾಶ ಸಂಸ್ಥೆ ವಿವಿಧ ಸಂಶೋಧನೆಗಳನ್ನು ಮಾಡಿ ರಾಷ್ಟ್ರದ ಶಕ್ತಿ ಹೆಚ್ಚಿಸಿದೆ.

ಸಂಸ್ಥೆ ವಿಜ್ಞಾನಿ ತೇಜಸ್ವಿ, ಹರಳಯ್ಯ ಪೀಠಾಧ್ಯಕ್ಷೆ ಅಕ್ಕ ಗಂಗಾಂಬಿಕಾ, ಆಕಾಶ ಖಂಡಾಳೆ, ಅಂಬರೀಶ ಭೀಮಾಣೆ ಮಾತನಾಡಿದರು.

ರಾಮನಗೌಡ ನಾಡಗೌಡ ಮತ್ತು ತೇಜಸ್ವಿ ಅವರಿಗೆ 'ಶರಣ ನಾಯಕ ಪ್ರಶಸ್ತಿ' ಪ್ರದಾನ ಮಾಡಲಾಯಿತು. ಡಾ.ಅಮರನಾಥ ಸೋಲಪುರೆ, ಸಿ.ಎಸ್.ರಗಟೆ, ಬಸವರಾಜ ಯವಲೆ, ರಾಷ್ಟ್ರೀಯ ಬಸವದಳದ ಅಧ್ಯಕ್ಷ ರವೀಂದ್ರ ಕೊಳಕೂರ, ಶಿವಕುಮಾರ ಬಿರಾದಾರ ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ವಿಜ್ಞಾನಿಗಳೊಂದಿಗೆ ಸಂವಾದ ನಡೆಸಿದರು.

## ಖರಾಬ್ ಹಾಡು ನೃತ್ಯ ಸಂಯೋಜನೆಯಲ್ಲಿ ಜೆನ್‌ಜಿ ಸಂಭ್ರಮ



**ಕಲಬರಗಿ, ಅ.15–** ಯುವಕರು ಸಾಂಸ್ಕೃತಿಕ ಲೋಕದತ್ತ ಮುಖ ಮಾಡಿ ಹೆಜ್ಜೆಹಾಕುತ್ತಿರುವುದು ಶ್ಲಾಘನೀಯವಾಗಿದ್ದು ನಮ್ಮ ಭಾಗದ ಪ್ರತಿಭಾ ಲೋಕ ತೆರೆದುಕೊಳ್ಳಲು ಅವಕಾಶ ಸಿಕ್ಕಂತಾಗಿದೆ ಎಂದು ಯುವ ಮುಖಂಡರಾದ ನಿತಿನ್ ಗುತ್ತೇದಾರ್ ಹೇಳಿದರು.

ಕಲಬುರಗಿಯ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಗುರುವಾರ ಅಫಜಲ್ಪುರದ ಯುವ ಕಲಾವಿದ ಕೆ.ಡಿ ದಾದಾ ಅವರು ಹಾಡಿ, ಅಭಿನಯಿಸಿದ ಪಾಶ್ಚಾತ್ಯ ಸಂಗೀತದಲ್ಲಿರುವ ರಾಪ್ ಸಂಗೀತದ ಕನ್ನಡ ಹಾಡನ್ನು ಯು ಟ್ಯೂಬ್ ಗೆ ಲೋಕಾರ್ಪಣೆ ಮಾಡಿ ಮಾತನಾಡಿ ಜೆನ್ ಜಿಗಳು (ಯುವಕರು) ಇವತ್ತು ತುಂಬಾ ಸುದ್ದಿಯಲ್ಲಿದ್ದು ನಮ್ಮ ಭಾಗದ ಯುವಕರ ತಂಡ ಒಟ್ಟಾಗಿ ಸಂಗೀತ ಲೋಕದಲ್ಲಿ ಇಂತಹ ದೊಡ್ಡ ಸಾಧನೆ ಮಾಡಿ ಅಫ್ಜಲ್ಪುರ ತಾಲೂಕು ಹಾಗೂ ಕಲಬುರಗಿಯ ಹೆಸರನ್ನು ಮುಂಚೂಣಿಗೆ ತರುತ್ತಿರುವುದು ಖುಷಿಯ ಸಂಗತಿಯಾಗಿದೆ.

ಪ್ರಸ್ತುತ ಯುವಕರ ಹಾಡು, ರೀಲ್ಸ್, ಇನ್ಸ್ಟಾಗ್ರಾಮ್ ಹೆಚ್ಚೆಚ್ಚು ವೀಕ್ಷಕರನ್ನು ತಲಪತ್ತಿದ್ದು ಸದಭಿರುಚಿಯ ವಿಚಾರಗಳು ಹೆಚ್ಚು ಜನರನ್ನು ಆಕರ್ಷಿಸುತ್ತದೆ ಮತ್ತು ಅಪಾರ ವೀಕ್ಷಕರನ್ನು ಸೆಳೆದು ಕೊಳ್ಳುತ್ತಿರುವುದರಿಂದ ಯುವಕರ ಜೊತೆ ಕೈ ಜೋಡಿಸಿದ ನಮಗೂ ಸಹಜವಾಗಿ ಖ್ಯಾತಿ ತಾನಾಗಿ ಬರುತ್ತದೆ ಎಂದು ಹೇಳಿದರು.

**ಸಿನಿಮಾದಲ್ಲೂ ಈ ಭಾಗದ ಯುವಕರಿಗೆ ಅವಕಾಶ ಸಿಗಲಿ: ಡಾ. ಪೆರ್ಲ:**

ಮುಖ್ಯಅತಿಥಿಗಳಾಗಿ ಭಾಗ ವಹಿಸಿದ್ದ ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥ ಡಾ. ಸದಾನಂದ ಪೆರ್ಲ ಮಾತನಾಡಿ, ಈ ಭಾಗದ ಯುವಕರು ಕೀಳರಿಮೆ ಬಿಟ್ಟು ಪ್ರತಿಭಾ ಪ್ರದರ್ಶನಕ್ಕೆ ಮುಂದಾಗಬೇಕು. ಕಲ್ಯಾಣ ಕರ್ನಾಟಕದ ಗಾಯಕರು, ಕಲಾವಿದರು, ತಂತ್ರಜ್ಞರು ಸೇರಿದಂತೆ ಪ್ರತಿಭಾ ಸಂಪನ್ನತೆಯನ್ನು ಹೊಂದಿದವರಿಗೆ ಸ್ಯಾಂಡಲ್ ವುಡ್ ಕನ್ನಡ ಸಿನಿಮಾದಲ್ಲೂ ಅವಕಾಶ ಸಿಗುವಂತಾಗಬೇಕು. ಸಾಂಸ್ಕೃತಿಕ ಲೋಕ ಕಟ್ಟುವ ಕಡೆಗೆ ಕಲಾವಿದ ಕೆ.ಡಿ ದಾದಾ ಅವರ ಪ್ರಯತ್ನ ಎಲ್ಲರಿಗೂ ಮಾದರಿಯಾಗಲಿ.ಈ ಭಾಗದ ಯುವಶಕ್ತಿ ಎಲ್ಲ ರಂಗಗಳಲ್ಲೂ ಮುನ್ನ ಲೆಗೆ ಬರಬೇಕು ಎಂದು ಸಲಹೆ ನೀಡಿದರು.

ಕಲಾವಿದ ಕೆ.ಡಿ ದಾದಾ ಅವರ ಹಾಡು ಮತ್ತು ಅಭಿನಯದ ಖರಾಬ್ ವಿಡಿಯೋ ನಿರ್ಮಾಣ ತಂಡದ ಮುಖ್ಯಸ್ಥರಾದ ಅಂಬಿಕಾ, ಛಾಯಾ ಗ್ರಹಣದ ಎಂ.ಜೆ ಪ್ರಜ್ವಲ್, ಡಿಟೋನ್ ಸಂಗೀತ ಬಳಗದ ಸದಸ್ಯರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ರಾಜು ಭಾರತಿ ಮತ್ತು ಪತ್ರಕರ್ತ ವಿಜಯಕುಮಾರ್ ಸಾಲಿಮಠ್ ಈ ಸಂದರ್ಭದಲ್ಲಿ ಮಾತನಾಡಿದರು. ಯುವಕರು ವಿಡಿಯೋ ಬಿಡುಗಡೆ ವೇಳೆ ಕುಣಿದು ಸಂಭ್ರಮಿಸಿದರು. ಕಾರ್ಯಕ್ರಮದಲ್ಲಿ ಬಾಬುರಾವ್ ಕೋಬಾಳ, ಕಿಶನ್ ಸಿಂಗ್, ದಶರಥ ಸಿಂಗ್ ಠಾಕೂರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಆರ್ ಜೆ ಮಂಜು ಹೀರೋಳಿ ಕಾರ್ಯಕ್ರಮ ವನ್ನು ನಿರೂಪಿಸಿದರು.

## ಮಾನಸಿಕ ಅಸ್ವಸ್ಥರನ್ನು ಗೌರವದಿಂದ ಕಾಣಿ: ನ್ಯಾ.ನವಲೆ

**ಕಲಬುರಗಿ, ಅ. 15:** ಮಾನಸಿಕ ಆರೋಗ್ಯ ಸಮಸ್ಯೆ ಎದುರಿಸುತ್ತಿರುವ ವರನ್ನು ತಾರತಮ್ಯವಿಲ್ಲದೆ ಗೌರವದಿಂದ ಕಾಣಬೇಕು ಮತ್ತು ಅವರು ತಮ್ಮ ಹಕ್ಕುಗಳ ಕುರಿತು ಅರಿವು ಹೊಂದಿರಬೇಕು ಎಂದು ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಅವರು ಹೇಳಿದರು.



ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಸಮಾಜ ಕಾರ್ಯ ವಿಭಾಗವು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಸಹಯೋಗದೊಂದಿಗೆ ವಿಶ್ವ ಮಾನಸಿಕ ಆರೋಗ್ಯ ದಿನ ನಿಮಿತ್ತ ಜರುಗಿದ ವಾಸ್ತವ ಅನುಭವಗಳಿಗೆ ಕಿವಿಗೊಡೋಣ: ನೈಜ ಧ್ವನಿಗಳು, ನೈಜ ಬದಲಾವಣೆಗಳು ಎಂಬ ಆಶಯ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಮಾನಸಿಕ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವ ವ್ಯಕ್ತಿಗಳ ಘನತೆ, ಹಕ್ಕುಗಳು ಮತ್ತು ಗೌಪ್ಯತೆಯನ್ನು ರಕ್ಷಿಸಲು ಕಾನೂನಿನಲ್ಲಿ ಹಲವು ಅವಕಾಶಗಳಿವೆ ಎಂದು ವಿವರಿಸಿದರು.

ಮಾನಸಿಕ ಆರೋಗ್ಯ ಆರೈಕೆ ಕಾಯ್ದೆ–2017ರ ಅಡಿಯಲ್ಲಿ ಲಭ್ಯವಿರುವ ಚಿಕಿತ್ಸೆಯ ಹಕ್ಕು, ಗೌಪ್ಯತೆಯ ರಕ್ಷಣೆ, ಸಮಾನತೆ, ವೈದ್ಯಕೀಯ ದಾಖಲೆಗಳ ಸಂರಕ್ಷಣೆ ಹಾಗೂ ಉಚಿತ ಕಾನೂನು ನೆರವು ಸೇರಿದಂತೆ ವಿವಿಧ ಕಾನೂನುಬದ್ಧ ಹಕ್ಕುಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ಉದ್ಘಾಟನೆ ನೆರವೇರಿಸಿದ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ಮಾತನಾಡಿ, ವಿದ್ಯಾರ್ಥಿಗಳು ಶೈಕ್ಷಣಿಕ ಒತ್ತಡ, ದುಶ್ಚಟಗಳು ಅಥವಾ ಇತರ ಯಾವುದೇ ಕಾರಣಗಳಿಂದ ಮಾನಸಿಕವಾಗಿ ಬಳಲುತ್ತಿದ್ದರೆ ಭಯಪಡದೆ, ಹಿಂಜರಿಯದೆ ವಿಶ್ವವಿದ್ಯಾಲಯದ ಮಾನಸಿಕ ಆರೋಗ್ಯ ಆಪ್ತಸಮಾಲೋಚನಾ ಕೇಂದ್ರದ ನೆರವು ಪಡೆಯಬೇಕು ಎಂದು ಸಲಹೆ ನೀಡಿದರು.

ಕೇಂದ್ರ ಸರ್ಕಾರದ ಶಿಕ್ಷಣ ಇಲಾಖೆಯ ನಿರ್ದೇಶನದಂತೆ ವಿಶ್ವವಿದ್ಯಾಲಯದಲ್ಲಿ ವಿದ್ಯಾರ್ಥಿಗಳಿಗೆ ಹಾಗೂ ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ಆಪ್ತಸಮಾಲೋಚಕರನ್ನು ನೇಮಿಸಲಾಗಿದೆ. ವಿದ್ಯಾರ್ಥಿಗಳು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಂಡು ಅಗತ್ಯವಿದ್ದಾಗ ಆಪ್ತಸಮಾಲೋಚನೆ ಮತ್ತು ಚಿಕಿತ್ಸೆಯನ್ನು ಪಡೆಯಬೇಕು ಎಂದು ತಿಳಿಸಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಅಧಿಕಾರಿ ಡಾ. ರವಿ ಕಾಂತಿ ಕ್ಯಾತನಾಳ್ ಅವರು ಮಾತನಾಡಿ, ವಿದ್ಯಾರ್ಥಿಗಳು ಒತ್ತಡವನ್ನು ಸಮರ್ಥವಾಗಿ ನಿಭಾಯಿಸಲು ತಾಳ್ಮೆ, ಮನಃಶಾಂತಿ, ದೈಹಿಕ ವ್ಯಾಯಾಮ, ನಡಿಗೆ ಹಾಗೂ ಉತ್ತಮ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

## ಸಿನಿಮಾ ನಟ ಪ್ರೇಮ್‌ಗೆ ತೊಗರಿ ನಾಡಲ್ಲಿ ಆತ್ಮೀಯ ಸ್ವಾಗತ

**ಕಲಬರಗಿ, ಅ.15–** ತೊಗರಿಯ ನಾಡು ಕಲಬುರಗಿಗೆ ಆಗಮಿಸಿದ ಕನ್ನಡದ ಖ್ಯಾತ ಸಿನಿಮಾ ನಟ ಪ್ರೇಮ್ ಅವರಿಗೆ ಅಭಿಮಾನಿಗಳು ಆತ್ಮೀಯ ಸ್ವಾಗತ ಕೋರಿದರು.



ಕಲಬುರಗಿಗೆ ಅ.14ರಂದು ಶಹಾಪುರದಲ್ಲಿ ಖಾಸಗಿ ಕಾರ್ಯಕ್ರಮ ದಲ್ಲಿ ಪಾಲ್ಗೊಳ್ಳಲು ಆಗಮಿಸಿದ "ನೆನಪಿರಲಿ" ಜನಪ್ರಿಯ ಚಿತ್ರದ ನಾಯಕ ಪ್ರೇಮ್ ಅವರನ್ನು ಅಭಿಮಾನಿಗಳ ಹರ್ಷೋದ್ಗಾರದ ನಡುವೆ ಕಲಬುರಗಿಯ ಹೋಟೆಲ್ ಬೃಂದಾವನ ಗ್ರ್ಯಾಂಡ್ ನಲ್ಲಿ ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥ ಡಾ ಸದಾನಂದ ಪೆರ್ಲ, ಗುರುರಾಜ್ ಬಂಡಿ, ಮಹೇಶ್ ಕಡೇಚೂರ್, ಚನ್ನಬಸವ ತೊರವಿ, ಚಾಂದಿನಿ ಶೇಖರ್, ಮೌನೇಶ್, ಗೋರಕನಾಥ್ ಮತಿತರು ಇದ್ದರು ಪ್ರೇಮ್ ಅವರಿಗೆ "ಸ್ವಾತಂತ್ರ್ಯದ ಅಮೃತ ಹೆಜ್ಜೆಗಳು"ಕೃತಿ ಹಾಗೂ ಶಾಲು ನೀಡಿ ವಿಶೇಷವಾಗಿ ಸತ್ಕರಿಸಲಾಯಿತು. ಅಭಿಮಾನಿಗಳ ಪ್ರೀತಿಗೆ , ಪ್ರೇಮ್ ವಂದನೆಗಳನ್ನು ತಿಳಿಸಿ ಮತ್ತೆ ನಿಮ್ಮ ಭೇಟಿಗೆ ಆಗಮಿಸುತ್ತೇನೆ ಎಂದು ಹೇಳಿದರು.

## ಆಯುರ್ವೇದ ಚಿಕಿತ್ಸೆಯ ಜಾಗೃತಿ ಅಗತ್ಯ: ಕೇಶವರೆಡ್ಡಿ

**ರಾಯಚೂರು, ಅ, 15:** ಭಾರತೀಯ ಪರಂಪರೆಯ ಆಯುರ್ವೇದ ಚಿಕಿತ್ಸಾ ಪದ್ಧತಿಯ ಮಹತ್ವದ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಬೇಕಿದೆ ಎಂದು ಪೂರ್ಣಿಮಾ ಆಯುರ್ವೇದಿಕ್ ಮೆಡಿಕಲ್ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ಅಧ್ಯಕ್ಷ ಕೇಶವರೆಡ್ಡಿ ಹೇಳಿದರು.




ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನ ಬೆಳ್ಳಿ ಮಹೋತ್ಸವ–2026ರ ಅಂಗವಾಗಿ ಪೂರ್ಣಿಮಾ ಆಯುರ್ವೇದಿಕ್ ಮೆಡಿಕಲ್ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ಸಹಯೋಗದಲ್ಲಿ ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಪತ್ರಕರ್ತರಿಗಾಗಿ ಆಯೋಜಿಸಿದ್ದ ಆಯುರ್ವೇದ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಆಧುನಿಕ ಚಿಕಿತ್ಸಾ ಪದ್ಧತಿಗಳು ವ್ಯಾಪಕವಾಗುವುದಕ್ಕೂ ಮುನ್ನ ನಮ್ಮ ಪೂರ್ವಜರು ಆಯುರ್ವೇದ ಸೇರಿದಂತೆ ಸಾಂಪ್ರದಾಯಿಕ ಚಿಕಿತ್ಸಾ ಪದ್ಧತಿಗಳನ್ನು ಅವಲಂಬಿಸಿದ್ದರು. ಆಯುರ್ವೇದವು ಭಾರತೀಯ ವೈದ್ಯಕೀಯ ಪರಂಪರೆಯ ಪ್ರಮುಖ ಭಾಗವಾಗಿದೆ. ಜನರಿಗೆ ಗುಣಮಟ್ಟದ ಚಿಕಿತ್ಸೆ ಹಾಗೂ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ರಾಯಚೂರಿನಲ್ಲಿ ಸುಸಜ್ಜಿತ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ ಆರಂಭಿಸಲಾಗಿದೆ. ಕಡಿಮೆ ವೆಚ್ಚದಲ್ಲಿ ಉತ್ತಮ ಚಿಕಿತ್ಸೆ ಪಡೆಯಲು ಪತ್ರಕರ್ತರು ಹಾಗೂ ಸಾರ್ವಜನಿಕರಿಗೆ ಅವಕಾಶವಿದೆ ಎಂದರು.

ಆಯುರ್ವೇದ ಚಿಕಿತ್ಸೆಯು ಗುಣಮ್ಟದಿಂದ ಕೂಡಿದ್ದು, ಯಾವುದೇ ಅಡ್ಡ ಪರಿಣಾಮಗಳಿಲ್ಲದೇ ರೋಗಗಳಿಗೆ ಸುರಕ್ಷಿತ ಚಿಕಿತ್ಸೆ ನೀಡುವಂಥದ್ದಾಗಿದೆ. ರೋಗವನ್ನು ಬೇರು ಸಮೇತ ಕೀಳುವ ಮೂಲಕ ಮತ್ತೊಮ್ಮೆ ಬರದಂತೆ ತಡೆಯುತ್ತದೆ. ಆಧುನಿಕ ಚಿಕಿತ್ಸೆಯಂತೆ ಆಯುವೇದವು ತಾತ್ಕಾಲಿಕವಲ್ಲ. ಶಾಶ್ವತ ಸುರಕ್ಷಿತ ಚಿಕಿತ್ಸೆಯಾಗಿದೆ ಎಂಬುದನ್ನು ಪ್ರತಿಯೊಬ್ಬರೂ ಅರಿಯಬೆಕಿದೆ. ಇತ್ತೀಚೆಗೆ ಆಯುವೇದದ ಹೆಸರಿನಲ್ಲಿ ಅನೇಕರು ವ್ಯಾಪಾರ ನಡೆಸುವ ಮೂಲಕ ಮೋಸ ಮಾಡುತ್ತಿದ್ದು, ಇದರಿಂದ ಆಯುರ್ವೇದಕ್ಕೆ ಕಳಂಕ ಬರುತ್ತದೆ. ಅಂಥ ನಕಲಿಗಳಿಂದ ಹುಷಾರಾಗಿ ರಬೇಕು ಎಂದೂ ಹೇಳಿದರು.

## ಆರ್.ವೈ.ಎಂ.ಇ.ಸಿ.ಯಲ್ಲಿ ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ ಪರಿಚಯ ಕಾರ್ಯಕ್ರಮ, ಫ್ರೆಷರ್ಸ್ ಡೇ ಆಚರಣೆ

**ಬಳ್ಳಾರಿ ಅ 15.** ನಗರದ ಪ್ರತಿಷ್ಠಿತ ರಾವ್ ಬಹದ್ದೂರ್ ವೈ. ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದ ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಭಾಗದ ವತಿಯಿಂದ 3ನೇ ಸೆಮಿಸ್ಟರ್ ವಿದ್ಯಾರ್ಥಿಗಳಿಗಾಗಿ ವಿದ್ಯಾರ್ಥಿ ಪರಿಚಯ ಕಾರ್ಯಕ್ರಮ ಹಾಗೂ ಫ್ರೆಷರ್ಸ್ ಡೇ ಸಮಾರಂಭವನ್ನು ಕಾಲೇಜಿನ ಆವರಣದಲ್ಲಿ ಯಶಸ್ವಿಯಾಗಿ ಆಯೋಜಿಸಲಾಯಿತು. ಕಾರ್ಯಕ್ರಮವು ಹೊಸ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಬೆಳೆಸುವುದರ ಜೊತೆಗೆ, ಮೆಕ್ಯಾನಿಕಲ್ ಎಂಜಿನಿಯರಿಂಗ್ ಕ್ಷೇತ್ರದ ಅವಕಾಶಗಳು, ತಾಂತ್ರಿಕ ಕೌಶಲಗಳು ಮತ್ತು ವೃತ್ತಿಪರ ಜವಾಬ್ದಾರಿಗಳ ಕುರಿತು ಅರಿವು ಮೂಡಿಸುವ ಉದ್ದೇಶ ಹೊಂದಿತ್ತು.



ಕಾರ್ಯಕ್ರಮವನ್ನು ಮುಖ್ಯ ಅತಿಥಿಗಳಾದ ಕರ್ನಾಟಕ ಸರ್ಕಾರದ ಹಣಕಾಸು ಇಲಾಖೆಯ ವಾಣಿಜ್ಯ ತೆರಿಗೆ ಅಧಿಕಾರಿ ಹಾಗೂ ಇದೇ ಕಾಲೇಜಿನ ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಭಾಗದ ಹಳೆಯ ವಿದ್ಯಾರ್ಥಿ ಗುರುಪ್ರಸಾದ್ ಉದ್ಘಾಟಿಸಿದರು. ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ?ವಿದ್ಯಾರ್ಥಿ ಜೀವನವು ಭವಿಷ್ಯದ ವೃತ್ತಿಜೀವನಕ್ಕೆ ಭದ್ರ ಬುನಾದಿ ಹಾಕುವ ಮಹತ್ವದ ಹಂತವಾಗಿದೆ. ವಿದ್ಯಾರ್ಥಿಗಳು ಮೊಬೈಲ್ ಬಳಕೆಯನ್ನು ಮಿತಿಗೊಳಿಸಿ, ಅಧ್ಯಯನ, ಕೌಶಲಾಭಿವೃದ್ಧಿ ಮತ್ತು ಪ್ರಾಯೋಗಿಕ ಜ್ಞಾನಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಎಂಜಿನಿಯರಿಂಗ್ ಶಿಕ್ಷಣವು ಕೇವಲ ಪದವಿ ಪಡೆಯುವುದಕ್ಕೆ ಸೀಮಿತವಾಗದೆ, ಸಮಾಜದ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಸಾಮರ್ಥ್ಯವನ್ನು ಬೆಳೆಸಬೇಕು. ಶೈಕ್ಷಣಿಕ ಸಾಧನೆಯ ಪ್ರತಿಯೊಂದು ಅಂಕವೂ ಭವಿಷ್ಯದ ಅವಕಾಶಗಳಿಗೆ ಮಹತ್ವದ್ದಾಗಿದೆ? ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಆರ್.ವೈ.ಎಂ.ಇ.ಸಿ. ಅಧ್ಯಕ್ಷರು ಹಾಗೂ ವಿ.ವಿ. ಸಂಘದ ಉಪಾಧ್ಯಕ್ಷರಾದ ಜಾನೆಕುಂಟೆ ಬಸವರಾಜ ಅವರು ಮಾತನಾಡಿ, 'ಎಂಜಿನಿಯರ್ ಗಳ ಪಾತ್ರ ಕೈಗಾರಿಕೆ, ಉತ್ಪಾದನೆ, ಸಾರಿಗೆ, ಇಂಧನ ಮತ್ತು ತಂತ್ರಜ್ಞಾನ ಸೇರಿದಂತೆ ಪ್ರತಿಯೊಂದು ಕ್ಷೇತ್ರದಲ್ಲಿಯೂ ಮಹತ್ವದ್ದಾಗಿದೆ. ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿದ್ಯಾರ್ಥಿಗಳು ನಿರಂತರ ಅಧ್ಯಯನ, ಸೃಜನಶೀಲ ಚಿಂತನೆ, ಶಿಸ್ತು, ಪರಿಶ್ರಮ ಮತ್ತು ತಾಂತ್ರಿಕ ದಕ್ಷತೆಯನ್ನು ಬೆಳೆಸಿಕೊಳ್ಳಬೇಕು. ಆಧುನಿಕ ಕೈಗಾರಿಕೆಗಳಲ್ಲಿ ಯಂತ್ರೋಪಕರಣಗಳ ಸುರಕ್ಷಿತ ಬಳಕೆ, ಕಾರ್ಮಿಕರ ರಕ್ಷಣೆ ಮತ್ತು ಅಪಘಾತಗಳ ತಡೆಗಟ್ಟುವಿಕೆಗೆ ಹೆಚ್ಚಿನ ಆದ್ಯತೆ ನೀಡಬೇಕು'ಎಂದು ತಿಳಿಸಿದರು.

ಹೊಸದಾಗಿ ಮೆಕ್ಯಾನಿಕಲ್ ಎಂಜಿನಿಯರಿಂಗ್ ಅಧ್ಯಯನ ಆರಂಭಿಸಿರುವ ವಿದ್ಯಾರ್ಥಿಗಳು ತರಗತಿಯ ಪಾಠಗಳ ಜೊತೆಗೆ ಕಾರ್ಯಾಗಾರಗಳು, ಪ್ರಯೋಗಾಲಯಗಳು, ವಿನ್ಯಾಸ ಚಟುವಟಿಕೆಗಳು ಮತ್ತು ಕೈಗಾರಿಕಾ ತರಬೇತಿಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಕಂಪ್ಯೂಟರ್ ನೆರವಿನ ವಿನ್ಯಾಸ (ಅಂಅ), ಉತ್ಪಾದನಾ ತಂತ್ರಜ್ಞಾನ, ರೋಬೋಟಿಕ್ಸ್, ಆಟೋಮೇಷನ್, ಎಲೆಕ್ಟ್ರಿಕ್ ವಾಹನಗಳು ಮತ್ತು ನವೀಕರಿಸಬಹುದಾದ ಇಂಧನದಂತಹ ಉದಯೋನ್ಮುಖ ಕ್ಷೇತ್ರಗಳ ಕುರಿತು ಅರಿವು ಬೆಳೆಸಿಕೊಳ್ಳಬೇಕು. ಸಂವಹನ ಕೌಶಲ, ತಂಡದ ಕಾರ್ಯನಿರ್ವಹಣೆ, ಸಮಸ್ಯೆ ಪರಿಹಾರ ಸಾಮರ್ಥ್ಯ ಹಾಗೂ ನೈತಿಕ ಮೌಲ್ಯಗಳು ಉತ್ತಮ ಎಂಜಿನಿಯರ್ ಆಗಲು ಅತ್ಯಗತ್ಯ ಎಂದು ಕಾರ್ಯಕ್ರಮದಲ್ಲಿ ಒತ್ತಿಹೇಳಲಾಯಿತು.

ಮೆಕ್ಯಾನಿಕಲ್ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಡಾ. ಕೋರಿ ನಾಗರಾಜ್ ಸ್ವಾಗತಿಸಿ, ವಿಭಾಗದ ಶೈಕ್ಷಣಿಕ ಚಟುವಟಿಕೆಗಳು ಹಾಗೂ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಯ ಮಹತ್ವವನ್ನು ವಿವರಿಸಿದರು.

# ಭಾರತ-ಅಮೆರಿಕ ವ್ಯಾಪಾರ ಒಪ್ಪಂದ ಶೀಘ್ರವೇ ಅಂತಿಮ ಒಪ್ಪಂದದ ಕರಡು ರಚನೆ ಪ್ರಗತಿಯಲ್ಲಿ: ಗೋಯೆಲ್

**ನವದೆಹಲಿ, ಅ.15:** ಭಾರತ-ಯುಎಸ್ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ (ಬಿಟಿಎ) ಮೊದಲ ಹಂತ ಅಂತಿಮಗೊಂಡಿದ್ದು, ಒಪ್ಪಂದದ ಕರಡು ರಚನೆ ನಡೆಯುತ್ತಿದೆ. ತನ್ನ ಸಮಾನ ದೇಶಗಳಿಗಿಂತ ಭಾರತ ಸ್ಪರ್ಧಾತ್ಮಕ ಪ್ರಯೋಜನವನ್ನು ಪಡೆದುಕೊಂಡ ನಂತರ ಒಪ್ಪಂದವನ್ನು ಕಾರ್ಯಗತಗೊಳಿಸಲಾಗುವುದು ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ತಿಳಿಸಿದ್ದಾರೆ.



ಹೊಸದಿಲ್ಲಿಯಲ್ಲಿ ಎಸ್‌ಆರ್‌ಸಿಸಿಯ ಶತಮಾನೋತ್ಸವ ಕಾನ್‌ಕ್ಲೇವ್‌ನಲ್ಲಿ ವಿದ್ಯಾರ್ಥಿಗಳೊಂದಿಗೆ ಗುರುವಾರ ನಡೆಸಿದ ಸಂವಾದದಲ್ಲಿ ಮಾತನಾಡಿರುವ ಅವರು, ಅಮೆರಿಕ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಮೊದಲ ಭಾಗವನ್ನು ಅಂತಿಮಗೊಳಿಸಲಾಗಿದೆ. ಇದು ಅಂತಿಮ ರೂಪರೇಖೆಗಳು, ಕಾನೂನು ರಚನೆಗೆ ಒಳಪಡುತ್ತಿದೆ. ಸ್ಪರ್ಧಾತ್ಮಕ ಪ್ರಯೋಜನವನ್ನು ಪಡೆದ ನಂತರ ಅದನ್ನು ಕಾರ್ಯಗತಗೊಳಿಸಲಾಗುವುದು ಎಂದಿದ್ದಾರೆ.

ಭಾರತ-ಅಮೆರಿಕ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಪ್ರಮುಖ ಸಮಸ್ಯೆಗಳನ್ನು ಬಗೆಹರಿಸಲಾಗಿದೆ, "ನಂಬಲಾಗದ ವೇಗದಲ್ಲಿ" ಮಾತುಕತೆಗಳು ಪ್ರಗತಿಯಲ್ಲಿವೆ ಎಂದು ಭಾರತದ ಯುಎಸ್ ರಾಯಭಾರಿ ಸೆರ್ಗಿಯೋ ಗೋರ್ ಹೇಳಿದ ಕೆಲವೇ ಗಂಟೆಗಳ ನಂತರ ಗೋಯಲ್ ಅವರ ಹೇಳಿಕೆ ಹೊರಬಿದ್ದಿದೆ. "ದೊಡ್ಡಚಿತ್ರ, ದೊಡ್ಡ ಚೌಕಟ್ಟು, ದೊಡ್ಡ ವಸ್ತುಗಳು ಮುಗಿದಿವೆ" ಎಂದು ಗೋರ್ ಗುರುವಾರ ನವದೆಹಲಿಯ ಬ್ಲೂಮ್‌ಬರ್ಗ್‌ನ ನ್ಯೂ ಎಕಾನಮಿ ಫೋರಂನಲ್ಲಿ ಹೇಳಿದರು.

ಇತರ ಪ್ರಮುಖ ಆರ್ಥಿಕತೆಗಳೊಂದಿಗೆ ಭಾರತದ ವ್ಯಾಪಾರ ತೊಡಗಿಸಿಕೊಳ್ಳುವಿಕೆ ಕೂಡ ಪ್ರಗತಿಯಲ್ಲಿದೆ. ಉಭಯ ದೇಶಗಳು ಅನುಮೋದನೆಯನ್ನು ಪೂರ್ಣಗೊಳಿಸಿದ ನಂತರ ಭಾರತ-ನ್ಯೂಜಿಲೆಂಡ್ ಮುಕ್ತ ವ್ಯಾಪಾರ ಒಪ್ಪಂದ (ಎಫ್‌ಟಿಎ) ಅಕ್ಟೋಬರ್ 20ರಂದು ಜಾರಿಗೆ ಬರಲಿದೆ ಎಂದು ಹೇಳಿದರು.

ಒಪ್ಪಂದವು ನ್ಯೂಜಿಲೆಂಡ್‌ಗೆ ಭಾರತೀಯ ಸರಕುಗಳಿಗೆ ಸುಂಕ-ಮುಕ್ತ ಪ್ರವೇಶವನ್ನು ಒದಗಿಸುತ್ತದೆ, ಆದರೆ ನ್ಯೂಜಿಲೆಂಡ್ 15 ವರ್ಷಗಳಲ್ಲಿ ಭಾರತದಲ್ಲಿ $20 ಶತಕೋಟಿ ಹೂಡಿಕೆ ಮಾಡಲು ಬದ್ಧವಾಗಿದೆ. 2030ರ ವೇಳೆಗೆ ದ್ವಿಪಕ್ಷೀಯ ವ್ಯಾಪಾರವನ್ನು ದ್ವಿಗುಣಗೊಳಿಸುವ ಗುರಿಯನ್ನೂ ಉಭಯ ದೇಶಗಳು ಹೊಂದಿವೆ.

27 ಸದಸ್ಯ ರಾಷ್ಟ್ರಗಳನ್ನು ಒಳಗೊಂಡಿರುವ ಭಾರತ-ಯುರೋಪಿಯನ್ ಒಕ್ಕೂಟದ ಎಫ್‌ಟಿಎಗೆ ಡಿಸೆಂಬರ್‌ನಲ್ಲಿ ಸಹಿಹಾಕುವ ನಿರೀಕ್ಷೆಯಿದೆ ಮತ್ತು ಫೆಬ್ರವರಿ 2027ರ ವೇಳೆಗೆ ಕಾರ್ಯನಿರ್ವಹಿಸಲಿದೆ. ಭಾರತವು ಯುನೈಟೆಡ್ ಕಿಂಗ್‌ಡಮ್ ಮತ್ತು ಯುರೋಪಿಯನ್ ಫ್ರೀ ಟ್ರೇಡ್ ಅಸೋಸಿಯೇಷನ್ (ಇಎಫ್‌ಟಿಎ) ಯೊಂದಿಗೆ ವ್ಯಾಪಾರ ಒಪ್ಪಂದಗಳನ್ನು ಮುಕ್ತಾಯಗೊಳಿಸಿದೆ, ಆದರೆ ಓಮನ್‌ನೊಂದಿಗಿನ ಒಪ್ಪಂದವು ರಫ್ತು ಮಾರುಕಟ್ಟೆಗಳನ್ನು ವೈವಿಧ್ಯಗೊಳಿಸಲು ಮತ್ತು ಭಾರತೀಯ ಸರಕು ಮತ್ತು ಸೇವೆಗಳಿಗೆ ಆದ್ಯತೆಯ ಪ್ರವೇಶವನ್ನು ಭದ್ರಪಡಿಸುವ ಭಾಗವಾಗಿದೆ. ಭಾರತದ ಒಂಬತ್ತು ಎಫ್‌ಟಿಎಗಳು ಒಟ್ಟು ದೇಶೀಯ ಉತ್ಪನ್ನದಲ್ಲಿ ಸುಮಾರು $60 ಟ್ರಿಲಿಯನ್ ಮೌಲ್ಯದ ಆರ್ಥಿಕತೆಗಳನ್ನು ಒಳಗೊಳ್ಳುತ್ತವೆ ಮತ್ತು ಜಾಗತಿಕ ವ್ಯಾಪಾರದ ಮೂರನೇ ಎರಡರಷ್ಟು ಆದ್ಯತೆಯ ಪ್ರವೇಶವನ್ನು ಒದಗಿಸುತ್ತವೆ ಎಂದು ಗೋಯಲ್ ಹೇಳಿದ್ದಾರೆ.

# ಒಮಾನ್ ಈಗ ಭಾರತದ ನಂ.1 ಎಲ್‌ಎನ್‌ಜಿ ಪೂರೈಕೆದಾರ: 3ನೇ ಸ್ಥಾನಕ್ಕೆ ಕುಸಿದ ಅಮೆರಿಕ

**ನವದೆಹಲಿ, ಅ.15:** ಪಶ್ಚಿಮ ಏಷ್ಯಾದ ಸಂಘರ್ಷ ಮತ್ತು ಹಾರ್ಮುಜ್ ಜಲಸಂಧಿಯ ಮೂಲಕ ಅನಿಲ ಪೂರೈಕೆಯಲ್ಲಿ ಉಂಟಾದ ಅಡಚಣೆಗಳ ನಡುವೆಯೂ ಭಾರತ ದ್ರವೀಕೃತ ನೈಸರ್ಗಿಕ ಅನಿಲ (ಎಲ್‌ಎನ್‌ಜಿ) ಆಮದನ್ನು ಮುಂದುವರೆಸಿದೆ. ಸೆಪ್ಟೆಂಬರ್‌ನಲ್ಲಿ ಭಾರತಕ್ಕೆ ಎಲ್‌ಎನ್‌ಜಿ ಪೂರೈಸುವ ಪ್ರಮುಖ ರಾಷ್ಟ್ರಗಳ ಪಟ್ಟಿಯಲ್ಲಿ ಒಮಾನ್ ಮೊದಲ ಸ್ಥಾನಕ್ಕೇರಿದ್ದು, ಇತ್ತೀಚಿನ ತಿಂಗಳುಗಳಲ್ಲಿ ಅಗ್ರ ಪೂರೈಕೆದಾರನಾಗಿದ್ದ ಅಮೆರಿಕ ಮೂರನೇ ಸ್ಥಾನಕ್ಕೆ ಕುಸಿದಿದೆ. ಯುರೋಪಿನ ರಾಷ್ಟ್ರಗಳು ಅಮೆರಿಕದ ಎಲ್‌ಎನ್‌ಜಿ ಸರಕುಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಖರೀದಿಸುತ್ತಿರುವುದು ಈ ಬದಲಾವಣೆಗೆ ಪ್ರಮುಖ ಕಾರಣ ಎನ್ನಲಾಗಿದೆ.



ಆದಾಗ್ಯೂ, ಹಿಂದಿನ ವರ್ಷದ ಇದೇ ಅವಧಿಗೆ ಹೋಲಿಸಿದರೆ ಭಾರತದ ಎಲ್‌ಎನ್ಜಿ ಆಮದು ಪ್ರಮಾಣ ಹೆಚ್ಚಾಗಿದೆ. ದೇಶದ ನಗರ ಅನಿಲ ವಿತರಣೆ, ರಸಗೊಬ್ಬರ, ವಿದ್ಯುತ್ ಉತ್ಪಾದನೆ ಮತ್ತು ಸೆರಾಮಿಕ್ಸ್ ಸೇರಿದಂತೆ ಹಲವು ವಲಯಗಳಲ್ಲಿ ಅನಿಲದ ಬೇಡಿಕೆ ಹೆಚ್ಚಿರುವುದರಿಂದ, ಹೆಚ್ಚಿನ ಬೆಲೆಗಳ ನಡುವೆಯೂ ಭಾರತವು ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಎಲ್‌ಎನ್‌ಜಿ ಸರಕುಗಳಿಗಾಗಿ ಪೈಪೋಟಿ ನಡೆಸುತ್ತಿದೆ. ಸರಕು ಮಾರುಕಟ್ಟೆ ವಿಶ್ಲೇಷಣಾ ಸಂಸ್ಥೆ ಕೆಪ್ಲರ್‌ನ ಹಡಗುಗಳ ಸಂಚಾರದ ಮಾಹಿತಿಯ ಪ್ರಕಾರ, ಸೆಪ್ಟೆಂಬರ್‌ನಲ್ಲಿ ಭಾರತವು ಒಟ್ಟು 22.4 ಲಕ್ಷ ಟನ್ ಎಲ್‌ಎನ್ಜಿ ಆಮದು ಮಾಡಿಕೊಂಡಿದೆ. ಇದು ಆಗಸ್ಟ್‌ಗೆ ಹೋಲಿಸಿದರೆ ಶೇ.12.7ರಷ್ಟು ಕಡಿಮೆಯಾದರೂ, ಕಳೆದ ವರ್ಷದ ಸೆಪ್ಟೆಂಬರ್‌ಗೆ ಹೋಲಿಸಿದರೆ ಶೇ.7ರಷ್ಟು ಹೆಚ್ಚಾಗಿದೆ.

**ಸೆಪ್ಟೆಂಬರ್ ತಿಂಗಳ ಪ್ರಮುಖ ಪೂರೈಕೆದಾರ ರಾಷ್ಟ್ರಗಳ ಪೈಕಿ, ಒಮಾನ್:** 5.9 ಲಕ್ಷ ಟನ್ (ಆಗಸ್ಟ್‌ಗೆ ಹೋಲಿಸಿದರೆ ಶೇ.11.6ರಷ್ಟು ಏರಿಕೆ), ನೈಜೀರಿಯಾ: 3.5 ಲಕ್ಷ ಟನ್ (ಶೇ.35.1ರಷ್ಟು ಇಳಿಕೆ), ಅಮೆರಿಕ: 3.4 ಲಕ್ಷ ಟನ್ (ಶೇ.60.7ರಷ್ಟು ಇಳಿಕೆ), ಯುಎಇ: 3.1 ಲಕ್ಷ ಟನ್ (ಶೇ.27.3ರಷ್ಟು ಏರಿಕೆ), ಕತಾರ್: 1 ಲಕ್ಷ ಟನ್ (ಶೇ.6.7ರಷ್ಟು ಏರಿಕೆ) ಆಮದು ಮಾಡಿಕೊಳ್ಳಲಾಗಿದೆ.

ಆಗಸ್ಟ್‌ನಲ್ಲಿ ಅಮೆರಿಕ ಮೊದಲ ಸ್ಥಾನದಲ್ಲಿದ್ದರೆ, ನೈಜೀರಿಯಾ, ಒಮಾನ್ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ (ಯುಎಇ) ನಂತರದ ಸ್ಥಾನಗಳಲ್ಲಿದ್ದವು. ಆದರೆ ಯುರೋಪಿನ ರಾಷ್ಟ್ರಗಳಿಂದ ಅಮೆರಿಕದ ಎಲ್‌ಎನ್‌ಜಿಗೆ ಬೇಡಿಕೆ ಹೆಚ್ಚಾದ ಹಿನ್ನೆಲೆಯಲ್ಲಿ ಜಾಗತಿಕ ಪೂರೈಕೆ ಮಾರ್ಗಗಳಲ್ಲಿ ಬದಲಾವಣೆ ಕಂಡುಬಂದಿದೆ.

ಹಾರ್ಮುಜ್ ಜಲಸಂಧಿಯ ಮೂಲಕ ಸಾಗಣೆಗೆ ಅಡ್ಡಿ ಉಂಟಾಗಿರುವ ನಡುವೆಯೂ ಯುಎಇ ಗಣನೀಯ ಪ್ರಮಾಣದಲ್ಲಿ ಎಲ್‌ಎನ್ಜಿ ರಫ್ತು ಮಾಡಿದೆ ಎಂದು ಉದ್ಯಮದ ಮೂಲಗಳು ತಿಳಿಸಿವೆ. ಸಮುದ್ರ ಭದ್ರತೆಯ ಪರಿಸ್ಥಿತಿಯನ್ನು ಆಧರಿಸಿ ಸೂಕ್ತ ಸಮಯದಲ್ಲಿ ಹಡಗುಗಳನ್ನು ಕಳುಹಿಸುವುದು ಸೇರಿದಂತೆ ವಿವಿಧ ತಂತ್ರಗಳನ್ನು ಬಳಸಲಾಗುತ್ತಿದೆ ಎನ್ನಲಾಗಿದೆ. ಕೆಲವು ಹಡಗುಗಳು ತಮ್ಮ ಸ್ಥಳ ಗುರುತಿಸುವ ಟ್ರಾನ್ಸ್ಪಾಂಡರ್‌ಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವ ಮೂಲಕ ಪತ್ತೆಯಾಗುವುದನ್ನು ತಪ್ಪಿಸಲು ಪ್ರಯತ್ನಿಸುತ್ತಿವೆ ಎಂದು ಮೂಲಗಳು ತಿಳಿಸಿವೆ. ಕತಾರ್ ಕೂಡ ಇಂತಹ ಕ್ರಮಗಳನ್ನು ಬಳಸಿಕೊಂಡು ಕೆಲವು ಸರಕುಗಳನ್ನು ರಫ್ತು ಮಾಡಿದೆ ಎನ್ನಲಾಗಿದೆ.

ಭಾರತದ ನೈಸರ್ಗಿಕ ಅನಿಲದ ಅಗತ್ಯದ ಸುಮಾರು ಅರ್ಧದಷ್ಟು ಆಮದಿನ ಮೂಲಕ ಪೂರೈಸಲಾಗುತ್ತದೆ. ಈ ಆಮದಿನ ಸುಮಾರು ಶೇ.60ರಷ್ಟು ಸಾಮಾನ್ಯವಾಗಿ ಹಾರ್ಮುಜ್ ಜಲಸಂಧಿಯ ಮೂಲಕ ಬರುತ್ತದೆ. ಇದರಲ್ಲಿ ಕತಾರ್ ಮತ್ತು ಯುಎಇ ಪ್ರಮುಖ ಪೂರೈಕೆದಾರ ರಾಷ್ಟ್ರಗಳಾಗಿವೆ. ಆದರೆ, ಒಮಾನ್‌ನ ಎಲ್‌ಎನ್‌ಜಿ ರಫ್ತು ಹಾರ್ಮುಜ್ ಜಲಸಂಧಿಯ ಮೇಲಿನ ಅವಲಂಬನೆಯನ್ನು ಹೊಂದಿಲ್ಲ. ಹೀಗಾಗಿ, ಪೂರೈಕೆಯ ಅಡಚಣೆಗಳ ನಡುವೆಯೂ ಒಮಾನ್‌ನಿಂದ ಆಮದು ಮಾಡಿಕೊಳ್ಳುವುದು ಭಾರತಕ್ಕೆ ಅನುಕೂಲವಾಗಿದೆ. ಕೆಪ್ಲರ್‌ನ ಎಲ್‌ಎನ್‌ಜಿ ಮತ್ತು ನೈಸರ್ಗಿಕ ಅನಿಲ ವಿಶ್ಲೇಷಕಿ ಸೋನಲ್ ರಂಜನ್ ಅವರ ಪ್ರಕಾರ, ಜಲವಿದ್ಯುತ್ ಉತ್ಪಾದನೆಗೆ ಲಭ್ಯತೆ ಕಡಿಮೆಯಾಗಿರುವುದು ಮತ್ತು ಕಲ್ಲಿದ್ದಲು ಆಧಾರಿತ ವಿದ್ಯುತ್ ಉತ್ಪಾದನೆಯ ಮೇಲಿನ ಒತ್ತಡವು ಅನಿಲ ಆಧಾರಿತ ವಿದ್ಯುತ್ ಉತ್ಪಾದನೆಯ ಬೇಡಿಕೆಯನ್ನು ಹೆಚ್ಚಿಸಿದೆ.

ನಗರ ಅನಿಲ ಬಳಕೆಯ ಹೆಚ್ಚಳ, ಎಲ್‌ಪಿಜಿಯಿಂದ ಪೈಪ್ಡ್ ನ್ಯಾಚುರಲ್ ಗ್ಯಾಸ್ ಬಳಕೆಗೆ ಬದಲಾವಣೆ ಹಾಗೂ ದೇಶೀಯ ನೈಸರ್ಗಿಕ ಅನಿಲ ಉತ್ಪಾದನೆಯಲ್ಲಿನ ಇಳಿಕೆ ಮುಂತಾದ ಕಾರಣಗಳಿಂದಾಗಿ, ಹೆಚ್ಚಿನ ಬೆಲೆಗಳಿದ್ದರೂ 2026ರ ಅಂತ್ಯದವರೆಗೆ ಭಾರತದ ಎಲ್‌ಎನ್‌ಜಿ ಬೇಡಿಕೆ ಸ್ಥಿರವಾಗಿರಲಿದೆ ಎಂದು ಅವರು ನಿರೀಕ್ಷಿಸಿದ್ದಾರೆ.

# ಅಭಿಜಿತ್ ದೀಪ್ಕೆಗೆ ಹಾಲಿವುಡ್ ಗಾಯಕಿ ಎಚ್ಚರಿಕೆ

**ವಾಷಿಂಗ್ಟನ್, ಅ.15:** ಭಾರತದಲ್ಲಿ ಪ್ರತಿಭಟನೆಗಳನ್ನು ಮುನ್ನಡೆಸುತ್ತಿರುವ ಕಾಕ್ರೋಚ್ ಜನತಾ ಪಕ್ಷ (ಸಿಜೆಪಿ)ಗೆ ಅಮೆರಿಕ ಮೂಲದ ದಾನಿಗಳಿಂದ ಹಣಕಾಸು ನೆರವು ದೊರೆಯುತ್ತಿದೆ ಎಂಬ ಆರೋಪ ಮಾಡಿದ್ದ ಅಮೆರಿಕದ ಗಾಯಕಿ ಇದೀಗ ಸಿಜೆಪಿ ಸಂಸ್ಥಾಪಕ ಅಭಿಜಿತ್ ದೀಪ್ಕೆಗೂ ಎಚ್ಚರಿಕೆ ನೀಡಿದ್ದು, ಅವರು ನಿಮ್ಮನ್ನು ಹಾಟ್‌ಕೇಕ್‌ನಂತೆ ಬಳಸಿಕೊಂಡು ಕೈತೊಳೆದುಕೊಳ್ಳುತ್ತಾರೆ ಎಂದು ಎಚ್ಚರಿಸಿದ್ದಾರೆ.



ಪ್ರಧಾನಿ ಮೋದಿ ಅವರ ನಾಯಕತ್ವವನ್ನು ವಿರೋಧಿಸುವ ಅಮೆರಿಕ ಮೂಲದ ದಾನಿಗಳು ದೀಪ್ಕೆ ಮತ್ತು ಅವರ ಪಕ್ಷಕ್ಕೆ ಹಣಕಾಸು ನೆರವು ನೀಡುತ್ತಿದ್ದಾರೆ ಎಂದು ಈ ಹಿಂದೆ ಮಿಲ್ಬೆನ್ ಆರೋಪಿಸಿದ್ದರು. ಈಗ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಮಿಲ್ಬೆನ್, ನೀವು ಗುರಿ ತಲುಪುವಲ್ಲಿ ಯಶಸ್ವಿಯಾಗದಿದ್ದರೆ ಅಮೆರಿಕದ ದಾನಿಗಳು ನಿಮ್ಮನ್ನು ಕ್ಷಣಾರ್ಧದಲ್ಲಿ ಕೈಬಿಡುತ್ತಾರೆ ಎಂದು ಮಿಲ್ಬೆನ್ ದೀಪ್ಕೆಗೆ ಎಚ್ಚರಿಕೆ ನೀಡಿದ್ದಾರೆ.

ಜಾಗತಿಕ ಮಟ್ಟದಲ್ಲಿ ಕೆಲವು ದಾನಿಗಳು ಸಂಪ್ರದಾಯವಾದಿ ನಾಯಕರನ್ನು ಗುರಿಯಾಗಿಸಿಕೊಂಡು, ಅಮೆರಿಕದಲ್ಲಿ ಶಿಕ್ಷಣ ಪಡೆದವರನ್ನು ಗುರುತಿಸಿ, ಅವರನ್ನು ತೀವ್ರಗೊಳಿಸಿ, ತಮ್ಮ ದೇಶಗಳಿಗೆ ಮರಳಿದ ಬಳಿಕ ಅಶಾಂತಿ ಸೃಷ್ಟಿಸಲು ಹಣಕಾಸು ನೆರವು ನೀಡುತ್ತಾರೆ ಎಂಬ ಆರೋಪವನ್ನೂ ಮಾಡಿದ್ದಾರೆ.

ಕೆಲವು ದಾನಿಗಳು ಜಗತ್ತಿನಾದ್ಯಂತ ಇದೇ ಮಾದರಿಯನ್ನು ಅನುಸರಿಸುತ್ತಿದ್ದಾರೆ. ಸಂಪ್ರದಾಯವಾದಿ ನಾಯಕರನ್ನು ಗುರಿಯಾಗಿಸಿಕೊಂಡು, ಆ ದೇಶದ ಅಮೆರಿಕದಲ್ಲಿ ಶಿಕ್ಷಣ ಪಡೆದ ವ್ಯಕ್ತಿಗಳನ್ನು ಗುರುತಿಸಿ, ಅವರನ್ನು ತೀವ್ರಗೊಳಿಸಿ, ದೇಶಕ್ಕೆ ಮರಳಿಸಿ ಗೊಂದಲ ಮತ್ತು ಅಶಾಂತಿ ಸೃಷ್ಟಿಸಲು ಹಣ ನೀಡುತ್ತಾರೆ. ಇಂತಹ ಪ್ರಯತ್ನಗಳು ಯಶಸ್ವಿಯಾಗದಿದ್ದರೂ ದೇಶದ ಅಭಿವೃದ್ಧಿ ಮತ್ತು ಆಡಳಿತದ ಮೇಲೆ ಪರಿಣಾಮ ಬೀರುತ್ತವೆ ಎಂದು ಮಿಲ್ಬೆನ್ ಆರೋಪಿಸಿದ್ದಾರೆ.

ಭಾರತೀಯರು ಮೌನವಾಗಿರಬಾರದು

ಯುವ ಭಾರತೀಯರು ಮೌನವಾಗಿರಬಾರದು ಎಂದು ಹೇಳಿರುವ ಮಿಲ್ಬೆನ್, ಸಿಜೆಪಿ ವಿರುದ್ಧ ಶಾಂತಿಯುತ ಪ್ರತಿಭಟನೆಗಳನ್ನು ಸಂಘಟಿಸುವಂತೆ ಕರೆ ನೀಡಿದ್ದಾರೆ. ಭಾರತದಲ್ಲಿ ಹುಟ್ಟಿ, ಬೆಳೆದು, ಇಲ್ಲಿಯೇ ಶಿಕ್ಷಣ ಪಡೆದವರು ದೇಶದ ಪ್ರಜಾಪ್ರಭುತ್ವ ಮತ್ತು ಸ್ವಾತಂತ್ರ್ಯವನ್ನು ಕಾಪಾಡಲು ಮುಂದೆ ಬರಬೇಕು ಎಂಬುದು ಅವರ ನಿಲುವಾಗಿದೆ.

ಮಿಲ್ಬೆನ್ ಅವರ ಆರೋಪಗಳಿಗೆ ಪ್ರತಿಕ್ರಿಯಿಸಿದ್ದ ಅಭಿಜೀತ್ ದೀಪ್ಕೆ, ಭಾರತದ ಆಂತರಿಕ ವಿಚಾರಗಳ ಕುರಿತು ಅಮೆರಿಕದ ಪ್ರಜೆಯೊಬ್ಬರು ಮಾತನಾಡುವುದೇಕೆ. ದೇಶದ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಲು ಭಾರತಕ್ಕೆ ಹೊರಗಿನವರ ಅಗತ್ಯವಿಲ್ಲ ಎಂದು ಪ್ರತಿಕ್ರಿಯಿಸಿದ್ದಾರೆ.

ದೀಪ್ಕೆ ಹೇಳಿಕೆಗೆ ತಿರುಗೇಟು ನೀಡಿರುವ ಮೇರಿ ಮಿಲ್ಬೆನ್, ಪ್ರಧಾನಿಗೆ ಅಮೆರಿಕದ ಬೆಂಬಲದ ಅಗತ್ಯವಿಲ್ಲ. 150 ಕೋಟಿ ಭಾರತೀಯರ ಬೆಂಬಲ ಅವರಿಗಿದೆ. ಕಳೆದ 25 ವರ್ಷಗಳಿಂದ ಅವರು ದೇಶದ ಸಾರ್ವಜನಿಕ ಜೀವನದಲ್ಲಿದ್ದಾರೆ; 12 ವರ್ಷಗಳಿಂದ ಪ್ರಧಾನಿಯಾಗಿದ್ದಾರೆ ಮತ್ತು ಸತತ ಮೂರು ಅವಧಿಗೆ ಆಯ್ಕೆಯಾಗಿದ್ದಾರೆ. 2029ರಲ್ಲಿಯೂ ಇದೇ ಮುಂದುವರಿಯಲಿದೆ ಎಂಬುದು ಸತ್ಯ ಎಂದು ಮಿಲ್ಬೆನ್ ತಮ್ಮ ಪೋಸ್ಟ್‌ನಲ್ಲಿ ಹೇಳಿದ್ದಾರೆ.

# ಪಾಕ್‌ನ ಶಾಲೆ ಮೇಲ್ಛಾವಣಿ ಕುಸಿದು 32 ಮಕ್ಕಳ ಸಾವು

**ಪೇಷಾವರ (ಪಾಕಿಸ್ತಾನ), ಅ.15:** ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರಾಂತ್ಯದ ರಾಜಧಾನಿ ಪೇಷಾವರದ ದಿರ್ ಕಾಲೋನಿ ಪ್ರದೇಶದಲ್ಲಿ ಗುರುವಾರ ಖಾಸಗಿ ಶಾಲೆಯೊಂದರ ಮೇಲ್ಛಾವಣಿ ಇದ್ದಕ್ಕಿದ್ದಂತೆ ಕುಸಿದು ಬಿದ್ದಿದ್ದು, ದುರ್ಘಟನೆಯಲ್ಲಿ ಕನಿಷ್ಠ 32 ಮಕ್ಕಳು ಹಾಗೂ ಓರ್ವ ಮಹಿಳಾ ಶಿಕ್ಷಕಿ ದುರ್ಮರಣಕ್ಕೀಡಾಗಿದ್ದಾರೆ. ದುರಂತದಲ್ಲಿ 45ಕ್ಕೂ ಹೆಚ್ಚು ವಿದ್ಯಾರ್ಥಿಗಳು ತೀವ್ರವಾಗಿ ಗಾಯಗೊಂಡಿದ್ದು, ಸಾವಿನ ಸಂಖ್ಯೆ ಮತ್ತಷ್ಟು ಏರಿಕೆಯಾಗುವ ಭೀತಿ ಎದುರಾಗಿದೆ.

ಪೇಶಾವರದ ಒಳಭಾಗದಲ್ಲಿರುವ ದಿರ್ ಕಾಲೋನಿಯಲ್ಲಿ ಈ ದುರಂತ ಸಂಭವಿಸಿದೆ ಎಂದು ಪೇಷಾವರ ಕ್ಯಾಪಿಟಲ್ ಸಿಟಿ ಪೊಲೀಸ್ ಮುಖ್ಯಸ್ಥ ಮಿಯಾನ್ ಸಯೀದ್ ತಿಳಿಸಿದ್ದಾರೆ. ಘಟನೆಯಲ್ಲಿ 32ವಿದ್ಯಾರ್ಥಿಗಳು ಹಾಗೂ ಓರ್ವ ಶಿಕ್ಷಕಿ ಮೃತಪಟ್ಟಿದ್ದು, 45ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ ಎಂದು ಹೇಳಿದ್ದಾರೆ. ಗಾಯಾಳುಗಳಿಗೆ ಚಿಕಿತ್ಸೆ ನೀಡಲು ಲೇಡಿ ರೀಡಿಂಗ್ ಆಸ್ಪತ್ರೆಯಲ್ಲಿ ತುರ್ತು ಪರಿಸ್ಥಿತಿ ಘೋಷಿಸಲಾಗಿದೆ ಎಂದು ಆಸ್ಪತ್ರೆಯ ವಕ್ತಾರ ಮೊಹಮ್ಮದ್ ಆಸಿಮ್ ತಿಳಿಸಿದ್ದಾರೆ.

ಮೃತಪಟ್ಟ ಮಕ್ಕಳೆಲ್ಲರೂ 13 ವರ್ಷ ಅಥವಾ ಅದಕ್ಕಿಂತ ಕಡಿಮೆ ವಯಸ್ಸಿನವರಾಗಿದ್ದು, ಗಾಯಗೊಂಡ 25 ಮಕ್ಕಳನ್ನು ವಿವಿಧ ವೈದ್ಯಕೀಯ ಕೇಂದ್ರಗಳಿಗೆ ದಾಖಲಿಸಲಾಗಿದೆ ಎಂದು ರಕ್ಷಣಾ ಕಾರ್ಯಾಚರಣೆ ಸಿಬ್ಬಂದಿ ತಿಳಿಸಿದ್ದಾರೆ.



ಕುಸಿದ ಕಟ್ಟಡದ ಅವಶೇಷಗಳನ್ನು ತೆರವುಗೊಳಿಸುವ ಕಾರ್ಯದಲ್ಲಿ ರಕ್ಷಣಾ ತಂಡಗಳು ತೊಡಗಿದ್ದು, ಅವಶೇಷಗಳ ಅಡಿಯಲ್ಲಿ ಇನ್ನೂ ಮಕ್ಕಳು ಅಥವಾ ಶಾಲಾ ಸಿಬ್ಬಂದಿ ಸಿಲುಕಿದ್ದಾರೆಯೇ ಎಂಬುದನ್ನು ಪತ್ತೆಹಚ್ಚಲು ಶೋಧ ಕಾರ್ಯ ಮುಂದುವರಿದಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

# ಶಿಕಾಗೋ ದೇವಾಲಯ ಗುರಿ: ಭಾರತೀಯರ ಸಾಮೂಹಿಕ ಹತ್ಯೆಗೆ ಸಂಚು

## ರೈಫಲ್ ಹಿಡಿದು ಅಮೆರಿಕದ ಹಿಂದೂ ದೇವಸ್ಥಾನಕ್ಕೆ ನುಗ್ಗಿದ್ದ ಶೂಟರ್: ಕೊನೇಕ್ಷಣದಲ್ಲಿ ಗನ್ ಜಾಮ್, ಆರೋಪಿ ಬಂಧನ

**ವಾಷಿಂಗ್ಟನ್, ಅ.15:** ಅಮೆರಿಕದಲ್ಲಿ ಭಾರತೀಯ ಮೂಲದ ಜನರನ್ನು ಗುರಿಯಾಗಿಸಿಕೊಂಡು ಸಾಮೂಹಿಕ ಗುಂಡಿನ ದಾಳಿ ನಡೆಸಲು ಸಂಚು ರೂಪಿಸಿದ್ದ 19 ವರ್ಷದ ಯುವಕನನ್ನು ಪೊಲೀಸರು ಬಂಧಿಸಿದ್ದಾರೆ.



ಶಿಕಾಗೋ ಪ್ರದೇಶದ ಪ್ರಸಿದ್ಧ ಹಿಂದೂ ದೇವಾಲಯವೊಂದನ್ನು ಗುರಿಯಾಗಿಸಿಕೊಂಡು ದಾಳಿಗೆ ಮುಂದಾಗಿದ್ದ ಈತನ ರೈಫಲ್ ಕೊನೆಯ ಕ್ಷಣದಲ್ಲಿ ಕೈಕೊಟ್ಟಿದ್ದರಿಂದ ನೂರಾರು ಜನರ ಪ್ರಾಣ ಉಳಿದಂತಾಗಿದೆ.

ಇಲಿನಾಯ್ಸ್‌ನ ಅರೋರಾ ಪ್ರದೇಶದಲ್ಲಿರುವ ಹಿಂದೂ ಆರಾಧನಾ ಸ್ಥಳವನ್ನು ಗುರಿಯಾಗಿಸಿಕೊಂಡಿದ್ದ ಆರೋಪಿ, ಭಾರತೀಯ ಮೂಲದ ಜನರ ವಿರುದ್ಧ ಹಿಂಸಾಚಾರಕ್ಕೆ ಪ್ರಚೋದಿಸುವ ವಿಚಾರಗಳನ್ನು ಒಳಗೊಂಡ ಪ್ರಣಾಳಿಕೆಯನ್ನು ಹೊಂದಿದ್ದ ಎನ್ನಲಾಗಿದೆ.

ತನಿಖೆಯ ವೇಳೆ ರೈಫಲ್, ಗುಂಡು ತುಂಬಿದ ಮ್ಯಾಗಜೀನ್‌ಗಳು ಹಾಗೂ ದಾಳಿಗೆ ಬಳಸಬಹುದಾದ ಇತರ ಉಪಕರಣಗಳು ಆತನ ಮನೆಯಲ್ಲಿ ಪತ್ತೆಯಾಗಿವೆ. ಆರೋಪಿ ದಾಳಿ ನಡೆಸಲು ಉದ್ದೇಶಿಸಿದ್ದ ನಿಖರ ಸ್ಥಳದ ಕುರಿತು ತನಿಖೆ ಮುಂದುವರಿದಿದ್ದು, ಘಟನೆಯ ಹಿಂದೆ ಇದ್ದ ಉದ್ದೇಶ ಮತ್ತು ಸಂಚಿನ ಸಂಪೂರ್ಣ ವಿವರಗಳನ್ನು ಪತ್ತೆಹಚ್ಚಲು ಪೊಲೀಸರು ತನಿಖೆ ಆರಂಭಿಸಿದ್ದಾರೆ.

ಪಲಾಟೈನ್ ನಿವಾಸಿ ಅಲೆಕ್ಸಾಂಡ್ರೋಸ್ ಪಪೊರಾಕಿಸ್ ಬಂಧಿತ ಆರೋಪಿ. ಅಮೆರಿಕದಲ್ಲಿ ನವರಾತ್ರಿ ಸೇರಿದಂತೆ ಹಿಂದೂಗಳ ಹಬ್ಬದ ಋತು ಆರಂಭವಾಗಿರುವ ಸಂದರ್ಭದಲ್ಲಿ ಈ ಘಟನೆ ಬೆಳಕಿಗೆ ಬಂದಿದೆ. ಇದಕ್ಕೂ ಎರಡು ವಾರಗಳ ಹಿಂದೆ ಓಹಿಯೋದ ರಿಚ್ಮಂಡ್ ಹೈಟ್ಸ್‌ನಲ್ಲಿರುವ ಶ್ರೀ ಸ್ವಾಮಿನಾರಾಯಣ ವಡ್ತಾಲ್ ಧಾಮ್ ಹಿಂದೂ ಮಂದಿರವನ್ನು ಧ್ವಂಸಗೊಳಿಸಲಾಗಿತ್ತು. ಬುಧವಾರ ರೋಲಿಂಗ್ ಮೆಡೋಸ್‌ನ ಕುಕ್ ಕೌಂಟಿ ಮೂರನೇ ಮುನ್ಸಿಪಲ್ ಜಿಲ್ಲಾ ನ್ಯಾಯಾಲಯಕ್ಕೆ ಪಪೊರಾಕಿಸ್‌ನನ್ನು ಹಾಜರುಪಡಿಸಲಾಗಿದ್ದು, ನ್ಯಾಯಾಧೀಶರು ಆತನನ್ನು ನ್ಯಾಯಾಂಗ ಬಂಧನದಲ್ಲಿಡಲು ಆದೇಶಿಸಿದ್ದಾರೆ. ಮುಂದಿನ ವಿಚಾರಣೆ ಅಕ್ಟೋಬರ್ 30ರಂದು ನಡೆಯಲಿದೆ.

ಪಲಾಟೈನ್‌ನ ಟ್ಯಾಕೋ ಬೆಲ್‌ನಲ್ಲಿ ಕ್ಯಾಷಿಯರ್ ಆಗಿ ಕೆಲಸ ಮಾಡುತ್ತಿದ್ದ ಪಪೊರಾಕಿಸ್ ಸಾಮೂಹಿಕ ಗುಂಡಿನ ದಾಳಿಗೆ ಸಂಚು ರೂಪಿಸುತ್ತಿದ್ದಾನೆ ಎಂದು ವ್ಯಕ್ತಿಯೊಬ್ಬರು ದೂರು ನೀಡಿದ ಬಳಿಕ ಪೊಲೀಸರು ತನಿಖೆ ಆರಂಭಿಸಿದ್ದರು. ಆರೋಪಿ ಸಾಮೂಹಿಕ ಗುಂಡಿನ ದಾಳಿ ನಡೆಸುವ ಯೋಜನೆಯನ್ನು ವಿವರಿಸುವ ದಾಖಲೆಯೊಂದನ್ನು ದೂರುದಾರನೊಂದಿಗೆ ಹಂಚಿಕೊಂಡಿದ್ದ ಎನ್ನಲಾಗಿದೆ. ಇದರೊಂದಿಗೆ ರೈಫಲ್, ರೈಫಲ್ ಮ್ಯಾಗಜೀನ್‌ಗಳು, ದೇಹದ ರಕ್ಷಣಾ ಕವಚ ಹಾಗೂ ಇತರ ಯುದ್ಧತಂತ್ರದ ಉಪಕರಣಗಳ ಚಿತ್ರಗಳನ್ನೂ ಕಳುಹಿಸಿದ್ದ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ.

ತನಿಖೆಯ ವೇಳೆ ಸಂಗ್ರಹಿಸಿದ ಮಾಹಿತಿಯ ಆಧಾರದಲ್ಲಿ, ಅಕ್ಟೋಬರ್ 11ರ ಭಾನುವಾರ ಅರೋರಾ ಪ್ರದೇಶದಲ್ಲಿರುವ ಹಿಂದೂ ದೇವಾಲಯವೊಂದನ್ನು ಗುರಿಯಾಗಿಸಿಕೊಂಡು ಆರೋಪಿ ದಾಳಿ ನಡೆಸಲು ಯೋಜಿಸಿದ್ದಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಆದರೆ, ಆತ ದಾಳಿ ನಡೆಸಲು ಉದ್ದೇಶಿಸಿದ್ದ ನಿಖರ ಸ್ಥಳದ ಕುರಿತು ವಿಚಾರಣೆ ನಡೆಸಲಾಗುತ್ತಿದೆ ಎಂದು ಪೊಲೀಸರು ಹೇಳಿದ್ದಾರೆ.

ಈ ನಡುವೆ ದಾಳಿಗೆ ಸಂಚು ರೂಪಿಸಿದ್ದ ಆರೋಪಿ, ಭಾನುವಾರ ವಿಶೇಷ ದಿನವಾಗಲಿದೆ ಎಂದು ಪಪೊರಾಕಿಸ್ ತನ್ನ ಟ್ಯಾಕೋ ಬೆಲ್ ಸಹೋದ್ಯೋಗಿಗಳಿಗೆ ಹೇಳಿದ್ದ ಎನ್ನಲಾಗಿದೆ. ಅಂದು ಬೆಳಿಗ್ಗೆ ಸಹೋದ್ಯೋಗಿಯೊಬ್ಬರಿಗೆ ಕರೆ ಮಾಡಿದ ಆತ, ತನ್ನ ಬಂದೂಕು ಜಾಮ್ ಆಗಿದೆ ಎಂದು ತಿಳಿಸಿದ್ದ. ಬಳಿಕ ಯಾರ ಕಣ್ಣಿಗೂ ಬೀಳದೆ ಅಲ್ಲಿಂದ ವೇಗವಾಗಿ ಹೊರಟಿದ್ದ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ.

# ಹಾರ್ಮುಜ್ ಜಲಸಂಧಿಯಲ್ಲಿ ಸರಕು ಸಾಗಣೆ ಹಡಗು ಮುಳುಗಡೆ

## ತೇಲಾಡಿದ ಐಫೋನ್‌ಗಳು, ಸುಗಂಧದ್ರವ್ಯ ಬಾಟಲಿಗಳು

**ಟೆಹ್ರಾನ್, ಅ.15:** ವಿಶ್ವದ ಅತ್ಯಂತ ಪ್ರಮುಖ ತೈಲ ಸಾಗಣೆ ಮಾರ್ಗಗಳಲ್ಲಿ ಒಂದಾದ ಹಾರ್ಮುಜ್ ಜಲಸಂಧಿಯಲ್ಲಿ ಸರಕು ಸಾಗಣೆ ಹಡಗು ಮುಳುಗಡೆಯಾಗಿದ್ದು, ನೌಕೆಯಲ್ಲಿದ್ದ ಬೆಲೆಬಾಳುವ ಐಫೋನ್‌ಗಳು ಮತ್ತು ಐಷಾರಾಮಿ ಪರ್ಫ್ಯೂಮ್ ಬಾಟಲಿಗಳು ಸಮುದ್ರದಲ್ಲಿ ನೀರಿನ ಮೇಲೆ ತೇಲಾಡುತ್ತಿರುವ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ.



ಸಿಂಗಾಪುರ ಧ್ವಜವನ್ನು ಹೊಂದಿದ್ದ ಜಿಎಫ್‌ಎಸ್ ಪ್ರೈಡ್ ಕಂಟೈನರ್ ಹಡಗು 2,500ಕ್ಕೂ ಅಧಿಕ ಕಂಟೈನರ್‌ಗಳನ್ನು ಹೊತ್ತುಕೊಂಡು ಸಾಗುತ್ತಿದ್ದ ವೇಳೆ ಹಾರ್ಮುಜ್ ಜಲಸಂಧಿ ಬಳಿ ಮುಳುಗಿದೆ. ಹಡಗು ಜಲಸಮಾಧಿಯಾಗುವ ಮುನ್ನ ಅದರಲ್ಲಿ ಬೆಂಕಿ ಕಾಣಿಸಿಕೊಂಡಿತ್ತು. ಅದೃಷ್ಟವಶಾತ್ ಅದರಲ್ಲಿದ್ದ ಎಲ್ಲಾ 21 ಸಿಬ್ಬಂದಿಯನ್ನು ರಕ್ಷಿಸಲಾಗಿದೆ.

ಹಡಗು ಮುಳುಗಿದ ರಭಸಕ್ಕೆ ಅದರಲ್ಲಿದ್ದ ದುಬಾರಿ ಎಲೆಕ್ಟ್ರಾನಿಕ್ಸ್ ವಸ್ತುಗಳು, ಐಫೋನ್ ಬಾಕ್ಸ್‌ಗಳು ಹಾಗೂ ಖ್ಯಾತ ಬ್ರ್ಯಾಂಡ್‌ಗಳ ಐಷಾರಾಮಿ ಸುಗಂಧ ದ್ರವ್ಯದ ಬಾಟಲಿಗಳು ಸಮುದ್ರದ ನೀರಿನಲ್ಲಿ ತೇಲಾಡಲು ಆರಂಭಿಸಿವೆ. ಸ್ಥಳೀಯ ಮೀನುಗಾರರು ಮತ್ತು ಜನರು ಬೋಟ್‌ಗಳಲ್ಲಿ ತೆರಳಿ, ನೀರಿನಲ್ಲಿ ತೇಲುತ್ತಿದ್ದ ಈ ಬೆಲೆಬಾಳುವ ವಸ್ತುಗಳನ್ನು ಹೆಕ್ಕಿಕೊಳ್ಳುತ್ತಿರುವ ವಿಡಿಯೋಗಳು ವೈರಲ್ ಆಗಿವೆ.

# ನನಸಾದ ಕನಸು: ಏಷ್ಯನ್ ಪ್ಯಾರಾ ಗೇಮ್ಸ್‌ಗೆ ನಿರಂಜನ್ ಮುಕುಂದ್ ಸಜ್ಜು

**ಬೆಂಗಳೂರು, ಅ.15:** 18ನೇ ವಯಸ್ಸಿನಲ್ಲಿ ಏಷ್ಯನ್ ಪ್ಯಾರಾ ಗೇಮ್ಸ್‌ಗೆ ಪದಾರ್ಪಣೆ ಮಾಡಿದ ಹನ್ನೆರಡು ವರ್ಷಗಳ ನಂತರ ಬೆಂಗಳೂರಿನ ಪ್ಯಾರಾ ಈಜುಪಟು ನಿರಂಜನ್ ಮುಕುಂದ್, ಈಗ ಸತತ ನಾಲ್ಕನೇ ಬಾರಿಗೆ ಖಂಡಾಂತರ ಕ್ರೀಡಾಕೂಟದಲ್ಲಿ ಭಾರತವನ್ನು ಪ್ರತಿನಿಧಿಸಲು ಸಿದ್ಧರಾಗುತ್ತಿದ್ದಾರೆ. ಪ್ಯಾರಾಲಿಂಪಿಕ್ಸ್, ಕಾಮನ್‌ವೆಲ್ತ್ ಗೇಮ್ಸ್ ಮತ್ತು ವಿಶ್ವ ಚಾಂಪಿಯನ್‌ಶಿಪ್‌ಗಳಲ್ಲಿ ಸ್ಪರ್ಧಿಸಿರುವ ಅವರು, ಪ್ಯಾರಾ ಈಜು ಕ್ರೀಡೆಯ ಅತ್ಯಂತ ದೊಡ್ಡ ಸ್ಪರ್ಧೆಗಳಲ್ಲಿ ಅಪಾರ ಅನುಭವವನ್ನು ಗಳಿಸಿದ್ದಾರೆ.

ಆದರೂ, ಕ್ರೀಡೆಯ ಒಂದು ಭಾಗವೆಂದು ಅವರು ಪರಿಗಣಿಸುವ ಆತಂಕ ಮತ್ತು ಭಾರತದ ಜೆರ್ಸಿ ಧರಿಸುವಾಗ ಉಂಟಾಗುವ ಉತ್ಸಾಹ ಇಂದಿಗೂ ಬದಲಾಗಿಲ್ಲ. "ಇದು ನನ್ನ ಮೊದಲ ಸ್ಪರ್ಧೆಯಂತೆಯೇ ಭಾಸವಾಗುತ್ತಿದೆ. ಆದರೆ, ಉನ್ನತ ಮಟ್ಟದ ಕ್ರೀಡಾಕೂಟಗಳಲ್ಲಿ ದೇಶವನ್ನು ಪ್ರತಿನಿಧಿಸುವ ಅವಕಾಶವು ನನ್ನನ್ನು ಒಬ್ಬ ಉತ್ತಮ ಕ್ರೀಡಾಪಟುವಾಗಿ, ಉತ್ತಮ ಈಜುಪಟುವಾಗಿ ರೂಪಿಸಿದೆ," ಎಂದು ಹೇಳುವ ಮುಕುಂದ್, ಅಕ್ಟೋಬರ್ 19 ರಂದು ಜಪಾನ್‌ನ ನಗೋಯಾದಲ್ಲಿ ನಡೆಯಲಿರುವ ಏಷ್ಯನ್ ಪ್ಯಾರಾ ಗೇಮ್ಸ್‌ನಲ್ಲಿ ಸ್ಪರ್ಧಿಸಲು ಎದುರು ನೋಡುತ್ತಿದ್ದಾರೆ.





ಈ ಕ್ರೀಡಾಕೂಟಕ್ಕಾಗಿ, ಮುಕುಂದ್ ಮಲೇಷ್ಯಾದಲ್ಲಿ ಆಸ್ಟ್ರೇಲಿಯಾದ ಕೋಚ್ ಡಿಕ್ ಆರ್ವಿಲ್ಲೆ ಅವರ ಮಾರ್ಗದರ್ಶನದಲ್ಲಿ ಐದು ವಾರಗಳ ಕಾಲ ತರಬೇತಿ ಪಡೆದು ಬೆಂಗಳೂರಿಗೆ ಮರಳಿದ್ದಾರೆ. ವಿದೇಶಗಳಲ್ಲಿ ಹೆಚ್ಚಿನ ಸಂಖ್ಯೆಯ ಸ್ಪರ್ಧೆಗಳು ನಡೆಯುತ್ತವೆ, ಆದರೆ ಭಾರತ ಅಥವಾ ಏಷ್ಯಾದಲ್ಲಿ ಸ್ಪರ್ಧೆಗಳ ಸಂಖ್ಯೆ ತುಂಬಾ ಕಡಿಮೆ. ಹೀಗಾಗಿ, ಯುರೋಪ್ ಅಥವಾ ಅಮೆರಿಕಕ್ಕೆ ಹೋಲಿಸಿದರೆ ಇಲ್ಲಿ ಸಿಗುವ ಸ್ಪರ್ಧಾತ್ಮಕ ಅನುಭವ ಬಹಳ ಕಡಿಮೆ ಎಂದು ಮುಕುಂದ್ ಹೇಳಿದ್ದಾರೆ.

ಮುಕುಂದ್ ಸ್ಪೈನಾ ಅವರಿಗೆ ಹುಟ್ಟಿನಿಂದಲೇ ಬೈಫಿಡಾ ಸಮಸ್ಯೆಯಿಂದ ಬಳಲುತ್ತಿದ್ದಾರೆ. ಇದು ಬೆನ್ನುಮೂಳೆಯ ಮತ್ತು ಅವರ ಎರಡೂ ಕಾಲುಗಳ ಮೇಲೆ ಪರಿಣಾಮ ಬೀರುವ ಸ್ಥಿತಿಯಾಗಿದೆ. ನಾನು ಹುಟ್ಟಿನಿಂದಲೇ 19 ಶಸ್ತ್ರಚಿಕಿತ್ಸೆಗಳಿಗೆ ಒಳಗಾಗಬೇಕಾಯಿತು. ಆಕ್ವಾ ಚಿಕಿತ್ಸೆಯ ಭಾಗವಾಗಿ ಈಜುವುದನ್ನು ಕೈಗೆತ್ತಿಕೊಂಡೆ. ಇದು ಸ್ಪರ್ಧಾತ್ಮಕ ಕ್ರೀಡೆಯಾಗಿ ಮಾರ್ಪಟ್ಟಿದೆ ಎಂದು ಅವರು ಹಂಚಿಕೊಂಡಿದ್ದಾರೆ. ಹಿನ್ನಡೆಗಳನ್ನು ರಸ್ತೆಯ ಅಂತ್ಯವೆಂದು ನೋಡಬಾರದು. "ಬಿಟ್ಟುಕೊಡಲು 99 ಮಾರ್ಗಗಳಿವೆ ಮತ್ತು ಮುಂದುವರಿಯಲು 1 ಕಾರಣವಿದೆ. ಯಾವಾಗಲೂ ಎರಡನೇ ಅವಕಾಶ ಇರುವುದರಿಂದ ನಾನು ಎರಡನೆಯದನ್ನು ಆರಿಸಿಕೊಳ್ಳುತ್ತೇನೆ ಎಂದರು. 2014ರಲ್ಲಿ ಸ್ಪರ್ಧಿಸಿದ್ದೆ. ಈಗ ಮತ್ತೆ 2026 ರಲ್ಲಿ ಅವಕಾಶ ಸಿಕ್ಕಿದೆ. ನಿಸ್ಸಂಶಯವಾಗಿ, ಅಲ್ಲಿ ಅತ್ಯುತ್ತಮ ಪ್ರದರ್ಶನ ನೀಡಲು ಮತ್ತು ದೇಶವನ್ನು ಹೆಮ್ಮೆಪಡುವಂತೆ ಮಾಡುತ್ತೇನೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

# ಮುಂದುವರಿದ ಸಮಿತಿ ಅಧ್ಯಕ್ಷರ ಆಯ್ಕೆ ಕಸರತ್ತು ಬಿಸಿಸಿಐ ಆಹ್ವಾನಕ್ಕೆ ಅನುಭವಿ ಆಟಗಾರರ ತಿರಸ್ಕಾರ

**ಮುಂಬೈ, ಅ.15:** ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ಆಯ್ಕೆ ಸಮಿತಿಯ ನೂತನ ಅಧ್ಯಕ್ಷರ ಆಯ್ಕೆ ಕಸರತ್ತು ಮುಂದುವರಿದಿದ್ದು, ಸುಮಾರು 100 ಟೆಸ್ಟ್ ಪಂದ್ಯಗಳನ್ನಾಡಿರುವ ಭಾರತದ ಕೆಲ ಸ್ಟಾರ್ ಕ್ರಿಕೆಟಿಗರೇ ಈ ಹುದ್ದೆಯ ಆಫರ್ ಅನ್ನು ತಿರಸ್ಕರಿಸಿದ್ದಾರೆ ಎಂದು ವರದಿಗಳು ತಿಳಿಸಿವೆ.

ಅಜಿತ್ ಅಗರ್ಕರ್ ಅವರ ಬಿಸಿಸಿಐ ಮುಖ್ಯ ಆಯ್ಕೆಗಾರರ ಅವಧಿ ಈ ತಿಂಗಳ ಆರಂಭದಲ್ಲಿ ಅಂತ್ಯಗೊಂಡ ಬಳಿಕ, ಅವರ ಉತ್ತರಾಧಿಕಾರಿಯ ಹುಡುಕಾಟ ಆರಂಭವಾಗಿದೆ. ಈ ನಡುವೆ ಪಶ್ಚಿಮ ವಲಯದ ಆಯ್ಕೆಗಾರ ಹುದ್ದೆಗೆ ಅರ್ಜಿ ಸಲ್ಲಿಸುವ ಗಡುವು ಬುಧವಾರ ಮುಕ್ತಾಯಗೊಂಡಿದೆ.

ವರದಿಗಳ ಪ್ರಕಾರ, ಪಾರ್ಥಿವ್ ಪಟೇಲ್ ಈ ಹುದ್ದೆಗೆ ಅರ್ಜಿ ಸಲ್ಲಿಸಿಲ್ಲ. ಈ ನಡುವೆ, ಕಿರಿಯರ ಪುರುಷರ ಆಯ್ಕೆ ಸಮಿತಿಯ ಅಧ್ಯಕ್ಷರಾಗಬಹುದು ಎಂದು ನಿರೀಕ್ಷಿಸಲಾಗಿದ್ದ ರಮೇಶ್ ಪವಾರ್, ಹಿರಿಯರ ಆಯ್ಕೆ ಸಮಿತಿಯ ಹುದ್ದೆಯ ರೇಸ್‌ಗೆ ಪ್ರವೇಶಿಸುವ ಸಾಧ್ಯತೆಯಿದೆ.

ವರದಿಯ ಪ್ರಕಾರ, ಭಾರತ ಕ್ರಿಕೆಟ್‌ನಲ್ಲಿ ವಿವಿಎಸ್ ಲಕ್ಷ್ಮಣ್ ಅವರ ಪ್ರಭಾವ ಹೆಚ್ಚುತ್ತಿರುವುದು ಪಾರ್ಥಿವ್ ಪಟೇಲ್ ಅರ್ಜಿ ಸಲ್ಲಿಸದಿರುವುದಕ್ಕೆ ಒಂದು ಕಾರಣವಾಗಿರಬಹುದು. ಬಿಸಿಸಿಐ ಕಾರ್ಯದರ್ಶಿ ದೇವಜಿತ್ ಸೈಕಿಯಾ ಇತ್ತೀಚೆಗೆ, ಸೆಂಟರ್ ಆಫ್ ಎಕ್ಸಲೆನ್ಸ್ ಮುಖ್ಯಸ್ಥರಾಗಿರುವ ಲಕ್ಷ್ಮಣ್ ಎಲ್ಲ ಆಯ್ಕೆ ಸಮಿತಿ ಸಭೆಗಳಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದ್ದರು. ಪಾರ್ಥಿವ್ ಪಟೇಲ್ ಅರ್ಜಿ ಸಲ್ಲಿಸದ ಹಿನ್ನೆಲೆಯಲ್ಲಿ, ಪ್ರಜ್ಞಾನ್ ಓಜಾ ಹಂಗಾಮಿ ಆಯ್ಕೆ ಸಮಿತಿ ಅಧ್ಯಕ್ಷರಾಗಿ ಮುಂದುವರಿಯಬಹುದು ಎಂಬ ವರದಿಗಳೂ ಪ್ರಕಟವಾಗಿವೆ.

**ಬಜೆಟ್ ಹೆಚ್ಚಿಸಿದ ಬಿಸಿಸಿಐ**

ಆಯ್ಕೆ ಸಮಿತಿಯ ಅಧ್ಯಕ್ಷ ಸ್ಥಾನಕ್ಕೆ ಘಟಾನುಘಟಿ ಮಾಜಿ ಕ್ರಿಕೆಟಿಗರನ್ನು ನೇಮಿಸಲು ಬಿಸಿಸಿಐ ಬಯಸಿದ್ದು, ಸಂಭಾವನೆ ನೀತಿಯಲ್ಲೂ ಈಗ ಹೊಂದಾಣಿಕೆ ಮಾಡಿಕೊಳ್ಳಲು ಸಿದ್ಧವಾಗಿದೆ ಎಂದು ವರದಿ ತಿಳಿಸಿದೆ.

ಆರ್.ಪಿ. ಸಿಂಗ್ ಮತ್ತು ಪ್ರಜ್ಞಾನ್ ಓಜಾ ಆಯ್ಕೆ ಸಮಿತಿಗೆ ಸೇರಿದ ಬಳಿಕ, ಸಮಿತಿಯ ವೆಚ್ಚದ ಬಜೆಟ್ ಅನ್ನು ಬಿಸಿಸಿಐ 3 ಕೋಟಿ ರೂ.ಗಳನ್ನು 17.45 ಕೋಟಿ ರೂಗೆ ಏರಿಸಿತ್ತು. ಇದೀಗ ಸಮಿತಿಯ ವೆಚ್ಚದ ಬಜೆಟ್ ಅನ್ನು 2025-26ರ 17.45 ಕೋಟಿಯಿಂದ 2026-27ಕ್ಕೆ 19.35 ಕೋಟಿ ರೂಗೆ ಹೆಚ್ಚಿಸಿದೆ ಎಂದು ವರದಿ ತಿಳಿಸಿದೆ.